ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು –೧೫೩

**ಪಟ್ಟಿ – ೧೨**

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಸೋಮವಾರ, ದಿನಾಂಕ : ೨೭ನೇ ಮಾರ್ಚ್, ೨೦೧೭

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

೨. ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು.

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೬. ವೈದ್ಯಕೀಯ ಶಿಕ್ಷಣ ಸಚಿವರು.

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

---

## ವಸತಿ ನಿಲಯಗಳ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು):–**

೧೭೯೧ (೧೬೮೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಿಂದುಳಿದ ಮತ್ತು ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಡಿಯಲ್ಲಿರುವ ವಿದ್ಯಾರ್ಥಿ ವಸತಿ ನಿಲಯಗಳ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ವಸತಿ ನಿಲಯಗಳು ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿರುವುದು ನಿಜವೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಈ ವಸತಿ ನಿಲಯಗಳಲ್ಲಿ ಅನೇಕ ವಸತಿ ನಿಲಯಗಳ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಈ) ವಸತಿ ನಿಲಯಗಳ ದುರಸ್ಥಿ ಕಾರ್ಯ ಕೈಗೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಖರ್ಚಾದ ಮೊತ್ತವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ನಿರುದ್ಯೋಗಿಗಳಿಗೆ ಗ್ರಾಮ ರಾಯಭಾರಿ ಪಟ್ಟದ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು):–**

೧೭೯೨ (೧೫೬೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಯೋಜನೆಯಿಂದ ವಿದ್ಯಾವಂತ ನಿರುದ್ಯೋಗಿಗಳನ್ನು ಗ್ರಾಮ ರಾಯಭಾರಿಗಳಿಗಾಗಿ ಬಳಸಿಕೊಳ್ಳಲು ಸರ್ಕಾರ ನಿರ್ಧರಿಸಿದೆಯೇ ;

(ಆ) ‘ಈ ಗ್ರಾಮ ರಾಯಭಾರಿ’ಯಲ್ಲಿ ಒಟ್ಟು ಎಷ್ಟು ತಾಲ್ಲೂಕುಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ;

(ಇ) ಈ ಯೋಜನೆಯ ಮೂಲ ಉದ್ದೇಶವೇನು ;

(ಈ) ಉದ್ಯೋಗ ಅರಸಿ ನಗರ/ಪಟ್ಟಣಗಳಿಗೆ ವಲಸೆ ಹೋಗುವುದನ್ನು ತಡೆಯುವುದು ಹಳ್ಳಿಯಲ್ಲಿ ಉದ್ಯೋಗ ಸೃಷ್ಟಿಸುವುದು ಗ್ರಾಮ ಮಟ್ಟದಲ್ಲಿ ಅಗತ್ಯ ಸೇವೆಯನ್ನು ಅರ್ಹರಿಗೆ ತಲುಪಿಸುವ ಉದ್ದೇಶದೊಂದಿಗೆ ಯುವಕರಿಗೆ ಈ ಯೋಜನೆಯಲ್ಲಿ ಸಕ್ರಿಯಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಶಿವರಾಮ ಕಾರಂತರ ಮನೆಯ ನವೀಕರಣ ಪುನಶ್ಚೇತನ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು):–**

೧೭೬೩ (೧೫೫೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಡಲ ತೀರದ ಭಾರ್ಗವ ಡಾ: ಕೆ. ಶಿವರಾಮ ಕಾರಂತರ ಮನೆಯ ಪುನಶ್ಚೇತನ ಕಾರ್ಯ ಮುಗಿದು ೨ ತಿಂಗಳು ಕಳೆದರೂ ಉದ್ಘಾಟನೆ ಮಾಡದೇ ಇರಲು ಕಾರಣವೇನು ;

(ಆ) ಕಾರಂತರ ಜ್ಞಾನಪೀಠ ಪ್ರಶಸ್ತಿ ಈಗ ಎಲ್ಲಿರಿಸಲಾಗಿರುತ್ತದೆ ;

(ಇ) ಕಾರಂತರ ಮನೆಯ ಪುನಶ್ಚೇತನ ಮಾಡಲು ಮಂಜೂರಾದ ಮೊತ್ತವೆಷ್ಟು ;

(ಈ) ಈ ಜ್ಞಾನಪೀಠ ಪ್ರಶಸ್ತಿಯು ಸಾರ್ವಜನಿಕರ ದರ್ಶನಕ್ಕೆ ಇಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ಕ್ರಮವೇನು ?

## ೨೦೧೩ರಿಂದ ಇಲ್ಲಿಯವರೆಗೂ ಹಿಂದುಳಿದ ವರ್ಗಗಳ/ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳ ಹಾಸ್ಟೆಲ್‌ಗಳಿಗೆ ಆಹಾರ ಪೂರೈಕೆ ನಡೆಸಿರುವ ಟೆಂಡರ್ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧೭೯೪ (೧೭೦೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ರಿಂದ ಇಲ್ಲಿಯವರೆಗೂ ಹಿಂದುಳಿದ ವರ್ಗಗಳ ಹಾಗೂ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳ ಹಾಸ್ಟೆಲ್‌ಗಳಿಗೆ ಆಹಾರ ಹಾಗೂ ಅಗತ್ಯ ವಸ್ತುಗಳ ಪೂರೈಕೆಗೆ ತೆಗೆದುಕೊಂಡಿರುವ ಕ್ರಮವೇನು ; (ವರ್ಷಾವಾರು ಮಾಹಿತಿ ನೀಡುವುದು)

(ಆ) ಈವರೆವಿಗೆ ನಡೆಸಿರುವ ಟೆಂಡರ್‌ಗಳ ಮತ್ತು ನೀಡಿರುವ ಟೆಂಡರ್‌ಗಳ ವಿವರ ನೀಡುವುದು ಸಂಸ್ಥೆಗೆ/ಯಾವ ವ್ಯಕ್ತಿಗೆ ಟೆಂಡರ್‌ಗಳನ್ನು ನೀಡಲಾಗಿದೆ ? (ಟೆಂಡರ್‌ಗಳ ಒಟ್ಟು ಮೊತ್ತದ ಹಾಗೂ ಖರೀದಿಸಿದ ಪ್ರತಿ ವಸ್ತುವಾರು ವಿವರ ನೀಡುವುದು)

## ಮಧುಮೇಹ ಪೀಡಿತರ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೯೫ (೧೭೫೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಧುಮೇಹದಿಂದ ಬಳಲುತ್ತಿರುವವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಮಧುಮೇಹ ನಿಯಂತ್ರಣ ಮತ್ತು ಜಾಗೃತಿ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಖಾಯಿಲೆಯಿಂದ ಬಳಲುತ್ತಿರುವವರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರಿಂದ, ಈ ಖಾಯಿಲೆಗೆ ಬೇಕಾಗುವ ಔಷಧಿಗಳನ್ನು ಕಡಿಮೆ ದರದಲ್ಲಿ ರೋಗಿಗಳಿಗೆ ಲಭ್ಯವಾಗುವಂತೆ ಮಾಡಲು ಸರ್ಕಾರ ಚಿಂತಿಸುವುದೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಈ) ಈ ಖಾಯಿಲೆಯಿಂದ ಬಳಲುತ್ತಿರುವ ಹಿರಿಯ ನಾಗರಿಕರಿಗೆ ಉಚಿತವಾಗಿ ಔಷಧಿ ದೊರಕುವಂತೆ ಮಾಡಲು ಸರ್ಕಾರ ಮುಂದಾಗುವುದೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಉ) ಹಾಗಿಲ್ಲದಿದ್ದಲ್ಲಿ, ಈ ಖಾಯಿಲೆಯ ಔಷಧಿಗಳ ದರಗಳನ್ನಾದರೂ ಕಡಿಮೆ ಮಾಡಲು ಸರ್ಕಾರ ಚಿಂತಿಸುವುದೇ ? (ವಿವರ ನೀಡುವುದು)

## ಭಾಗ್ಯಲಕ್ಷ್ಮಿ ಯೋಜನೆಯ ಬಾಂಡ್ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೯೬ (೧೭೫೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಭಾಗ್ಯಲಕ್ಷ್ಮಿ ಯೋಜನೆಯಡಿ ಬಾಂಡ್ ವಿತರಿಸಲು ಬಾಕಿ ಇರುವ ಪ್ರಕರಣಗಳೆಷ್ಟು ;

(ಆ) ಬಾಕಿ ಇರುವ ಫಲಾನುಭವಿಗಳಿಗೆ ಬಾಂಡ್‌ಗಳನ್ನು ಯಾವಾಗ ವಿತರಿಸಲಾಗುವುದು ; ಬಾಕಿ ಇರಲು ಕಾರಣವೇನು ;

(ಇ) ಭಾಗ್ಯಲಕ್ಷ್ಮಿ ಬಾಂಡ್ ಯೋಜನೆಯ ಫಲಾನುಭವಿ ಮೊತ್ತವನ್ನು ಪರಿಷ್ಕರಿಸಲು ಸರ್ಕಾರ ಉದ್ದೇಶಿಸಿದೆಯೇ ; ಹಾಗಿದ್ದಲ್ಲಿ ಎಷ್ಟು ಮೊತ್ತವನ್ನು ನಿಗದಿಪಡಿಸಲು ಸರ್ಕಾರ ಉದ್ದೇಶಿಸಿದೆ ; (ವಿವರ ನೀಡುವುದು)

(ಈ) ಈ ಫಲಾನುಭವಿಗಳ ಆಯ್ಕೆಯಾಗಿ ಕೆಲವೊಂದು ಮಾರ್ಗಸೂಚಿ ಮಾನದಂಡಗಳನ್ನು ಮಾರ್ಪಡಿಸಲು ಸರ್ಕಾರ ಚಿಂತಿಸಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ?

## ಸಮಾಜ ಕಲ್ಯಾಣ ಇಲಾಖೆಯಿಂದ ಹಮ್ಮಿಕೊಳ್ಳಲಾದ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)):–**

೧೭೭೭ (೧೭೫೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ನೀಡಲಾಗುವುದು ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ವಿವಿಧ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ;

(ಇ) ಇವುಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಕೈಗೊಂಡ ಅಭಿವೃದ್ಧಿ ಕಾರ್ಯಗಳಾವುವು ? (ಕಳೆದ ಮೂರು ವರ್ಷಗಳ ವಿವರ ನೀಡುವುದು)

## ಪ್ರವಾಸೋದ್ಯಮದ ಅಭಿವೃದ್ಧಿ ಕಾಮಗಾರಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)):–**

೧೭೭೮ (೧೭೫೨) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಸರ್ಕಾರ ನಿಗದಿಪಡಿಸಿದ ಅನುದಾನವೆಷ್ಟು ;

(ಆ) ಇದರಲ್ಲಿ ಮಂಜೂರಾದ ಮತ್ತು ಬಿಡುಗಡೆಯಾದ ಅನುದಾನವೆಷ್ಟು; ಯಾವ ಯಾವ ಯೋಜನೆಗಳಿಗೆ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯ ಮದ್ದೂರಿನ ಕೊಕ್ಕರೆ ಬೆಳ್ಳೂರಿನ ಪಕ್ಷಿಧಾಮ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಕಳೆದ ಮೂರು ವರ್ಷಗಳಲ್ಲಿ ಇದಕ್ಕೆ ಬಿಡುಗಡೆಯಾದ ಅನುದಾನವೆಷ್ಟು ; ಇದರಲ್ಲಿ ಖರ್ಚಾದ ಮತ್ತು ಉಳಿಕೆಯಾದ ಅನುದಾನವೆಷ್ಟು ; (ವಿವರ ನೀಡುವುದು)

(ಉ) ಈ ಪಕ್ಷಿಧಾಮವನ್ನು ಪ್ರವಾಸೋದ್ಯಮ ತಾಣವನ್ನಾಗಿಸಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಬಿ.ಪಿ.ಎಲ್ ಕಾರ್ಡ್ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)):–**

೧೭೯ (೧೭೫೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿತರಿಸಲಾಗಿರುವ ಪಡಿತರ ಚೀಟಿಗಳೆಷ್ಟು ; ಇವುಗಳಲ್ಲಿ ಬಿ.ಪಿ.ಎಲ್ ಮತ್ತು ಎ.ಪಿ.ಎಲ್. ಚೀಟಿಗಳೆಷ್ಟು ;

(ಆ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿತರಣೆ ಮಾಡಿದ ಪಡಿತರ ಚೀಟಿಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಪ್ರಸ್ತುತ ಜಾರಿಯಲ್ಲಿರುವ ಪದ್ಧತಿಯಿಂದ ಆಹಾರ ಪದಾರ್ಥಗಳನ್ನು ಸಾರ್ವಜನಿಕರಿಗೆ ವಿತರಣೆ ಮಾಡುವಲ್ಲಿ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಈ) ಬೋಗಸ್ ಪಡಿತರ ಚೀಟಿಗಳ ಸೃಷ್ಠಿಯಲ್ಲಿ ನೌಕರ/ಅಧಿಕಾರಿಗಳ ಕೈವಾಡವಿದೆಯೇ ; ಹಾಗಿದ್ದಲ್ಲಿ, ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಎಂ.ಸಿ.ಐ (MCI) ನಿಯಮದ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೮೦೦ (೧೭೩೨) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಬೋಧಕ ಆಸ್ಪತ್ರೆಗಳು ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಬೋಧಕ ಆಸ್ಪತ್ರೆಗಳ ಆಡಳಿತಾತ್ಮಕ, ಹಣಕಾಸು ಹಾಗೂ ಶಿಸ್ತುಕ್ರಮ ಜರುಗಿಸುವ ಅಧಿಕಾರ ಯಾವ ಇಲಾಖೆಯ ವ್ಯಾಪ್ತಿಯಲ್ಲಿದೆ ; (ಸಂಪೂರ್ಣ ವಿವರ ಸಂಸ್ಥೆವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಸದರಿ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಬೋಧಕ ಆಸ್ಪತ್ರೆಗಳ ಆಡಳಿತದ ವ್ಯಾಪ್ತಿಯಲ್ಲಿ ಸರ್ಕಾರ ಹಾಗೂ ಇಲಾಖೆಗಳಲ್ಲಿ ಗೊಂದಲಗಳೇನಾದರೂ ಇವೆಯೇ ; ಇದ್ದರೆ ಈ ನಿಟ್ಟಿನಲ್ಲಿ ಎಂ.ಸಿ.ಐ (MCI) ವರದಿಗಳೇನಾದರೂ ಸಲ್ಲಿಸಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ಇರುವ ಗೊಂದಲಗಳನ್ನು ಸರಿಪಡಿಸಿ ಎಂ.ಸಿ.ಐ (MCI) ನಿಯಮದ ಪ್ರಕಾರ ಇಲಾಖೆಯಲ್ಲಿ ಕ್ರಮಕೈಗೊಳ್ಳಲು ಸರ್ಕಾರ ಮುಂದಾಗುವುದೇ ; ಈ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಖಾಲಿ ಹುದ್ದೆಗಳಿಂದ ಅಭಿವೃದ್ಧಿ ಕುಂಠಿತವಾಗುತ್ತಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೮೦೧ (೧೭೨೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೩೭೧ (ಜೆ) ಅಡಿಯ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಸ್ಥಾಪನೆಯಾದಾಗಿನಿಂದ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಸದರಿ ಮಂಡಳಿಯಲ್ಲಿ ಬಹಳಷ್ಟು ಹುದ್ದೆಗಳು ಖಾಲಿ ಇರುವುದರಿಂದ, ಮಂಡಳಿಯ ಕಾರ್ಯಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿ ಅಭಿವೃದ್ಧಿ ಕುಂಠಿತವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ;

(ಇ) ಈ ನ್ಯೂನತೆಯನ್ನು ಸರಿಪಡಿಸಿ ಅನುದಾನವನ್ನು ನಿರೀಕ್ಷಿತ ಮಟ್ಟದಲ್ಲಿ ಕಾಲಮಿತಿಯೊಳಗೆ ಸದ್ಬಳಕೆಯಾಗುವ ನಿಟ್ಟಿನಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಮುಂದಾಗುವುದೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ? (ಮಾಹಿತಿ ನೀಡುವುದು)

## ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕುಟುಂಬಗಳಿಗೆ ಶಸ್ತ್ರ ಚಿಕಿತ್ಸೆ ವೆಚ್ಚ ಭರಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೮೦೨ (೧೭೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎ.ಪಿ.ಎಲ್ ಹಾಗೂ ಬಿ.ಪಿ.ಎಲ್ ಕುಟುಂಬಗಳಿಗೆ ಶಸ್ತ್ರ ಚಿಕಿತ್ಸಾ ವೆಚ್ಚ ಭರಿಸುವ ರಾಜ್ಯ ಸರ್ಕಾರದ ಯೋಜನೆಗಳು ಯಾವುವು ; ಹಾಗೂ ಗುರುತಿಸಲಾದ ಆಸ್ಪತ್ರೆಗಳು ಯಾವುವು ; (ಜಿಲ್ಲಾವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಸದರಿ ಸೌಲಭ್ಯಗಳನ್ನು ಪಡೆಯಲು ಇರುವ ಮಾನದಂಡಗಳೇನು ಹಾಗೂ ಇಲ್ಲಿಯವರೆಗೆ ಎಷ್ಟು ಎ.ಪಿ.ಎಲ್ ಹಾಗೂ ಬಿ.ಪಿ.ಎಲ್ ಕುಟುಂಬಗಳು ಯೋಜನೆಗಳ ಲಾಭ ಪಡೆದುಕೊಂಡಿವೆ ; (ಜಿಲ್ಲಾವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಸಾರ್ವಜನಿಕರಿಗೆ ಈ ಯೋಜನೆಗಳ ಲಾಭ ಪಡೆದುಕೊಳ್ಳಲು ಸರ್ಕಾರವು ಅನುಸರಿಸಿದ ಕ್ರಮಗಳು ಯಾವುವು ? (ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದಲ್ಲಿ 'ವಿವೇಚನಾ ನಿಧಿ' ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೮೦೩ (೧೭೨೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೩೭೧ (ಜೆ) ಅಡಿಯ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದಲ್ಲಿ ಮುಖ್ಯಮಂತ್ರಿ ವಿವೇಚನಾ ನಿಧಿ, ಸರ್ಕಾರದ ವಿವೇಚನಾ ನಿಧಿ ಹಾಗೂ ಅಧ್ಯಕ್ಷರ ವಿವೇಚನಾ ನಿಧಿ ಇರುವ ಸಂಗತಿ ಸರ್ಕಾರದ ಗಮನಕ್ಕೆ ಇದೆಯೇ ; ಇದ್ದರೆ, ಪ್ರತ್ಯೇಕ ಶೇಕಡಾವಾರು ಮಾಹಿತಿ ನೀಡುವುದು ;

(ಆ) ಸದರಿ ಮಂಡಳಿಯಲ್ಲಿ ೨೦೧೩–೧೪ ರಿಂದ ೨೦೧೬–೧೭ ರವರೆಗೆ ಮುಖ್ಯಮಂತ್ರಿ ವಿವೇಚನಾ ನಿಧಿ ಸರ್ಕಾರದ ವಿವೇಚನಾ ನಿಧಿ ಹಾಗೂ ಅಧ್ಯಕ್ಷರ ವಿವೇಚನಾ ನಿಧಿಗಳಿಗೆ ನಿಗಧಿಪಡಿಸಿದ ಮೊತ್ತ/ಅನುದಾನ ಎಷ್ಟು ? (ವರ್ಷಾವಾರು, ವಿವೇಚನಾ ನಿಧಿವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಸದರಿ ಮಂಡಳಿಯಲ್ಲಿ ೨೦೧೩–೧೪ ರಿಂದ ೨೦೧೬–೧೭ ರವರೆಗೆ ಮುಖ್ಯಮಂತ್ರಿ ವಿವೇಚನಾ ನಿಧಿ, ಸರ್ಕಾರದ ವಿವೇಚನಾ ನಿಧಿ ಹಾಗೂ ಅಧ್ಯಕ್ಷರ ವಿವೇಚನಾ ನಿಧಿಯಲ್ಲಿ ಆದಂತಹ ಖರ್ಚು ಎಷ್ಟು ; (ವರ್ಷಾವಾರು, ವಿವೇಚನಾ, ನಿಧಿವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಈ) ಸದರಿ ಮಂಡಳಿಯಲ್ಲಿ ೨೦೧೩–೧೪ ರಿಂದ ೨೦೧೬–೧೭ ರವರೆಗೆ ಮುಖ್ಯಮಂತ್ರಿ ವಿವೇಚನಾ ನಿಧಿ, ಸರ್ಕಾರದ ವಿವೇಚನಾ ನಿಧಿ, ಹಾಗೂ ಅಧ್ಯಕ್ಷರ ವಿವೇಚನಾ ನಿಧಿಗಳಲ್ಲಿ ಕೈಗೊಂಡಂತಹ ಕಾಮಗಾರಿಗಳು ಎಷ್ಟು ; ಮತ್ತು ಯಾವುವು ? (ವಿವೇಚನಾ ನಿಧಿವಾರು, ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಜಿಲ್ಲಾ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಔಷಧಿ ಒದಗಿಸುವ ವ್ಯವಸ್ಥೆ ಹಾಗೂ "ಸ್ಟಂಟ್" ಗಳ ದರಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೮೦೪ (೧೭೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಜಿಲ್ಲಾ ಆಸ್ಪತ್ರೆಗಳಲ್ಲಿ ರೋಗಿಗಳ ಸೌಲಭ್ಯಕ್ಕಾಗಿ ಔಷಧಿ ಒದಗಿಸುವ ವ್ಯವಸ್ಥೆ ಇದೆಯೇ ; ಇದ್ದಲ್ಲಿ, ವಿವರವಾದ ಮಾಹಿತಿ ನೀಡುವುದು ;

(ಆ) ಸದರಿ ಜಿಲ್ಲಾ ಆಸ್ಪತ್ರೆಗಳಲ್ಲಿ ಜೀವ ರಕ್ಷಣೆಯ ಔಷಧಿಗಳ ಕೊರತೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ನಿಟ್ಟಿನಲ್ಲಿ ದೂರುಗಳೇನಾದರೂ ಬಂದಿವೆಯೇ ; ಬಂದಿದ್ದರೆ, ದೂರುಗಳ ಬಗ್ಗೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಇತ್ತೀಚೆಗೆ ಕೇಂದ್ರ ಸರ್ಕಾರವು ಹೃದಯ ಸಂಬಂಧಿ ಖಾಯಿಲೆಗಳಿಗೆ ಬಳಸುವ "ಸ್ಟಂಟ್"ಗಳ ದರಗಳು ಭಾರಿ ಪ್ರಮಾಣದಲ್ಲಿ ಇಳಿಕೆ ಮಾಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ದರ ಇಳಿಕೆಯಾದ ನಂತರ ಎಷ್ಟು ಹೃದಯ ಸಂಬಂಧಿ ರೋಗಿಗಳಿಗೆ ಇದರ ಪ್ರಯೋಜನ ಆಗಿವೆ ; ಈ "ಸ್ಟಂಟ್" ಮೊದಲಿನ ಹಾಗೂ ಪ್ರಸ್ತುತ ದರ ಎಷ್ಟು ; (ಮಾಹಿತಿ ನೀಡುವುದು)

(ಈ) ಸರ್ಕಾರಿ ಜಿಲ್ಲಾ ಆಸ್ಪತ್ರೆಗಳಲ್ಲಿ ಜನರಿಗೆ ಔಷಧಿ ಮಳಿಗೆಗಳು ಸ್ಥಾಪಿಸಲಾಗಿ ರೋಗಿಗಳಿಗೆ ಎಲ್ಲಾ ತರಹದ ಔಷಧಿಗಳು ಲಭ್ಯವಾಗುತ್ತಿವೆಯೇ ? (ಇದ್ದರೆ, ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಜಾತಿ ಗಣತಿ ವರದಿ ಪ್ರಕಟಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೧೮೦೫ (೧೭೪೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿವಿಧ ಜಾತಿ, ಉಪಜಾತಿಗಳ ಗಣತಿ ಮಾಡಲು ಸರ್ಕಾರ ಯಾವ ದಿನಾಂಕದಂದು ಆದೇಶ ಹೊರಡಿಸಲಾಯಿತು ;

(ಆ) ಜಾತಿ ಗಣತಿಗೆ ಇಲ್ಲಿಯವರೆಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ;

(ಇ) ಜಾತಿ, ಉಪಜಾತಿಗಳ ಗಣತಿ ಕಾರ್ಯ ಮುಕ್ತಾಯವಾಗಿದೆಯೇ ;

(ಈ) ಮುಕ್ತಾಯವಾಗಿದ್ದಲ್ಲಿ, ಜಾತಿ ಗಣತಿ ವರದಿಯನ್ನು ಸರ್ಕಾರ ಇದುವರೆಗೆ ಪ್ರಕಟಿಸದಿರಲು ಕಾರಣಗಳೇನು ;

(ಉ) ಜಾತಿ ಗಣತಿಯನ್ನು ಯಾವಾಗ ಸಾರ್ವಜನಿಕ ಮಾಹಿತಿಗಾಗಿ ಪ್ರಕಟಿಸಲಾಗುವುದು ?

## ಹೊಸ ಪಿಂಚಣಿ ಯೋಜನೆಯನ್ನು ಅಳವಡಿಸುವುದು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೧೮೦೬ (೧೬೮೭) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ನೌಕರರಿಗೆ ದಿನಾಂಕ: ೦೧–೦೪–೨೦೦೬ರಿಂದ ಜಾರಿಯಲ್ಲಿರುವ ಹೊಸ ಪಿಂಚಣಿ ಯೋಜನೆಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳಲ್ಲಿ ದಿನಾಂಕ: ೦೧–೦೪–೨೦೦೬ರ ನಂತರ ಖಾಯಂ ಆಗಿ ನೇಮಕಗೊಂಡ ಬೋಧಕ / ಬೋಧಕೇತರ ಸಿಬ್ಬಂದಿಗೆ ಅಳವಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ದಿನಾಂಕ: ೦೧-೦೪-೨೦೦೬ರಿಂದ ಈ ದಿನದವರೆಗೆ ಸದರಿ ಸಿಬ್ಬಂದಿಗಳಿಗೆ ಸರ್ಕಾರದ ವತಿಯಿಂದ ನೀಡಬೇಕಾದ ಮೊತ್ತವೆಷ್ಟು ; ೨೦೧೬-೧೭ನೇ ಸಾಲಿನ ಆಯವ್ಯಯದಲ್ಲಿ ಭರಿಸಲು ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಸರ್ಕಾರದ ನಿಲುವೇನು ?

## ಹಾವೇರಿ ಜಿಲ್ಲಾ ಕ್ಷಯ ರೋಗ ಹಾಗೂ ಏಡ್ಸ್ ನಿಯಂತ್ರಣಾಧಿಕಾರಿಗಳ ಅವ್ಯವಹಾರಗಳ ತನಿಖೆ ನಡೆಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೧೮೦೭ (೧೭೪೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾವೇರಿ ಜಿಲ್ಲಾ ಕ್ಷಯ ರೋಗ ನಿಯಂತ್ರಣಾಧಿಕಾರಿಗಳು ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಇವರ ವಿರುದ್ಧ ಹಣಕಾಸು ದುರುಪಯೋಗ, ಆಡಳಿತಾತ್ಮಕ ತಪ್ಪುಗಳು, ರಾಷ್ಟ್ರೀಯ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ನಿರ್ಲಕ್ಷತೆ, ದೈಹಿಕ ಮತ್ತು ಮಾನಸಿಕ ಕಿರುಕುಳ ಹಾಗೂ ಸರ್ವಾಧಿಕಾರಿ ಧೋರಣೆ ದೂರುಗಳು ಬಂದಿರುವುದು ನಿಜವೇ ;

(ಆ) ಬಂದಿದ್ದಲ್ಲಿ, ಸರ್ಕಾರ ಇವರ ವಿರುದ್ಧ ಇಲ್ಲಿಯವರೆಗೆ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಇ) ಇವರಿಂದ ಸರ್ಕಾರಕ್ಕೆ ಎಷ್ಟು ಆರ್ಥಿಕ ನಷ್ಟ ಉಂಟಾಗಿದೆ ;

(ಈ) ಆರ್ಥಿಕ ನಷ್ಟ ಹಾಗೂ ಇತರೆ ಆಡಳಿತಾತ್ಮಕ ತಪ್ಪುಗಳ ಬಗ್ಗೆ ಸದರಿಯವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು ?

## ಸಂಸ್ಕೃತಿ ಉತ್ಸವ ಹಾಗೂ ಬೃಹತ್ ಜಾತ್ರಾ ಮಹೋತ್ಸವಕ್ಕೆ ಸಹಾಯಧನ ಒದಗಿಸುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೦೮ (೧೬೬೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಂಸ್ಕೃತಿ ಉತ್ಸವ ಮತ್ತು ಬೃಹತ್ ಜಾತ್ರೆಗಳಿಗೆ ಎಷ್ಟು ಸಹಾಯಧನವನ್ನು ಸರ್ಕಾರದಿಂದ ನೀಡಲಾಗುತ್ತಿದೆ ; (ವಿವರ ನೀಡುವುದು)

(ಆ) ಹಿಂದಿನ ಸರ್ಕಾರದ ಅವಧಿಯಲ್ಲಿ ವಿಜಯಪುರದ ಶ್ರೀ ಸಿದ್ದೇಶ್ವರ ಸಂಸ್ಥೆಯ ಜಾತ್ರೆ ಮಹೋತ್ಸವಕ್ಕೆ ಸಹಾಯಧನ ರೂಪದಲ್ಲಿ ನೀಡಿದ್ದು, ಈಗ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾರಣಕ್ಕೆ ಸ್ಥಗಿತಗೊಳಿಸಲಾಗಿದೆ ; ಮತ್ತು ಮುಂದುವರೆಸುವ ಕುರಿತು ಸರ್ಕಾರದ ಚಿಂತನೆ ಏನು ; (ವಿವರ ನೀಡುವುದು)

(ಇ) ಜಾತ್ರೆ ಉತ್ಸವವನ್ನು ಪ್ರೋತ್ಸಾಹಿಸುವ ಉದ್ದೇಶ ಸರ್ಕಾರ ಮುಂದಿದೆಯೇ ? (ವಿವರ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯಿಂದ ಮೀಸಲಿಟ್ಟಿರುವ ಹಣ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೦೯ (೧೬೬೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಾಗಿ ಸಮಾಜ ಕಲ್ಯಾಣ ಇಲಾಖೆಯಿಂದ ಎಷ್ಟು ಹಣ ಮೀಸಲಿರಿಸಲಾಗಿದೆ ; ಯಾವ ಯಾವ ಯೋಜನೆಯಡಿ ಅವಳಿ ಜಿಲ್ಲೆಗಳಿಗೆ ಹಣ ಖರ್ಚು ಮಾಡಲಾಗಿದೆ ; ಉಳಿದ ಹಣವೆಷ್ಟು ; ಉಳಿದ ಹಣವನ್ನು ಸರ್ಕಾರವು ಇತರೆ ಯಾವ ಯಾವ ಯೋಜನೆಗೆ ಬಳಸಿಕೊಂಡಿದೆ ? (ಸಂಪೂರ್ಣ ವಿವರ ನೀಡುವುದು)

## ಹೊಸ ಪಡಿತರ ಚೀಟಿ ವಿತರಣೆ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೧೦ (೧೬೬೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೊಸ ಪಡಿತರ ಚೀಟಿ ಮಾಡದಿರುವುದರಿಂದ ನೈಜ ಫಲಾನುಭವಿಗಳಿಗೆ ತೊಂದರೆಯಾಗುತ್ತಿದೆ ಎಂಬ ಗಂಭೀರ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈಗಾಗಲೇ ಸಲ್ಲಿಸಲಾಗಿರುವ ಪಡಿತರ ಚೀಟಿ ಬಳಕೆದಾರರಿಗೆ ಹೊಸ ಪಡಿತರ ಚೀಟಿಗಳನ್ನು ಯಾವಾಗ ನೀಡಲು ಪ್ರಾರಂಭಿಸಲಾಗುವುದು ; (ವಿವರ ನೀಡುವುದು)

(ಆ) ಆಹಾರ ಇಲಾಖೆಯಲ್ಲಿ ಆಹಾರ ನಿರೀಕ್ಷಕರು ಮತ್ತು ಶಿರಸ್ತೇದಾರರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಭರ್ತಿ ಮಾಡಲು ವಿಳಂಬವಾಗಲು ಕಾರಣವೇನು ; ಯಾವ ಕಾಲಮಿತಿಯೊಳಗೆ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ; (ವಿವರ ನೀಡುವುದು)

(ಇ) ಅನೇಕ ಸಿಬ್ಬಂದಿಗಳು ಪದೋನ್ನತಿಯಿಲ್ಲದೆ ನಿವೃತ್ತಿ ಹೊಂದಿರುವುದು ಕಂಡು ಬಂದಿದ್ದು, ಈಗಿರುವ ಸಿಬ್ಬಂದಿಗಳಿಗೆ ಜೇಷ್ಠತೆ ಆಧಾರದ ಮೇಲೆ ಪದೋನ್ನತಿಯನ್ನು ನೀಡಲಾಗುತ್ತಿದೆಯೇ ? (ವಿವರವಾದ ಮಾಹಿತಿ ನೀಡುವುದು)

## ಭೂ ಒಡೆತನ ಯೋಜನೆಯಲ್ಲಿನ ಅವ್ಯವಹಾರದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೧೧ (೧೬೬೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಿಗೆ ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಭೂ ಒಡೆತನ ಯೋಜನೆಯಡಿ ೨೦೦೪ ರಿಂದ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; ಫಲಾನುಭವಿಗಳ ಹೆಸರು ಮತ್ತು ವಿಳಾಸ ಸಹಿತ ವಿವರವಾದ ಮಾಹಿತಿ ನೀಡುವುದು ;

(ಆ) ಈ ಫಲಾನುಭವಿಗಳನ್ನು ಆಯ್ಕೆ ಮಾಡುವಲ್ಲಿ ಸರ್ಕಾರದ ಮಾನದಂಡಗಳೇನು ; (ವಿವರ ನೀಡುವುದು)

(ಇ) ಭೂ ಒಡೆತನ ಯೋಜನೆಯಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ನಕಲಿ ಪ್ರಮಾಣ ಪತ್ರವನ್ನು ಸೃಷ್ಟಿಸಿ ಜಮೀನು ಹೊಂದಿರುವವರನ್ನೇ ಆಯ್ಕೆ ಮಾಡುವಲ್ಲಿ ಕೆಲವು ಅಧಿಕಾರಿಗಳು ಸೇರಿ ಭಾರಿ ಅವ್ಯವಹಾರ ಮಾಡಲಾಗಿದೆ ಎಂಬ ಗಂಭೀರ ಆರೋಪ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗಿದೆಯೇ ; ಕ್ರಮ ಜರುಗಿಸದಿದ್ದರೆ, ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಸಂಪೂರ್ಣವಾಗಿ ತನಿಖೆ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ ; ಇದ್ದರೆ, ಯಾವ ಕಾಲಮಿತಿಯೊಳಗೆ ತನಿಖೆ ಮಾಡಲಾಗುವುದು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಸೋಷಿಯಲ್ ಆಡಿಟ್ ಕೋಶ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೧೨ (೧೬೭೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಸಮಾಜ ಕಲ್ಯಾಣ ಇಲಾಖೆಯಲ್ಲಿ ಸೋಷಿಯಲ್ ಆಡಿಟ್ ಕೋಶವನ್ನು ಪ್ರಾರಂಭಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಇದರ ರೂಪುರೇಷೆಗಳೇನು ; (ವಿವರ ನೀಡುವುದು)

(ಇ) ಈ ಕೋಶ ಎಂದಿನಿಂದ ಕಾರ್ಯನಿರ್ವಹಿಸುತ್ತಿದೆ ; ಹಾಗೂ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಖಾಸಗಿ ಮತ್ತು ಸರ್ಕಾರಿ ನೇತ್ರ ಬ್ಯಾಂಕುಗಳ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೧೩ (೧೬೭೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಮತ್ತು ಸರ್ಕಾರಿ ನೇತ್ರ ಬ್ಯಾಂಕುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಾರ್ನಿಯ ಸಮಸ್ಯೆಯಿಂದ ದೃಷ್ಠಿ ಕಳೆದುಕೊಳ್ಳುತ್ತಿರುವವರ ಸಂಖ್ಯೆ ಅಧಿಕವಾಗುತ್ತಿದ್ದು, ಇದಕ್ಕೆ ಪೂರಕವಾಗಿ ಸರಕಾರ ಕೈಗೊಂಡಿರುವ ಕ್ರಮವೇನು ? (ವಿವರವಾದ ವರದಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೧೪ (೧೬೪೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಪ್ರಾರಂಭವಾದಾಗಿನಿಂದ ೨೦೧೩-೧೪ ಮತ್ತು ೨೦೧೬-೧೭ರಲ್ಲಿ ಇಲ್ಲಿಯವರೆವಿಗೂ ಮಂಜೂರಾಗಿರುವ ಅನುದಾನ ಎಷ್ಟು ; ಬಿಡುಗಡೆ ಮಾಡಿರುವ ಮೊತ್ತ ಎಷ್ಟು ;

(ಆ) ೨೦೧೩-೧೪ ಮತ್ತು ೨೦೧೬-೧೭ರ ವರೆಗೂ ಜಿಲ್ಲಾವಾರು ಮಂಜೂರಾಗಿರುವ ಅನುದಾನ ಎಷ್ಟು ? (ವಿವರ ನೀಡುವುದು)

## ರಾಯಚೂರು ಜಿಲ್ಲೆಗೆ ಸಮಾಜ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಅನುದಾನದ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-**

೧೮೧೫ (೧೬೪೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೬-೧೭ರಲ್ಲಿ ರಾಯಚೂರು ಜಿಲ್ಲೆಗೆ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡಗಳ ಜನಾಂಗಕ್ಕೆ ವಿವಿಧ ಯೋಜನೆಗಳ ಮುಖಾಂತರ ದೊರೆತಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ರಾಯಚೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸೇರಿರುವ ವಸತಿ ಶಾಲೆಗಳು ಎಷ್ಟು ; ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ಜಿಲ್ಲೆಯಲ್ಲಿ ಪ್ರಸ್ತುತ ಈಗಿರುವ ವಸತಿ ಶಾಲೆಗಳಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ ವಸತಿ ಶಾಲೆಗಳೆಷ್ಟು ? (ವಿವರ ನೀಡುವುದು)

## ತಾಲ್ಲೂಕು ಆಸ್ಪತ್ರೆ ಹಾಗೂ PHC ಕೇಂದ್ರಗಳಲ್ಲಿ ವೈದ್ಯರ ಕೊರತೆ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೧೬ (೧೬೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೧೭ (೧೬೫೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಶಿಕ್ಷಕರುಗಳ ಸಂಖ್ಯೆ ಎಷ್ಟು ; ಅಂಗನವಾಡಿಯಲ್ಲಿ ಓದುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ;

(ಆ) ಜಿಲ್ಲೆಯಲ್ಲಿ ಸ್ವಂತ ಕಟ್ಟಡಗಳು ಹೊಂದಿರುವ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳೆಷ್ಟು ? (ವಿವರ ನೀಡುವುದು)

## ರಾಯಚೂರಿನಲ್ಲಿರುವ ರಾಜೀವ್‌ಗಾಂಧಿ ಸೂಪರ್ ಸ್ಪೆಷಲಿಸ್ಟ್ ಆಸ್ಪತ್ರೆ ಹಾಗೂ RIMS ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೧೮ (೧೬೫೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರಿನಲ್ಲಿರುವ ರಾಜೀವ್‌ಗಾಂಧಿ ಸೂಪರ್ ಸ್ಪೆಷಲಿಸ್ಟ್ ಆಸ್ಪತ್ರೆ ಹಾಗೂ ರಿಮ್ಸ್ (RIMS) ಈ ಎರಡು ಆಸ್ಪತ್ರೆಗಳ ನಡುವೆ "ತುರ್ತು ಚಿಕಿತ್ಸಾ ಘಟಕವನ್ನು" ಪ್ರಾರಂಭಿಸಲು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ೨೦೧೬–೧೭ರಲ್ಲಿ ರಾಜೀವ್‌ಗಾಂಧಿ ಸೂಪರ್ ಸ್ಪೆಷಲಿಸ್ಟ್ ಆಸ್ಪತ್ರೆಗೆ ಸರ್ಕಾರದಿಂದ ಮಂಜೂರಾಗಿರುವ ಅನುದಾನ ಎಷ್ಟು ; ಸದರಿ ಆಸ್ಪತ್ರೆಯನ್ನು ನಿಗಧಿತ ಸಮಯದಲ್ಲಿ ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಜ್ಯದಲ್ಲಿ ಬಾಲ್ಯ ವಿವಾಹ ನಿಷೇಧ ಕಾಯಿದೆ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) ಹಾಗೂ ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೮೧೯ (೧೬೪೫+೧೭೬೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಬಾಲ್ಯ ವಿವಾಹ ನಿಷೇಧ ಕಾಯಿದೆ ೨೦೦೬ ರಂತೆ ಕರ್ನಾಟಕ ರಾಜ್ಯದಲ್ಲಿ ಜಿಲ್ಲಾವಾರು ಎಷ್ಟು ಬಾಲ್ಯ ವಿವಾಹಗಳನ್ನು ನಿಲ್ಲಿಸಲಾಗಿದೆ ; (ನಗರ, ಗ್ರಾಮೀಣ ಪ್ರದೇಶದ ವಿವರ ನೀಡುವುದು)

(ಆ) ಇತ್ತೀಚಿನವರೆಗೂ ಬಾಲ್ಯ ವಿವಾಹ ಪದ್ಧತಿಯು ಇನ್ನೂ ಜೀವಂತವಾಗಿರಲು ಕಾರಣಗಳೇನು ; ಈ ಬಗ್ಗೆ ಪೋಷಕರಲ್ಲಿ ಅರಿವು ಮೂಡಿಸಲು ಕೈಗೊಂಡಿರುವ ಕ್ರಮಗಳೇನು ;

(ಇ) ಇತ್ತೀಚೆಗೆ ತಿದ್ದುಪಡಿಯಾಗಿರುವ ಮಕ್ಕಳ ನ್ಯಾಯ (ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ ೨೦೧೫ರಲ್ಲಿ ಸೂಚಿಸಿರುವಂತೆ ಬಾಲ್ಯ ವಿವಾಹಗಳಿಗೆ ಈಡಾಗುವ ೧೮ ವರ್ಷದೊಳಗಿನ ಮಕ್ಕಳನ್ನು ಪೋಷಣೆ ಮತ್ತು ರಕ್ಷಣೆ ಅವಶ್ಯಕತೆ ಇರುವ ಮಕ್ಕಳೆಂದು ಗುರುತಿಸಿರುವುದರಿಂದ ಸರ್ಕಾರ ಇದನ್ನು ಜಾರಿಗೆ ತರಲು ಏನು ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಈ) ಬಾಲ್ಯವಿವಾಹಗಳನ್ನು ನಿಲ್ಲಿಸುವಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯನ್ನು ಬಿಟ್ಟು ಬೇರೆ ಇಲಾಖೆಗಳನ್ನು ಪ್ರತಿನಿಧಿಸುವ ಬಾಲ್ಯವಿವಾಹ ನಿಷೇಧ ಅಧಿಕಾರಿಗಳು (ಕಾಯಿದೆಯ ಸೆ.೧೬ ಅಧಿಕಾರಿಗಳು) ಮುಖ್ಯ ಪಾತ್ರವನ್ನು ವಹಿಸಿದ್ದಾರೆಯೇ ;

(ಉ) ಎಷ್ಟು ಪ್ರಕರಣಗಳನ್ನು ಇಲ್ಲಿಯವರೆಗೂ ಬಾಲ್ಯ ವಿವಾಹದಲ್ಲಿ ತೊಡಗಿದ ಪೋಷಕರಲ್ಲದೆ ಬೇರೆಯವರ ಮೇಲೆ ಪ್ರಕರಣಗಳನ್ನು ಹೂಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ರಾಜ್ಯದಲ್ಲಿ ಬಾಲ್ಯ ವಿವಾಹ ಪದ್ಧತಿ ಜಾರಿಯಲ್ಲಿದೆಯೇ ; ಬಾಲ್ಯ ವಿವಾಹ ನಡೆದ ಬಗ್ಗೆ ವರದಿಯಾದ ಪ್ರಕರಣಗಳೆಷ್ಟು ; ಬಾಲ್ಯ ವಿವಾಹ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ; ಅವುಗಳು ಪರಿಣಾಮಕಾರಿಯಾಗಿವೆಯೇ ?

## ಜಿಲ್ಲೆಗಳಲ್ಲಿ ಧ್ವನಿ–ಬೆಳಕು ಕಾರ್ಯಕ್ರಮದ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೮೨೦ (೧೬೪೨) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಡಾ: ಬಿ.ಆರ್. ಅಂಬೇಡ್ಕರ್ ಜನ್ಮ ದಿನಾಂಕದಂದು ಧ್ವನಿ–ಬೆಳಕು (Sound and Light and Show) ಕಾರ್ಯಕ್ರಮವನ್ನು ಎಷ್ಟು ಜಿಲ್ಲೆಗಳಲ್ಲಿ ಹಮ್ಮಿಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಈ ಕಾರ್ಯಕ್ರಮವನ್ನು ಎಷ್ಟು ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ ;

(ಇ) ಅನುಷ್ಠಾನಗೊಳಿಸದೇ ಬಾಕಿ ಇರುವ ಜಿಲ್ಲೆಗಳ ಸಂಖ್ಯೆ ಎಷ್ಟು ; ಅನುಷ್ಠಾನಗೊಳಿಸದಿರಲು ಕಾರಣಗಳೇನು ?

## ನ್ಯಾಯ ಬೆಲೆ ಅಂಗಡಿಗಳಲ್ಲಿ ನಕಲಿ ಕೂಪನ್‌ಗಳನ್ನು ಸೃಷ್ಟಿಸಿ ಪಡಿತರ ಸಾಮಾಗ್ರಿಗಳನ್ನು ಪಡೆಯುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೮೨೧ (೧೬೪೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಕಲಿ ಕೂಪನ್‌ಗಳನ್ನು ಸೃಷ್ಟಿಸಿ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಸಾಮಾಗ್ರಿಗಳನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರದ ಗಮನಕ್ಕೆ ಬಂದಂತಹ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ನಕಲಿ ಕೂಪನ್ ಸೃಷ್ಟಿಸಿರುವ ನ್ಯಾಯಬೆಲೆ ಅಂಗಡಿಗಳ ಮೇಲೆ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ;

(ಈ) ನಕಲಿ ಕೂಪನ್ ಸೃಷ್ಟಿಸಿರುವುದನ್ನು ತಡೆಯಲು ಸರ್ಕಾರವು ಹಾಗೂ ಕೈಗೊಂಡಿರುವ ಕಟ್ಟುನಿಟ್ಟಿನ ಕ್ರಮಗಳೇನು ; ಪಡಿತರ ಸಾಮಾಗ್ರಿಗಳನ್ನು ಪಡೆಯಲು ನಕಲಿಯಾಗದಂತೆ ಸ್ಮಾರ್ಟ್ ಕಾರ್ಡುಗಳನ್ನು ವಿತರಿಸಲು ಸರ್ಕಾರ ಯೋಚಿಸಿದೆಯೇ ?

## ೨೦೧೬-೧೭ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಕುಟೀರ ಯೋಜನೆ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೮೨೨ (೧೬೪೬) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೬-೧೭ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಕುಟೀರ ಯೋಜನೆಯನ್ನು ಪ್ರಾರಂಭಿಸಲಾಗಿದೆಯೇ ;

(ಆ) ಈ ಯೋಜನೆಯಲ್ಲಿ ಎಷ್ಟು ಕುಟೀರಗಳನ್ನು ಪ್ರಾರಂಭಿಸಲಾಗಿದೆ; (ವಿವರ ನೀಡುವುದು)

(ಇ) ಈ ಕುಟೀರಗಳಲ್ಲಿ ಪ್ರಯಾಣಿಕರಿಗೆ ಯಾವ ಸೌಲಭ್ಯವನ್ನು ನೀಡಲಾಗಿದೆ ? (ವಿವರ ನೀಡುವುದು)

## ರಾಜ್ಯ ಸರ್ಕಾರ ನಡೆಸುವ ವೃದ್ಧಾಶ್ರಮಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೮೨೩ (೧೬೪೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ  ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರ ನಡೆಸುವ ವೃದ್ಧಾಶ್ರಮಗಳಲ್ಲಿ ಪ್ರತಿ ವೃದ್ಧರಿಗೆ ದಿನವೊಂದಕ್ಕೆ ಉಪಹಾರ ಹಾಗೂ ಎರಡು ಬಾರಿ ಊಟಕ್ಕೆ ದಿನವೊಂದಕ್ಕೆ ₹. ೩೫ ರಂತೆ ಅನುದಾನ ನೀಡುತ್ತಿದ್ದು, ಇಷ್ಟು ಕಡಿಮೆ ಹಣದಲ್ಲಿ ಈ ಮೇಲೆ ತಿಳಿಸಿರುವ ರೀತಿಯಲ್ಲಿ ಊಟ–ಉಪಚಾರ ಒದಗಿಸಲು ಸಾಧ್ಯವೇ ;

(ಆ) ೨೫ ಜನ ವೃದ್ಧರಿಗೆ ಅಡುಗೆ, ತಿಂಡಿ ಮಾಡಲು ಇಬ್ಬರು ಸಹಾಯಕರುಗಳಿದ್ದು, ಅವರಿಗೆ ತಿಂಗಳಿಗೆ ಕೇವಲ ₹. ೪೦೦೦ ಗೌರವಧನ ನೀಡುತ್ತಿದ್ದು, ಇದರಿಂದ ಅವರ ಜೀವನ ನಿರ್ವಹಣೆ ಸಾಧ್ಯವೇ ;

(ಇ) ವೃದ್ಧಾಶ್ರಮದಲ್ಲಿರುವ ವೃದ್ಧರಿಗೆ ಬಟ್ಟೆ–ಬರೆ ಹಾಗೂ ಇನ್ನಿತರೆ ಶುಚಿತ್ವಗಳಿಗೆ ಸರ್ಕಾರದಿಂದ ಯಾವುದೇ ಅನುದಾನ ಇಲ್ಲದಿರುವುದರಿಂದ, ಈ ವೆಚ್ಚಗಳನ್ನು ಸ್ವಯಂ ಸೇವಾ ಸಂಸ್ಥೆಗಳೇ ಭರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವೃದ್ಧಾಶ್ರಮದಲ್ಲಿರುವ ವೃದ್ಧರಿಗೆ ಔಷಧಿಯ ವೆಚ್ಚವೆಂದು ತಿಂಗಳಿಗೆ ಸರ್ಕಾರ ಕೇವಲ ₹. ೧೦೦೦ ಮಾತ್ರ ನೀಡುತ್ತಿದ್ದು, ೨೫ ಜನ ವೃದ್ಧರಿಗೆ ಈ ಹಣದಲ್ಲಿ ವೈದ್ಯಕೀಯ ತಪಾಸಣೆ ಹಾಗೂ ಔಷಧಿಯ ವೆಚ್ಚವನ್ನು ಭರಿಸಲು ಸಾಧ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇಲಾಖೆ ನಡೆಸುತ್ತಿರುವ ಹಗಲು ಯೋಗಕ್ಷೇಮ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ನರ್ಸ್‌ಗಳಿಗೆ ₹. ೧೦೦೦೦ ಗೌರವಧನ ನೀಡುತ್ತಿದ್ದು, ಇದೇ ಇಲಾಖೆಯಿಂದ ನಡೆಸುತ್ತಿರುವ ವೃದ್ಧಾಶ್ರಮದಲ್ಲಿ ಕಾರ್ಯನಿರ್ವಹಿಸುವ ನರ್ಸ್‌ಗಳಿಗೆ ₹. ೬೦೦೦ ನೀಡುತ್ತಿರುವುದು ಸರಿಯೇ ;

(ಊ) ಈ ಎಲ್ಲಾ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮವೇನು?

## ಹೊರಸಂಪನ್ಮೂಲ ಏಜೆನ್ಸಿಯಿಂದ ಕಾರ್ಯನಿರ್ವಹಿಸುತ್ತಿರುವ ಸಹ ಶಿಕ್ಷಕರು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೮೨೪ (೧೭೪೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ (ಕೆ.ಆರ್.ಇ.ಐ.ಎಸ್)ದ ಅಧೀನದಲ್ಲಿ ಬರುವ ವಸತಿ ಶಾಲೆಗಳಲ್ಲಿ ಹೊರ ಸಂಪನ್ಮೂಲ ಏಜೆನ್ಸಿಯಿಂದ ಕಾರ್ಯನಿರ್ವಹಿಸುತ್ತಿದ್ದ ಸಹ ಶಿಕ್ಷಕರುಗಳಿಗೆ ಒಂದು ಶೈಕ್ಷಣಿಕ ವರ್ಷಕ್ಕೆ ಎಷ್ಟು ಸೇವಾ ಕೃಪಾಂಕಗಳನ್ನು ನೀಡಲಾಗಿದೆ;

(ಆ) ಸೇವಾ ಕೃಪಾಂಕಗಳನ್ನು ಪರಿಗಣಿಸಿ ಎಷ್ಟು ಜನರನ್ನು ಆಯ್ಕೆ ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಸಹ ಶಿಕ್ಷಕರುಗಳ ನೇಮಕಾತಿಯಡಿ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಗೊಂಡ ಎಷ್ಟು ಜನರನ್ನು ಅಂತಿಮ ಆಯ್ಕೆ ಪಟ್ಟಿಯಲ್ಲಿ ಕೈಬಿಡಲಾಗಿದೆ ; ಈ ರೀತಿ ಕೈಬಿಡಲು ಇರುವ ಸಕಾರಣಗಳೇನು; (ವಿವರವಾದ ಕಾರಣಗಳೊಂದಿಗೆ ಮಾಹಿತಿ ನೀಡುವುದು)

(ಈ) ಹೆಚ್ಚಿಗೆ ಅಂಕ ಹೊಂದಿದ್ದರೂ ಕೂಡಾ ರಿಜಿಸ್ಟರ್ ನಂ. ೧೩೫೮೬೧ (ಸಮಾಜಶಾಸ್ತ್ರ ವಿಷಯದ) ಅಭ್ಯರ್ಥಿಯನ್ನು ಆಯ್ಕೆ ಪಟ್ಟಿಯಿಂದ ಕೈಬಿಟ್ಟು ಅನ್ಯಾಯ ಮಾಡಿರುವುದು ಸರಿಯೇ ;

(ಉ) ಈ ಅನ್ಯಾಯವನ್ನು ಯಾವ ಕಾಲಮಿತಿಯೊಳಗೆ ಸರ್ಕಾರವು ಸರಿಪಡಿಸಿ ಅಭ್ಯರ್ಥಿಗೆ ನ್ಯಾಯ ಒದಗಿಸುವುದು ? (ಸಂಪೂರ್ಣವಾದ ವಿವರವಾದ ಮಾಹಿತಿ ನೀಡುವುದು)

## ಜಾತಿ ಗಣತಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೮೨೫ (೧೭೪೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ರಾಜ್ಯದಲ್ಲಿ ಜಾತಿ ಗಣತಿ ಕಾರ್ಯವನ್ನು ಯಾವಾಗ ಪ್ರಾರಂಭ ಮಾಡಲಾಯಿತು ; ಹಾಗೂ ಯಾವಾಗ ಮುಕ್ತಾಯವಾಯಿತು;

(ಆ) ಈ ಜಾತಿ ಗಣತಿ ಅನುಸಾರ ರಾಜ್ಯದಲ್ಲಿ ಎಷ್ಟು ಜಾತಿ ಹಾಗೂ ಉಪಜಾತಿಗಳಿವೆ ; ಇವುಗಳ ಜನಸಂಖ್ಯೆ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ಈ ಜಾತಿ ಗಣತಿಯ ಅನುಸಾರ ಅಲ್ಪಸಂಖ್ಯಾತರು ಅಂದರೆ ಯಾರು; ಯಾವ ಯಾವ ಜಾತಿಯವರು ಈ ವ್ಯಾಖ್ಯಾನದಡಿ ಬರುತ್ತಾರೆ; (ವಿವರವಾಗಿ ಮಾಹಿತಿ ನೀಡುವುದು)

(ಈ) ಯಾವುದೇ ಒಂದು ಜಾತಿಯು ಅಲ್ಪಸಂಖ್ಯಾತರ ವ್ಯಾಖ್ಯಾನದಡಿ ಬರಲು ಇರುವ ಮಾನದಂಡಗಳೇನು ?

## ಎನ್.ಆರ್.ಹೆಚ್.ಎಂ. ಯೋಜನೆ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೮೨೬ (೧೭೪೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಬರುವ ಕೇಂದ್ರ ಸರ್ಕಾರದ ಎನ್.ಆರ್.ಹೆಚ್.ಎಂ. ಯೋಜನೆಗೆ ಕಳೆದ ೩ ವರ್ಷಗಳಿಂದ ಬಂದ ಅನುದಾನವೆಷ್ಟು ; ಯಾವ ಯಾವ ಕಾರ್ಯಕ್ರಮಗಳಿಗೆ ವಿನಿಯೋಗಿಸಲಾಗಿದೆ ; (ವಿವರವಾದ ಮಾಹಿತಿ ಕೊಡುವುದು)

(ಆ) ಈ ಯೋಜನೆಯಡಿ ಔಷಧಿಗಳನ್ನು ಖರೀದಿಸುವ ಸಂಬಂಧ ಅವ್ಯವಹಾರ ನಡೆದಿರುವುದು ನಿಜವೆ ; ಎಷ್ಟು ಕೋಟಿಗಳ ಅವ್ಯವಹಾರ ನಡೆದಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಇದರ ಸಂಬಂಧ ಎಷ್ಟು ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು)

## ಜಿಲ್ಲಾ ಸಮಾಲೋಚಕರ ನೇಮಕಾತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೮೨೭ (೧೭೪೪) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸೋದ್ಯಮ ಇಲಾಖೆಯಡಿ ಜಿಲ್ಲೆಗೊಬ್ಬರಂತೆ ವಿವಿಧ ಜಿಲ್ಲೆಗಳಡಿ ಎಷ್ಟು ಜನ ಜಿಲ್ಲಾ ಸಮಾಲೋಚಕರು ಯಾವ ದಿನಾಂಕದಿಂದ ಕಾರ್ಯನಿರ್ವಹಿಸುತ್ತಿದ್ದಾರೆ ; (ವಿವರವಾಗಿ ಹೆಸರು ಪಡೆಯುತ್ತಿರುವ ವೇತನದೊಂದಿಗೆ ಮಾಹಿತಿ ಕೊಡುವುದು)

(ಆ) ಇವರನ್ನು ಯಾವ ರೀತಿ ನೇಮಕಾತಿ ಮಾಡಿಕೊಳ್ಳಲಾಗಿದೆ ; ಇದರ ನಿಯಮ ನಿಬಂಧನೆಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಇವರನ್ನು ಇಲಾಖೆಯ ಸೇವೆಯಲ್ಲಿ ವಿಲೀನಗೊಳಿಸಲು ಸರ್ಕಾರವು ಚಿಂತನೆ ನಡೆಸಿದೆಯೇ ;

(ಈ) ಹಾಗಾದರೆ ಇವರನ್ನು ಯಾವ ಕಾಲಮಿತಿಯೊಳಗೆ ಇಲಾಖಾ ಸೇವೆಯಲ್ಲಿ ವಿಲೀನಗೊಳಿಸಲಾಗುವುದು ?

## ಐ.ಟಿ. ಉದ್ಯಮಗಳನ್ನು ಬೇರೆ ಬೇರೆ ಜಿಲ್ಲೆಗಳಲ್ಲಿ ಸ್ಥಾಪಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೨೮ (೧೭೧೬) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಐ.ಟಿ. ಉದ್ಯಮಗಳು ಹೆಚ್ಚಾಗಿ ಬೆಂಗಳೂರು ನಗರದಲ್ಲೇ ಪ್ರಾರಂಭವಾಗುತ್ತಿದ್ದು ಇದರ ಬದಲು ಬೇರೆ ಬೇರೆ ಜಿಲ್ಲೆಗಳಲ್ಲಿ ಸ್ಥಾಪಿಸಲು ಪ್ರೋತ್ಸಾಹ ನೀಡಲು ಕ್ರಮ ಕೈಗೊಳ್ಳಲಾಗುತ್ತದೆಯೆ ;

(ಆ) ಇದರಿಂದ ಬೆಂಗಳೂರು ನಗರದಲ್ಲಿ ಜನದಟ್ಟಣೆ ಕಡಿಮೆಯಾಗುವುದಲ್ಲದೆ ಬೇರೆ ಬೇರೆ ಜಿಲ್ಲೆಗಳ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶಕ್ಕೆ ಅನುಕೂಲವಾಗುವುದರಿಂದ ಈ ಬಗ್ಗೆ ಸರ್ಕಾರ ಚಿಂತಿಸುವುದೆ ;

(ಇ) ಈ ಬಗ್ಗೆ ತೀವ್ರವಾಗಿ ಪರಿಶೀಲಿಸಿ ಕಾರ್ಯಕ್ರಮಗಳನ್ನು ಎಷ್ಟು ದಿನಗಳಲ್ಲಿ ರೂಪಿಸಲಾಗುವುದು ?

## ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳ ವ್ಯವಸ್ಥೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೨೯ (೧೭೧೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಇಲಾಖೆಯ ವಸತಿ ನಿಲಯಗಳಲ್ಲಿ ಅಡಿಗೆ ಮಾಡುವವರನ್ನು ನೇಮಕಾತಿ ಮಾಡುವ ವಿಧಾನಗಳೇನು ; ಅವರಿಗೆ ನಿಗದಿಪಡಿಸಿರುವ ಅರ್ಹತೆಗಳೇನು ;

(ಆ) ಆರೋಗ್ಯ ಪೂರ್ಣವಾದ ಆಹಾರ ಪದಾರ್ಥಗಳನ್ನು ಮಕ್ಕಳಿಗೆ ನೀಡುವ ಬಗ್ಗೆ ಪರಿಶೀಲಿಸಲು ಮತ್ತು ಲೋಪದೋಷಗಳಿದ್ದರೆ ಅದನ್ನು ಸರಿಪಡಿಸಲು ಯಾವ ರೀತಿ ಕ್ರಮ ಕೈಗೊಳ್ಳಲಾಗುತ್ತದೆ;

(ಇ) ಸಮಾಜ ಕಲ್ಯಾಣಾಧಿಕಾರಿಗಳು ಹಾಸ್ಟೆಲ್‌ಗಳಿಗೆ ನಿಯಮಿತವಾಗಿ ಭೇಟಿ ನೀಡಿ ಪರಿಶೀಲಿಸಿ ಕ್ರಮ ಕೈಗೊಳ್ಳುತ್ತಿದ್ದಾರೆಯೇ ?

## ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಕೊರೆದಿರುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :– ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):– ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):– ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೩೦ (೧೫೭೩+೧೬೫೭+೧೭೦೬+೧೫೭೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗಂಗಾ ಕಲ್ಯಾಣ ಯೋಜನೆಯಡಿ ರಾಜ್ಯಾದ್ಯಂತ ೨೦೧೦ ರಿಂದ ಇಲ್ಲಿಯವರೆವಿಗೂ ಹೆಚ್.ಡಿ. ಕೋಟೆ ಹಾಗೂ ಹಾವೇರಿ ಜಿಲ್ಲೆ ಒಳಗೊಂಡಂತೆ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ; (ಜಿಲ್ಲಾವಾರು, ವರ್ಷಾವಾರು, ಹೋಬಳಿವಾರು ವಿವರ ನೀಡುವುದು)

(ಆ) ೨೦೧೦ ರಿಂದ ೨೦೧೭ನೇ ಸಾಲಿನಲ್ಲಿ ಸದರಿ ಯೋಜನೆಯಡಿಯಲ್ಲಿ ಕೊರೆಯಲಾದ ಕೊಳವೆ ಬಾವಿಗಳೆಷ್ಟು ; ಬಾಕಿಯಿರುವ ಕೊಳವೆ ಬಾವಿಗಳೆಷ್ಟು ; ಇದರಲ್ಲಿ ಎಷ್ಟು ಕೊಳವೆ ಬಾವಿಗಳಿಗೆ ವಿದ್ಯುತ್ ಅಳವಡಿಕೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ನೀರಾವರಿ ಇಲಾಖೆಯಿಂದ ನಿರ್ಮಿಸಿ ಕೊಡಲಾಗುವ 'ಕೊಳವೆ ಬಾವಿ' ಗಳಿಗೂ ಡಾ : ಅಂಬೇಡ್ಕರ್ ನಿಗಮ ನಿಯಮಿತದಡಿ ನೀಡುವ ಕೊಳವೆ ಬಾವಿಗಳಿಗೂ ಇರುವ ವ್ಯತ್ಯಾಸ ಏನು ; ಈ ಎರಡೂ ಯೋಜನೆಗಳಿಂದ ಕೊಳವೆ ಬಾವಿ ಪ್ರಯೋಜನೆಯನ್ನು ಒಂದೇ ಫಲಾನುಭವಿ ಪಡೆಯಬಹುದಾಗಿದೆಯೇ ; (ತಿಳಿಸುವುದು)

(ಈ) ಇದಕ್ಕೆ ಸಂಬಂಧಿಸಿದಂತೆ ಹೆಚ್.ಡಿ. ಕೋಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ೨೦೧೦ ರಿಂದ ಇಲ್ಲಿಯವರೆವಿಗೂ ನೀರಾವರಿ ಇಲಾಖೆ ಸೇರಿದಂತೆ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ವರ್ಷಾವಾರು, ಹೋಬಳಿವಾರು ಮಾಹಿತಿ ನೀಡುವುದು) ಹಿಂದುಳಿದ ವರ್ಗಗಳಿಂದ ಗಂಗಾ ಕಲ್ಯಾಣ ಯೋಜನೆ ಯಾವ ದಿನಾಂಕದಿಂದ ಜಾರಿಗೆ ಬಂದಿರುತ್ತದೆ ; ಈ ಯೋಜನೆಯ ಮಾನದಂಡವೇನು ; (ವಿವರ ನೀಡುವುದು)

(ಉ) ರಾಜ್ಯದ ಯಾವುದೇ ತಾಲ್ಲೂಕಿನಲ್ಲಿ ಇದುವರೆಗೂ ನೇಕಾರ ಕುಟುಂಬಕ್ಕೆ ಈ ಯೋಜನೆಯ ಪ್ರಯೋಜನೆ ಸಿಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ವರ್ಷದಿಂದ ತಾಲ್ಲೂಕುವಾರು ಹಂಚಿಕೆಯಲ್ಲಿ ಕನಿಷ್ಠ ೩ ಕೊಳವೆ ಬಾವಿಗಳನ್ನು ಬಡ ನೇಕಾರರಿಗೆ ಸಿಗುವಂತೆ ಆದೇಶ ಮಾಡಲಾಗುವುದೇ ?

## ಉದ್ಯೋಗಿನಿ ಮತ್ತಿತರೆ ಕಿರುಸಾಲ ಯೋಜನೆಗಳ ಬಗ್ಗೆ

**ಡಾ : ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೮೩೧ (೧೭೪೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಮಹಿಳೆಯರಿಗೆ ನೀಡುತ್ತಿರುವ ಉದ್ಯೋಗಿನಿ ಮತ್ತಿತರೆ ಕಿರುಸಾಲ ಯೋಜನೆಗಳಿಗೆ ಮಹಿಳೆಯರ ವಯೋಮಿತಿ ೪೫ ವರ್ಷದೊಳಗೆ ಇರಬೇಕೆಂದು ನಿಗಧಿಗೊಳಿಸಿದೆಯೇ ; ೪೫ ವರ್ಷಕ್ಕೂ ಮೇಲ್ಪಟ್ಟ ಬಡ ಮಹಿಳೆಯರು ಈ ಸಾಲಗಳನ್ನು ಪಡೆಯಲಾಗದೆ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇನ್ನೂ ಸಾಲ ಪಡೆಯಲು ಕುಟುಂಬದ ವಾರ್ಷಿಕ ಆದಾಯ ₹. ४೦,೦೦೦ ಮಿತಿಗೊಳಿಸಲಾಗಿದೆಯೇ ; ಇದರಿಂದ ಕೂಡ ಕೆಲ ಮಹಿಳೆಯರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮಹಿಳೆಯರ ವಯೋಮಿತಿ ಮತ್ತು ಕುಟುಂಬದ ಆದಾಯದ ಮಿತಿಯನ್ನು ಸರ್ಕಾರ ಹೆಚ್ಚಳ ಮಾಡಲು ಕ್ರಮ ವಹಿಸುವುದೇ?

## ರಾಜ್ಯದಲ್ಲಿರುವ ಪುರಾತನ ಮತ್ತು ಪ್ರವಾಸಿ ಸ್ಥಳಗಳಲ್ಲಿರುವ ದೇವಸ್ಥಾನಗಳಿಗೆ ಅನುದಾನ ನೀಡಿರುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩೨ (೧೫೬೫) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪುರಾತನ ಹಾಗೂ ಪ್ರಸಿದ್ಧ ಸ್ಥಳಗಳಲ್ಲಿರುವ ದೇವಸ್ಥಾನಗಳಲ್ಲಿ ಪ್ರವಾಸಿಗರಿಗೆ ಮೂಲಭೂತ ಸೌಕರ್ಯ ಒದಗಿಸಲು ೨೦೧೬–೧೭ನೇ ಸಾಲಿನಲ್ಲಿ ಒದಗಿಸಲಾಗಿರುವ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆಯ ಪ್ರವಾಸಿ ತಾಣಗಳಲ್ಲಿರುವ ದೇವಸ್ಥಾನಗಳ ಅಭಿವೃದ್ಧಿಗಾಗಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಪ್ರವಾಸಿ ತಾಣಗಳ ಪಟ್ಟಿಯೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಇ) ತುಮಕೂರು ತಾಲ್ಲೂಕು ಹೊನ್ನಕೆರೆ ಗ್ರಾಮದ ಶ್ರೀ ಕೋವಿರಾಮದೇವರ ಬೆಟ್ಟಕ್ಕೆ ಪ್ರತಿನಿತ್ಯ ಸಾವಿರಾರು ಪ್ರವಾಸಿಗರು ಮತ್ತು ಭಕ್ತಾಧಿಗಳು ಬರುತ್ತಿರುವುದರಿಂದ ಇಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ;

(ಈ) ಬಂದಿದ್ದಲ್ಲಿ, ಶ್ರೀ ಕೋವಿರಾಮದೇವರ ಬೆಟ್ಟಕ್ಕೆ ಹೋಗುವ ರಸ್ತೆ ಮತ್ತು ಬೆಟ್ಟದಲ್ಲಿರುವ ಶ್ರಿ ಬಸವೇಶ್ವರ ಶ್ರೀ ರಾಮದೇವರ ಶ್ರೀ ಸರ್ಪದೇವರುಗಳ ದೇವಸ್ಥಾನಕ್ಕೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಕೊಡಲಾಗುವುದೆ ; (ನಿಖರವಾದ ಮಾಹಿತಿ ನೀಡುವುದು)

(ಉ) ಈ ಬಗ್ಗೆ ಸರ್ಕಾರಕ್ಕೆ ಮನವಿ ಮಾಡಿಕೊಂಡರೂ ಸಹ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು ?

## ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯ ನೀಡುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩೩ (೧೫೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ತಾಲ್ಲೂಕು ಕೇಂದ್ರಗಳ ಆಸ್ಪತ್ರೆಯಲ್ಲಿ ಬಡವರ, ರೈತರ, ಕೂಲಿ ಕಾರ್ಮಿಕರ ಹಿತದೃಷ್ಟಿಯಿಂದ ಡಯಾಲಿಸಿಸ್ ಸೌಲಭ್ಯವನ್ನು ಒದಗಿಸಲಾಗುವುದೇ ;

(ಆ) ಹಾಗಿದ್ದಲ್ಲಿ, ಇಲ್ಲಿಯ ತನಕ ಎಷ್ಟು ತಾಲ್ಲೂಕು ಆಸ್ಪತ್ರೆಗಳಲ್ಲಿ ಈ ಸೌಲಭ್ಯಗಳನ್ನು ಒದಗಿಸಲಾಗಿದೆ ; ಹಾಗೂ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕು ಆಸ್ಪತ್ರೆಗಳಿಗೆ ಈ ಸೌಲಭ್ಯವನ್ನು ನೀಡಲಾಗಿದೆ; (ವಿವರ ನೀಡುವುದು)

(ಇ) ಡಯಾಲಿಸಿಸ್ ಚಿಕಿತ್ಸೆಯನ್ನು ಎ.ಪಿ.ಎಲ್, ಬಿ.ಪಿ.ಎಲ್, ಯಶಸ್ವಿನಿ ಚೀಟಿಯನ್ನು ಹೊಂದಿದವರಿಗೆ ಉಚಿತವಾಗಿ ಮತ್ತು ಇತರರಿಗೆ ರಿಯಾಯಿತಿ ದರದಲ್ಲಿ ನೀಡಲು ಸರ್ಕಾರ ಕ್ರಮವಹಿಸುವುದೇ ?

## ತಿಪಟೂರಿನಲ್ಲಿರುವ ಸಾರ್ವಜನಿಕ ಆಸ್ಪತ್ರೆಯ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩೪ (೧೫೬೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆ ತಿಪಟೂರು ನಗರದಲ್ಲಿರುವ ಸಾರ್ವಜನಿಕ ಆಸ್ಪತ್ರೆಯನ್ನು ನವೀಕರಣ ಮಾಡಲಾಗಿದೆಯೇ ; ಹಾಗಾದರೆ ಈ ಕಾಮಗಾರಿಗೆ ಖರ್ಚು ಮಾಡಿರುವ ಹಣವೆಷ್ಟು ; (ವಿವರ ನೀಡುವುದು)

(ಅ) ಹಾಗಿದ್ದಲ್ಲಿ, ಈ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿ, ನವೀಕರಣ ಮಾಡಿ ನೂತನ ಕಟ್ಟಡದಲ್ಲಿ ಕಲ್ಪಿಸಿರುವ ಮೂಲಭೂತ ಸೌಕರ್ಯಗಳೇನು ; (ವಿವರ ಒದಗಿಸುವುದು)

(ಇ) ನೂತನ ಕಟ್ಟಡಕ್ಕೆ ಪ್ರತ್ಯೇಕವಾದ ಒಳಚರಂಡಿಯು ವಿನ್ಯಾಸಗೊಳಿಸಲಾಗಿದೆಯೇ ;

(ಈ) ಒಂದು ವೇಳೆ ಪ್ರತ್ಯೇಕ ಯು.ಜಿ.ಡಿ. ವ್ಯವಸ್ಥೆಯಾಗಿರದಿದ್ದರೆ ಆಸ್ಪತ್ರೆಯ ಆವರಣ ಮತ್ತಷ್ಟು ಅನೈರ್ಮಲ್ಯತೆಯಿಂದ ಕೂಡಿ ರೋಗಗ್ರಸ್ಥವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಸಾರ್ವಜನಿಕ ಆಸ್ಪತ್ರೆಯ ಎದುರಿಗೆ ಇರುವ ತಹಸೀಲ್ದಾರ್ ಕಛೇರಿ, ನ್ಯಾಯಾಲಯ, ಪೊಲೀಸ್ ಠಾಣೆ ಇವುಗಳು ಸಾರ್ವಜನಿಕ ಮೂತ್ರಾಲಯ ಹೊಂದಿರದೆ ಇರುವುದರಿಂದ ಸಾರ್ವಜನಿಕ ಆಸ್ಪತ್ರೆಯೊಳಗಿರುವ ಶೌಚಾಲಯಕ್ಕೆ ಬಂದು ಹೋಗುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿಲ್ಲವೆ ;

(ಊ) ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಋ) ಆಸ್ಪತ್ರೆಯ ಶೌಚಾಲಯವೇ ನವೀಕರಣಗೊಂಡಿಲ್ಲವೆಂದಾದ ಮೇಲೆ ಒಳರೋಗಿಗಳು ಮತ್ತು ಹೊರ ರೋಗಿಗಳು ದಿನವಹಿ ಬಂದು ಹೋಗುವ ನಗರದ ಸಾರ್ವಜನಿಕ ಆಸ್ಪತ್ರೆಗೆ ಸುಸಜ್ಜಿತವಾದ ಕನಿಷ್ಠ ದರ್ಜೆಯ ಶೌಚಾಲಯವಿಲ್ಲದೆ ಇರುವ ಆಸ್ಪತ್ರೆಯನ್ನು ಯಾವ ರೀತಿ ನವೀಕರಣ ಮಾಡಲಾಗುತ್ತದೆ ? (ವಿವರ ನೀಡುವುದು)

## ತುಮಕೂರು ನಗರದಲ್ಲಿ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩೫ (೧೫೬೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ತುಮಕೂರು ನಗರದಲ್ಲಿ ನಡೆಸುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ; ಅವು ಯಾವ ಯಾವ ತರಗತಿಯ ವಿದ್ಯಾರ್ಥಿಗಳಿಗೆ ಸೇರಿದ್ದಾಗಿವೆ ; (ವಿವರವಾದ ಮಾಹಿತಿ ನೀಡುವುದು)

(ಅ) ಪ್ರತಿ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಪ್ರತಿ ವಿದ್ಯಾರ್ಥಿನಿಲಯದಲ್ಲಿ ಸರ್ಕಾರದ ನಿಯಮದ ಪ್ರಕಾರ ಇರಬೇಕಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಹೆಚ್ಚುವರಿ ವಿದ್ಯಾರ್ಥಿಗಳಿಗೆ ಅಲ್ಲಿ ಇರಲು ಮತ್ತು ಊಟದ ವ್ಯವಸ್ಥೆಗಾಗಿ ಕಲ್ಪಿಸಿಕೊಟ್ಟಿರುವ ಮೂಲಭೂತ ಸೌಕರ್ಯಗಳೇನು; (ವಿವರ ನೀಡುವುದು)

(ಈ) ಹಾಗೆಯೇ, ವಿದ್ಯಾರ್ಥಿಗಳ ಸಂಖ್ಯೆ ಅಧಿಕಗೊಂಡಲ್ಲಿ ಹೆಚ್ಚುವರಿ ವಿದ್ಯಾರ್ಥಿನಿಲಯುಗಳನ್ನು ತೆರೆಯುಲು ಸರ್ಕಾರಕ್ಕಿರುವ ತೊಂದರೆಯೇನು ; ಈ ಬಗ್ಗೆ ಸರ್ಕಾರ ಕ್ರಮ ವಹಿಸುವುದೇ ;

(ಉ) ಪ್ರತ್ಯೇಕವಾಗಿ ಇಂಜಿನಿಯರಿಂಗ್ ಮತ್ತು ಮೆಡಿಕಲ್ ಹಾಗೂ ಇನ್ನಿತರೆ ವೃತ್ತಿಪರ ಕೋರ್ಸ್ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳಿವೆಯೇ ;

(ಊ) ಇಲ್ಲದಿದ್ದಲ್ಲಿ, ತುಮಕೂರು ನಗರದಲ್ಲಿ ಇಂತಹ ವಿದ್ಯಾರ್ಥಿನಿಲಯಗಳನ್ನು ಗ್ರಾಮೀಣ ಭಾಗದ ರೈತರ, ಹಿಂದುಳಿದ ಕೂಲಿ ಕಾರ್ಮಿಕರ ಮಕ್ಕಳಿಗಾಗಿ ತೆರೆಯಲು ಸರ್ಕಾರ ಮುಂದಿನ (೩ ರಿಂದ ೪ ವಿದ್ಯಾರ್ಥಿ ನಿಲಯಗಳನ್ನು) ಶೈಕ್ಷಣಿಕ ವರ್ಷದಲ್ಲೇ ಪ್ರಾರಂಭಿಸುವುದೇ ?

## ರಾಜ್ಯದಲ್ಲಿ ಬಡವರಿಗೆ ಪಡಿತರ ಸಮರ್ಪಕವಾಗಿ ವಿತರಣೆಯಾಗದೆ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩೬(೧೭೫೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬಡವರಿಗೆಂದೆ ಜಾರಿಯಾದ ಅನ್ನಭಾಗ್ಯ ಯೋಜನೆಯಡಿ ಪಡಿತರ ವಿತರಣೆಯು ಸಮರ್ಪಕವಾಗಿ ನಡೆಯದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಮಾಣದ ಪಡಿತರ ವಿತರಣೆಯಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ದಿನನಿತ್ಯ ಹೊಸ ಹೊಸ ನಿಯಮಗಳ ಜಾರಿಯಿಂದ ಬಡವರಿಗೆ ವಿತರಿಸುವ ಪಡಿತರ ಖೋತ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಡತನ ರೇಖೆಯಿಂದ ಕೆಳಗಿರುವ ಜನರಿಗೆ ಸಮರ್ಪಕವಾಗಿ ಪಡಿತರ ವಿತರಿಸಲು ಮತ್ತು ಮಧ್ಯವರ್ತಿಗಳಿಂದಾಗುವ ಕಿರಿಕಿರಿ ತಪ್ಪಿಸಲು ಸರ್ಕಾರ ತೆಗದುಕೊಂಡ ಕ್ರಮಗಳೇನು ? (ವಿವರ ನೀಡುವುದು)

# ರಾಜ್ಯದಲ್ಲಿ ಮಹಿಳೆಯರು ಮತ್ತು ಹೆಣ್ಣು ಮಕ್ಕಳು ಲೈಂಗಿಕ ಶೋಷಣೆಗೊಳಗಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩೭ (೧೭೫೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಹಿಳೆಯರು ಮತ್ತು ಹದಿಹರೆಯದ ಹೆಣ್ಣು ಮಕ್ಕಳು ಲೈಂಗಿಕ ಶೋಷಣೆಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಅ) ಹಾಗಿದ್ದಲ್ಲಿ, ಸರ್ಕಾರವು ಮಹಿಳೆಯರ ಮತ್ತು ಮಕ್ಕಳ ಲೈಂಗಿಕ ಶೋಷಣೆ ತಡೆಯುವ ನಿಟ್ಟಿನಲ್ಲಿ ಏನೇನು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ ;

(ಇ) ಲೈಂಗಿಕ ಶೋಷಣೆಗೊಳಗಾದ ಮಹಿಳೆಯರಿಗೆ ಮತ್ತು ಮಕ್ಕಳಿಗೆ ಯಾವ ಯಾವ ರೀತಿಯ ಪುನರ್ವಸತಿ ಕಾರ್ಯಕ್ರಮಗಳನ್ನು ಸರ್ಕಾರ ಹಮ್ಮಿಕೊಂಡಿದೆ ; (ವಿವರ ನೀಡುವುದು)

(ಈ) ಈಗಾಗಲೇ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ; ಅವರಿಗೆ ಸರ್ಕಾರ ಕಲ್ಪಿಸಿದ ಪುನರ್ವಸತಿ ಯೋಜನೆಗಳಾವುವು; (ಫಲಾನುಭವಿಗಳ ವಿವರ ನೀಡುವುದು)

(ಉ) ಲೈಂಗಿಕ ಶೋಷಿತ ಮಹಿಳೆಯರ ಮತ್ತು ಮಕ್ಕಳ ಮಾನಸಿಕ ಚಿಕಿತ್ಸೆಗೆ ಮತ್ತು ಅವರಿಗೆ ಆತ್ಮ ವಿಶ್ವಾಸ ತುಂಬಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವಂತಹ ಯಾವ ಯಾವ ಕಾರ್ಯಕ್ರಮಗಳನ್ನು ಸರ್ಕಾರ ನಡೆಸುತ್ತಿದೆ ; ಎಲ್ಲೆಲ್ಲಿ ನಡೆಸಲಾಗುತ್ತಿದೆ ? (ವಿವರ ನೀಡುವುದು)

## ರಾಜ್ಯದ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳು ಕಲುಷಿತ ಆಹಾರ ಸೇವಿಸಿ ಅಸ್ವಸ್ಥರಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩೮ (೧೭೫೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಹಾಸ್ಟೆಲ್‌ಗಳಲ್ಲಿ ಕಲುಷಿತ ಆಹಾರ ಸೇವಿಸಿ ವಿದ್ಯಾರ್ಥಿಗಳು ಅಸ್ವಸ್ಥಗೊಳ್ಳುತ್ತಿರುವುದು, ಸಾವನ್ನಪ್ಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಹಾಸ್ಟೆಲ್‌ಗಳಲ್ಲಿ ಸ್ವಚ್ಛತೆ ಹಾಗೂ ಶುದ್ದತೆಯ ಮೇಲ್ವಿಚಾರಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಹಾಸ್ಟೆಲ್‌ಗಳಲ್ಲಿ ಸ್ವಚ್ಛತೆ ಹಾಗೂ ಶುದ್ಧತೆಯ ಮೇಲ್ವಿಚಾರಣೆಯನ್ನು ಯಾರು ನಿರ್ವಹಿಸುತ್ತಾರೆ ; ಅವರ ಕಾರ್ಯವೈಖರಿ ಏನು ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಇಂತಹ ಎಷ್ಟು ಹಾಸ್ಟೆಲ್‌ಗಳಲ್ಲಿ ಆಹಾರ ಸೇವಿಸಿದ ವಿದ್ಯಾರ್ಥಿಗಳು ಅಸ್ವಸ್ಥಗೊಂಡ ಪ್ರಕರಣಗಳು ಪತ್ತೆಯಾಗಿವೆ ; (ವಿವರ ನೀಡುವುದು)

(ಈ) ಇದಕ್ಕೆ ಯಾರು ಹೊಣೆ ; ತಪ್ಪಿತಸ್ಥರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇದು ಮರುಕಳಿಸದಂತೆ ತಡೆಯುವ ನಿಟ್ಟಿನಲ್ಲಿ ಸರ್ಕಾರ ರೂಪಿಸಿರುವ ಮಾರ್ಗಸೂಚಿಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಮಾರಣಾಂತಿಕ ಸೋಂಕಿನ ಖಾಯಿಲೆಗಳು ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩೯ (೧೭೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಾರಣಾಂತಿಕ ಸೋಂಕಿನ ಖಾಯಿಲೆಗಳಾದ ಡೆಂಘೀ, ಮಲೇರಿಯಾ, ಚಿಕೂನ್ ಗುನ್ಯಾ ಹಾಗೂ ಎಚ್೧ ಎನ್೧ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಇಂತಹ ಎಷ್ಟು ಪ್ರಕರಣಗಳು ಪತ್ತೆಯಾಗಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಎಚ್೧ ಎನ್೧ ಸೋಂಕು ಹರಡದಂತೆ ಹಾಗೂ ಅದನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಆಸ್ಪತ್ರೆಗಳ ಒಳಗೆ ಮತ್ತು ಹೊರಗಿನ ಪರಿಸರ ಸ್ವಚ್ಛತೆಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು ; ಕಳೆದ ಮೂರು ವರ್ಷಗಳಲ್ಲಿ ಇದಕ್ಕಾಗಿ ಸರ್ಕಾರ ವ್ಯಯಿಸಿದ ಅನುದಾನವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಮಕ್ಕಳ ಹಕ್ಕು ರಕ್ಷಣೆ ಕುರಿತಾದ ಸರಕಾರದ ಕ್ರಮಗಳು

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೪೦ (೧೫೫೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಮಕ್ಕಳ ಹಕ್ಕು ಸಂರಕ್ಷಣೆ ಮತ್ತು ಆ ಕುರಿತಾದ ಅನುಷ್ಠಾನದಲ್ಲಿರುವ ರೀತಿ ನೀತಿಗಳು ಯಾವುವು;

(ಆ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳಲ್ಲಿ ಮ್ಕಕಳ ಹಕ್ಕು ಕ್ಲಬ್ ಸ್ಥಾಪನೆ ಕುರಿತಾದ ಪ್ರಗತಿಯ ವಿವರಗಳಾವುವು;

(ಇ) ಮಕ್ಕಳ ಹಕ್ಕು ಕುರಿತಾದ ಉಪಯುಕ್ತತೆಯನ್ನು ಮಕ್ಕಳಿಗೆ ಮತ್ತು ಪೋಷಕರುಗಳಿಗೆ ಮನದಟ್ಟು ಮಾಡಿಕೊಡುವ ಜನಪ್ರಿಯ ಸರಕಾರದ ಯೋಜನೆಯ ಅನುಷ್ಠಾನದ ಕುರಿತಾದ ಪರಿಣಾಮಕಾರಿ ಕ್ರಮಗಳು ಯಾವುವು;

(ಈ) ಹೈದ್ರಾಬಾದ್–ಕರ್ನಾಟಕ ಪ್ರದೇಶಗಳಲ್ಲಿ ಮಕ್ಕಳ ಹಕ್ಕು ಸಂರಕ್ಷಣೆ ಜಾರಿಯಲ್ಲಿಯ ಪ್ರಗತಿಯ ವಿವರಗಳೇನು?

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲೆಗಳ ಅವ್ಯವಸ್ಥೆಯ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೪೧ (೧೬೬೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲೆಗಳು ಅವ್ಯವಸ್ಥೆಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) 'ಕ್ರೈಸ್' ವ್ಯಾಪ್ತಿಯಲ್ಲಿನ ವಸತಿ ಶಾಲೆಗಳಲ್ಲಿ ಕಳಪೆ ಆಹಾರ ಶೈಕ್ಷಣಿಕ ವರ್ಷಾಂತ್ಯದವರೆಗೂ ಷೂಗಳನ್ನು ನೀಡದಿರುವುದು ವಸತಿ ಶಾಲೆಗಳ ಕಟ್ಟಡ ಕಾಮಗಾರಿಯಲ್ಲಿನ ವಿಳಂಬ ಸರ್ಕಾರದ ಗಮನಕ್ಕೆ ಬಂದಿಲ್ಲವೆ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲೆಗಳನ್ನು ಜಿಲ್ಲಾ ಮಟ್ಟದಲ್ಲಿ ಉಸ್ತುವಾರಿ ವಹಿಸುವವರು ಯಾರು; ಇದರ ನಿಗಾವಣೆಗೆ ಯಾವ ಕ್ರಮ ಕೈಗೊಂಡಿದೆ;

(ಈ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲೆಗಳ ಉಸ್ತುವಾರಿಯನ್ನು ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ತರಲು ವಿಧಾನ ಮಂಡಲದ ಹಿಂದುಳಿದ ವರ್ಗದ ಸಮಿತಿಯ ಶಿಫಾರಸ್ಸುಗಳೇನು;

(ಉ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲೆಗಳ ಉಸ್ತುವಾರಿಯನ್ನು ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ತರಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಆರೋಗ್ಯ ಇಲಾಖೆಯಡಿ ಆಹಾರ ಸುರಕ್ಷತಾ ಕಾಯಿದೆ ಅನುಷ್ಠಾನದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೪೨ (೧೬೬೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆರೋಗ್ಯ ಇಲಾಖೆಯಲ್ಲಿ ಆಹಾರ ಸುರಕ್ಷತಾ ವಿಭಾಗಕ್ಕೆ ಈ ಹಿಂದೆ ನೀಡಿದ ಭರವಸೆಗೆ ವಿರುದ್ಧವಾಗಿ, ಹಾಲಿ ಇರುವ ಪ್ರಭಾರಿ ಅಂಕಿತ ಅಧಿಕಾರಿಗಳನ್ನು ಬದಲಾಯಿಸಿ, ವೈದ್ಯಾಧಿಕಾರಿಗಳನ್ನು ನೇಮಿಸಿರುವುದು ನಿಜವೇ;

(ಆ) ಗ್ರೂಪ್-ಎ ವೃಂದಕ್ಕೆ ಸೇರಿರುವ ತಾಲ್ಲೂಕು ವೈದ್ಯಾಧಿಕಾರಿಗಳನ್ನು ಸೇವಾ ನಿಯಮಕ್ಕೆ ವಿರುದ್ಧವಾಗಿ ಗ್ರೂಪ್-ಬಿ ವೃಂದಕ್ಕೆ ಬರುವ ಹಿರಿಯ ಅಂಕಿತ ಅಧಿಕಾರಿ ಹುದ್ದೆಗಳಿಗೆ ಪ್ರಭಾರದಲ್ಲಿ ಇಟ್ಟಿರುವುದು ನಿಜವೇ;

(ಇ) ಗ್ರೂಪ್-ಎ ವೃಂದಕ್ಕೆ ಸೇರಿರುವ ತಾಲ್ಲೂಕು ವೈದ್ಯಾಧಿಕಾರಿಗಳನ್ನು ಸೇವಾ ನಿಯಮಕ್ಕೆ ವಿರುದ್ಧವಾಗಿ ಗ್ರೂಪ್-ಸಿ ವೃಂದಕ್ಕೆ ಬರುವ ಅಂಕಿತ ಅಧಿಕಾರಿ ಹುದ್ದೆಗಳಿಗೆ ಹೆಚ್ಚುವರಿ ಪ್ರಭಾರದಲ್ಲಿ ಇಟ್ಟಿರುವುದು ನಿಜವೇ;

(ಈ) ಆರೋಗ್ಯ ಇಲಾಖೆಯಲ್ಲಿ ಆಹಾರ ಸುರಕ್ಷತಾ ವಿಭಾಗದಲ್ಲಿನ ಅಂಕಿತ ಅಧಿಕಾರಿಗಳ ಪ್ರಭಾರದ ನಿಯಮ ಬಾಹಿರ ಆದೇಶ ರದ್ದುಪಡಿಸಲು ಸರ್ಕಾರಕ್ಕಿರುವ ತೊಡಕುಗಳೇನು;

(ಉ) ಆರೋಗ್ಯ ಇಲಾಖೆಯಲ್ಲಿನ, ಆಹಾರ ಸುರಕ್ಷತಾ ವಿಭಾಗದ ಪ್ರಭಾರ, ನೇಮಕಾತಿ ಕುರಿತು ಸಮಗ್ರ ತನಿಖೆ ನಡೆಸಿ, ಕ್ರಮ ಕೈಗೊಳ್ಳುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಪಡಿತರ ಚೀಟಿ ಅರ್ಜಿ ಶುಲ್ಕ ಗ್ರಾಮ ಪಂಚಾಯತ್‌ಗಳಿಗೆ ನೀಡುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೪೩ (೧೬೬೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆನ್‌ಲೈನ್ ಮೂಲಕ ಹೊಸ ಪಡಿತರ ಚೀಟಿ ಮತ್ತು ತಿದ್ದುಪಡಿ ಅರ್ಜಿ ಸಲ್ಲಿಸುವಾಗ ಗ್ರಾಮ ಪಂಚಾಯತ್‌ಗಳ ಮೂಲಕ ಸಲ್ಲಿಕೆಯಾದ ಒಟ್ಟು ಅರ್ಜಿಗಳೆಷ್ಟು; ಸಂಗ್ರಹವಾದ ಒಟ್ಟು ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಮೊತ್ತದಲ್ಲಿ ಒಟ್ಟು ಎಷ್ಟು ಮೊತ್ತವನ್ನು ಗ್ರಾಮ ಪಂಚಾಯತ್‌ಗಳಿಗೆ ನೀಡಲಾಗಿದೆ; ಸರ್ಕಾರದ ಖಜಾನೆ/ತಾಲ್ಲೂಕು ಕಛೇರಿಗೆ ಪಾವತಿಯಾದ ಮೊತ್ತವೆಷ್ಟು;

(ಇ) ಪಡಿತರ ಚೀಟಿ ಹೊಸ ಅರ್ಜಿ ಮತ್ತು ತಿದ್ದುಪಡಿ ಅರ್ಜಿ ಮೂಲಕ ಗ್ರಾಮ ಪಂಚಾಯತ್‌ಗಳಲ್ಲಿ ಸಂಗ್ರಹವಾದ ಮೊತ್ತ ಆಯಾಯ ಗ್ರಾಮ ಪಂಚಾಯತ್ ಖಾತೆಗೆ ಜಮೆ ಆಗಿರುವುದುನ್ನು ಖಾತ್ರಿ ಪಡಿಸಲಾಗಿದೆಯೇ; (ವಿವರ ಒದಗಿಸುವುದು)

(ಈ) ಪಡಿತರ ಚೀಟಿ ಶುಲ್ಕ ಪ್ರತಿ ಅರ್ಜಿಗೆ ₹. 50/–ನ್ನು ಆಯಾಯ ಗ್ರಾಮ ಪಂಚಾಯತ್ ಖಾತೆಗೆ ಪಾವತಿಯಾಗುವುದನ್ನು ಖಾತ್ರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಉ) ಪಡಿತರ ಚೀಟಿ ಅರ್ಜಿ ಶುಲ್ಕವನ್ನು ಗ್ರಾಮ ಪಂಚಾಯತ್‌ಗಳು ಉಪಯೋಗಿಸಿಕೊಳ್ಳಲು ಸರ್ಕಾರ ಆದೇಶ ಹೊರಡಿಸಿದ ನಂತರವೂ ಸರ್ಕಾರದ ಖಾತೆಗೆ ಸದರಿ ಮೊತ್ತವನ್ನು ಪಾವತಿಸಲು ತಹಶೀಲ್ದಾರರು ಆದೇಶ ನೀಡುತ್ತಿರುವುದು ನಿಜವೇ; ಸಂಬಂಧಪಟ್ಟವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)

## ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೮೪೪ (೧೭೦೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡಲು ಇರುವ ಸರ್ಕಾರದ ಮಾನದಂಡಗಳೇನು;

(ಆ) ಒಂದು ಸಮಾಜದ ಅಧ್ಯಕ್ಷರು ಅಥವಾ ಆಯಾ ಊರಿನ ನಾಗರಿಕರು ಗುರುತಿಸಿದ್ದರೂ, ಅಧಿಕಾರಿಗಳು ತಿರಸ್ಕರಿಸಲು ಕಾರಣವೇನು;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ದೇವಾಂಗ, ಶೆಟ್ಟಿಗಾರ್, ಪದ್ಮಶಾಲಿ, ಈ ಸಮಾಜದ ನೇಕಾರ ಬಂಧುಗಳಿಗೆ ತೊಂದರೆ ಮಾಡುತ್ತಿರುವುದು ನಿಜವೇ;

(ಈ) ಹಾಗಿದ್ದಲ್ಲಿ, ನಿರ್ದಿಷ್ಟ ಜಾತಿಯನ್ನು ಹೇಗೆ ಗುರುತಿಸಲಾಗುವುದು?

## ಶ್ರೀ ಪುಷ್ಪಾಂಡಜ ಮಹರ್ಷಿ ಗುರುಪೀಠಕ್ಕೆ ಹಣ ಬಿಡುಗಡೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೮೪೫ (೧೭೦೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶ್ರೀ ಪುಷ್ಪಾಂಡಜ ಮಹರ್ಷಿ ಗುರುಪೀಠ (ರಿ), ತಪಸೀಹಳ್ಳಿ, ಅಂತರಹಳ್ಳಿ ಅಂಚೆ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಇವರಿಗೆ ಸಮುದಾಯ ಭವನ ನಿರ್ಮಾಣ ಮಾಡಲು ಸಹಾಯಧನ ಮಂಜೂರು ಮಾಡಲಾಗಿದೆಯೇ;

(ಆ) ಕಳೆದ ೩ ವರ್ಷಗಳ ಹಿಂದೆ ೨೦೧೨–೧೩ರಲ್ಲಿ ಅರ್ಜಿ ಸಲ್ಲಿಸಿದ್ದು ಇದುವರೆಗೆ ಹಣ ಮಂಜೂರು ಮಾಡದಿರಲು ಕಾರಣವೇನು;

(ಇ) ಕೂಡಲೆ ಹಣ ಬಿಡುಗಡೆ ಮಾಡಲಾಗುವುದೇ?

## ವಿಕಲ ಚೇತನ ಸಂಸ್ಥೆಗಳಿಗೆ ಬಿ.ಪಿ.ಎಲ್. ದರದಲ್ಲಿ ಆಹಾರಧಾನ್ಯ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೮೪೬ (೧೭೦೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನಾಥಾಶ್ರಮ/ವೃದ್ಧಾಶ್ರಮ/ ವಿಕಲ ಚೇತನ ಸಂಸ್ಥೆಗಳಿಗೆ ಆಹಾರ ಇಲಾಖೆ ಬಿ.ಪಿ.ಎಲ್. ದರದಲ್ಲಿ ಆಹಾರಧಾನ್ಯ ನೀಡಲು ಇರುವ ಮಾನದಂಡಗಳೇನು;

(ಆ) ರಾಜ್ಯದಲ್ಲಿ ಬಿ.ಪಿ.ಎಲ್ ಕಾರ್ಡುದಾರರಿಗೆ ಕೊಡುವ ರೀತಿಯಲ್ಲಿ ಕುಟುಂಬ ಆಧಾರಿತ ಪ್ಯಾಕೇಜಿನಂತೆ ಇವರಿಗೂ ಕೊಡಲು ಇರುವ ತೊಂದರೆ ಏನು;

(ಇ) ಬಿ.ಪಿ.ಎಲ್‌ಗಿಂತ ಬಡವರಾದ ಇವರಿಗೆ ರಾಜ್ಯದ ಬಿ.ಪಿ.ಎಲ್ ಯೋಜನೆ ಜಾರಿಗೆ ಬರುವಂತೆ ಸರ್ಕಾರ ಕೂಡಲೇ ಆದೇಶ ಮಾಡಲಾಗುವುದೆ?

## ಚಿಕ್ಕಮಗಳೂರು ಜಿಲ್ಲೆಯ, ಗಿರಿಜನ ಅಭಿವೃದ್ಧಿ ಯೋಜನೆಯಡಿ ನೀಡಲಾಗಿರುವ ವಿಶೇಷ ಪ್ಯಾಕೇಜ್‌ನ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೪೭ (೧೬೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಗೆ ೨೦೧೬–೧೭ನೇ ಸಾಲಿನಲ್ಲಿ ಗಿರಿಜನ ಅಭಿವೃದ್ಧಿ ಯೋಜನೆಯಡಿಯಲ್ಲಿ ನೀಡಲಾಗಿರುವ ವಿಶೇಷ ಪ್ಯಾಕೇಜ್‌ನ ಅನುದಾನವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ವಿಶೇಷ ಪ್ಯಾಕೇಜ್‌ನ ಅನುದಾನಕ್ಕೆ ಕ್ರಿಯಾ ಯೋಜನೆ ತಯಾರಿಸಲು ಸರ್ಕಾರದಿಂದ ಮಾರ್ಗಸೂಚಿ ನಿಗದಿಪಡಿಸಲಾಗಿದೆಯೇ; ನಿಗದಿಪಡಿಸಿದ್ದರೆ, ಮಾರ್ಗಸೂಚಿಗಳು ಯಾವುವು;

(ಇ) ವಿಶೇಷ ಪ್ಯಾಕೇಜ್‌ನ ಅನುದಾನವನ್ನು ಹೊರತುಪಡಿಸಿ, ಚಿಕ್ಕಮಗಳೂರು ಜಿಲ್ಲೆಗೆ ೨೦೧೩–೧೪ನೇ ಸಾಲಿನಿಂದ ೨೦೧೬–೧೭ನೇ ಸಾಲಿನವರೆಗೆ ಎಷ್ಟು ಅನುದಾನವನ್ನು ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ–ಯೋಜನೆಯಡಿಯಲ್ಲಿ ಬಿಡುಗಡೆಗೊಳಿಸಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ೨೦೧೩-೧೪ನೇ ಸಾಲಿನಿಂದ ೨೦೧೬-೧೭ನೇ ಸಾಲಿನವರೆಗೆ ಬಿಡುಗಡೆಗೊಳಿಸಲಾಗಿರುವ ಅನುದಾನದಲ್ಲಿ ಎಷ್ಟು; ಅನುದಾನವನ್ನು ಖರ್ಚು ಮಾಡಲಾಗಿದೆ; ಹಾಗೂ ಉಳಿಕೆ ಅನುದಾನವೆಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡಗಳ ವಿದ್ಯಾರ್ಥಿಗಳಿಗೆ ನೀಡುತ್ತಿರುವ ವಿದ್ಯಾರ್ಥಿ ವೇತನದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೪೮ (೧೭೫೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡಗಳ ವಿದ್ಯಾರ್ಥಿಗಳಿಗೆ ನೀಡುತ್ತಿರುವ ವಿದ್ಯಾರ್ಥಿ ವೇತನ ಹಾಗೂ ಮೆರಿಟ್ ಸ್ಕಾಲರ್‌ಶಿಪ್ ಹಣ ವಿತರಣೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಚಿಕ್ಕಮಗಳೂರು ಜಿಲ್ಲೆಯ ವಿದ್ಯಾರ್ಥಿಗಳಿಗೆ ನೀಡುತ್ತಿರುವ ವಿದ್ಯಾರ್ಥಿ ವೇತನವನ್ನು ಸರಿಯಾದ ಸಮಯಕ್ಕೆ ಅವರವರ ಖಾತೆಗಳಿಗೆ ಜಮೆ ಮಾಡಲಾಗಿದೆಯೇ ಅಥವಾ ಖಾತೆಗಳಿಗೆ ವರ್ಗಾವಣೆ ಮಾಡುವುದು ಬಾಕಿ ಉಳಿದಿದೆಯೇ; ಬಾಕಿ ಉಳಿದಿದ್ದರೆ, ಕಾರಣಗಳೇನು; ಇದುವರೆಗೂ ಎಷ್ಟು ಮೊತ್ತವನ್ನು ವಿತರಣೆ ಮಾಡಲಾಗಿದೆ; ಬಾಕಿ ಇರುವ ಮೊತ್ತವೆಷ್ಟು;

(ಇ) ಮೂಡಿಗೆರೆ ತಾಲ್ಲೂಕು ಮೆಟ್ರಿಕ್ ನಂತರದ ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡಗಳ ವಿದ್ಯಾರ್ಥಿ ನಿಲಯಕ್ಕೆ ಸ್ವಂತ ಕಟ್ಟಡ ಹೊಂದಲು ಜಾಗ ಗುರುತಿಸಲಾಗಿದೆಯೇ?

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಜೂರಾದ ಡಾ: ಬಿ.ಆರ್. ಅಂಬೇಡ್ಕರ್ ಭವನಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೪೯ (೧೬೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಗೆ ೨೦೧೦–೧೧ನೇ ಸಾಲಿನಿಂದ ಇಲ್ಲಿಯವರೆಗೂ ಮಂಜೂರು ಮಾಡಲಾಗಿರುವ ಒಟ್ಟು ಡಾ:ಬಿ.ಆರ್. ಅಂಬೇಡ್ಕರ್ ಭವನಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಇದುವರೆಗೂ ಕಾಮಗಾರಿ ಪೂರ್ಣಗೊಂಡು ಬಳಕೆಯಾಗುತ್ತಿರುವ ಭವನಗಳೆಷ್ಟು ಒಂದೊಂದು ಭವನದ ಖರ್ಚೆಷ್ಟು;

(ಇ) ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲ್ಲೂಕಿನ ಡಾ:ಬಿ.ಆರ್.ಅಂಬೇಡ್ಕರ್ ನಿರ್ಮಾಣಕ್ಕಾಗಿ ಜಾಗ ಗುರುತಿಸಲಾಗಿದೆಯೇ; ಜಾಗ ಮಂಜೂರಾಗಿದ್ದರೆ, ಇನ್ನೂ ಭವನ ನಿರ್ಮಾಣ ಕಾಮಗಾರಿ ಪ್ರಾರಂಭಿಸದಿರಲು ಇರುವ ಕಾರಣಗಳೇನು;

(ಈ) ಮೂಡಿಗೆರೆ ತಾಲ್ಲೂಕಿನ ಡಾ:ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಮಂಜೂರಾದ ಹಣವೆಷ್ಟು; ಮಂಜೂರಾದ ವರ್ಷ ಯಾವುದು?

## ಭಾಗ್ಯಲಕ್ಷ್ಮಿ ಬಾಂಡ್‌ಗಳ ವಿತರಣೆ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೫೦ (೪೭೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಇಲ್ಲಿಯವರೆಗೆ ಎಷ್ಟು ಭಾಗ್ಯಲಕ್ಷ್ಮಿ ಬಾಂಡ್‌ಗಳನ್ನು ವಿತರಿಸಲಾಗಿದೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ಕೆಲ ವರ್ಷಗಳಿಂದ ಭಾಗ್ಯಲಕ್ಷ್ಮಿ ಬಾಂಡ್‌ಗಳ ವಿತರಣೆಯಲ್ಲಿ ತಡವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಪ್ರಸ್ತುತ ವಿತರಿಸಲು ಬಾಕಿ ಉಳಿದುಕೊಂಡಿರುವ ಭಾಗ್ಯಲಕ್ಷ್ಮಿ ಬಾಂಡ್‌ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

(ಈ) ಬಾಕಿ ಉಳಿದುಕೊಂಡಿರುವ ಭಾಗ್ಯಲಕ್ಷ್ಮಿ ಬಾಂಡ್‌ಗಳನ್ನು ವಿತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಸಂತ ಸೇವಾಲಾಲ ಜಯಂತಿಯನ್ನು ಆಚರಣೆ ಮಾಡಲು ಕುರಿತು

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೮೫೧ (೧೯೭೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಸಂತ ಸೇವಾಲಾಲ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಣೆ ಮಾಡಬೇಕೆಂಬುದು ಸಮುದಾಯದ ಒತ್ತಾಯವಿದ್ದು, ಸರ್ಕಾರ ಈ ಬಗ್ಗೆ ಏನಾದರೂ ನಿರ್ಧಾರ ತೆಗೆದುಕೊಂಡಿದೆಯೇ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಔಷಧ ಸಂಗ್ರಹಿಸುವ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೫೨ (೧೬೫೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಔಷಧಿಗಳನ್ನು ಸಂಗ್ರಹಿಸಿಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಬಡವರಿಗೆ ಪೂರ್ಣ ಪ್ರಮಾಣದಲ್ಲಿ ಔಷಧಿಗಳನ್ನು ವಿತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಔಷಧಿಗಳ ಗುಣಮಟ್ಟವನ್ನು ಕಾಯ್ದುಕೊಳ್ಳಲು ತಜ್ಞರ ತಂಡವನ್ನು ರಚಿಸಲಾಗಿದೆಯೇ?

## ಪ್ರವಾಸಿ ತಾಣಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೫೩ (೧೬೫೫) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸೋದ್ಯಮ ಇಲಾಖೆ ವತಿಯಿಂದ ರಾಜ್ಯಾದ್ಯಂತ ಗುರುತಿಸಲಾಗಿರುವ ಪ್ರವಾಸಿತಾಣಗಳ ಸಂಖ್ಯೆ ಎಷ್ಟು;

(ಆ) ವಿದೇಶಿ ಪ್ರವಾಸಿಗರಿಗೆ ಹಂಪಿಯಲ್ಲಿನ ಪಾರಂಪರಿಕ ಕಟ್ಟಡಗಳ ಬಗ್ಗೆ ಪರಿಚಯಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಪ್ರವಾಸೋದ್ಯಮ ಇಲಾಖೆಗೆ ಸಂಬಂಧಿಸಿದ ಪ್ರವಾಸಿತಾಣಗಳಲ್ಲಿ ಪುರಾತತ್ವ ಇಲಾಖೆ ವಶದಲ್ಲಿರುವ ತಾಣಗಳು/ಸ್ಥಳಗಳು ಯಾವುವು?

## ಶೈಕ್ಷಣಿಕ ಸೌಲಭ್ಯಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೫೪ (೧೬೫೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಉನ್ನತ ಶಿಕ್ಷಣ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಶೈಕ್ಷಣಿಕ ಸೌಲಭ್ಯಗಳು ಯಾವುವು;

(ಆ) ಸವಾಜ ಕಲ್ಯಾಣ ಇಲಾಖೆಯಿಂದ ಉನ್ನತ ಶಿಕ್ಷಣಕ್ಕಾಗಿ ೨೦೧೬-೧೭ನೇ ಸಾಲಿನಲ್ಲಿ ಸೌಲಭ್ಯಗಳನ್ನು ಪಡೆದಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ನೀಡಲಾಗುವ ವಿದ್ಯಾರ್ಥಿ ವೇತನ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೫೫ (೧೫೪೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ೨೦೧೬-೧೭ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿ ವೇತನ ಪಡೆದ ಮತ್ತು ಪಡೆಯದ ಮೆಟ್ರಿಕ್ ಪೂರ್ವದ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ೨೦೧೬-೧೭ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ವಿದ್ಯಾರ್ಥಿ ವೇತನ ಕೋರಿ ಅರ್ಜಿ ಸಲ್ಲಿಸಿ ವಿದ್ಯಾರ್ಥಿ ವೇತನ ದೊರೆಯದ ವಿದ್ಯಾಥಿ, ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; ಮತ್ತು ಇವರಿಗೆ ವಿದ್ಯಾರ್ಥಿ ವೇತನ ನೀಡದಿರಲು ಕಾರಣವೇನು; (ತಾಲ್ಲೂಕುವಾರು ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳ ಶಾಸನಬದ್ಧ ಅನುದಾನದಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದವರಿಗೆ ಶೇಕಡ ೨೫ನ್ನು ಮೀಸಲಿಸುವ ಅನುದಾನದಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ವೇತನ ಹಾಗೂ ಇತರೆ ಸೌಲಭ್ಯ ನೀಡಲು ಅವಕಾಶವಿಲ್ಲದಿರಲು ಕಾರಣವೇನು?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೫೬ (೧೫೫೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಮೂಲಭೂತ ಸೌಕರ್ಯವಾದ ಕುಡಿಯುವ ನೀರು ಮತ್ತು ಶೌಚಾಲಯದ ಸೌಲಭ್ಯವಿಲ್ಲದಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು; ಸ್ವಂತ ನಿವೇಶನ, ಕಟ್ಟಡ ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಕಾಲಮಿತಿ ಯಾವುದು; (ತಾಲ್ಲೂಕುವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಮತ್ತು ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ

ಸಂಖ್ಯೆ ಎಷ್ಟು; ಕೊರತೆ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಅಂಗನವಾಡಿ ಸಿಬ್ಬಂದಿಗಳಿಗೆ ವೈದ್ಯಕೀಯ ವೆಚ್ಚವನ್ನು ಸರಕಾರದಿಂದ ಭರಿಸಲು ಅವಕಾಶವಿದೆಯೇ; ಅವಕಾಶವಿದ್ದಲ್ಲಿ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಲ್ಲಿಸಲಾದ ಪ್ರಸ್ತಾವನೆಗಳು ಎಷ್ಟು; ಬಿಡುಗಡೆಯಾದ ಮೊತ್ತವೆಷ್ಟು; ಬಿಡುಗಡೆಗೆ ಬಾಕಿ ಇರುವ ಮೊತ್ತವೆಷ್ಟು; ಮತ್ತು ಈ ಬಾಕಿಯನ್ನು ಕಾಲಮಿತಿಯೊಂದಿಗೆ ಬಿಡುಗಡೆಗೊಳಿಸಲಾಗುವುದೇ; (ತಾಲ್ಲೂಕುವಾರು, ವರ್ಷವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಅಂಗನವಾಡಿ ಸಿಬ್ಬಂದಿಗಳು ಅಕಸ್ಮಿಕ ಮರಣ ಹೊಂದಿದಾಗ ನೀಡಲಾಗುವ ಪರಿಹಾರ ಸೌಲಭ್ಯಗಳು ಯಾವುವು; ಕಳೆದ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಇಂತಹ ಎಷ್ಟು ಪ್ರಕರಣಗಳು ದಾಖಲಾಗಿವೆ; ಮತ್ತು ನೀಡಲಾದ ಪರಿಹಾರ ಮೊತ್ತವೆಷ್ಟು; ಮತ್ತು ನೀಡಲು ಬಾಕಿ ಇರುವ ಪರಿಹಾರ ಮೊತ್ತವೆಷ್ಟು; ಮತ್ತು ಬಾಕಿಯನ್ನು ಯಾವಾಗ ಪಾವತಿಸಲಾಗುವುದು? (ತಾಲ್ಲೂಕುವಾರು, ವರ್ಷವಾರು, ಪ್ರಕರಣವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೫೭ (೧೫೫೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; ಅವು ಯಾವುವು; ಅವುಗಳಲ್ಲಿ ಪ್ರವೇಶಕ್ಕೆ ಅವಕಾಶವಿರುವ ಸೀಟುಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ವಿದ್ಯಾರ್ಜನೆ ಮಾಡುತ್ತಿರುವ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಖಾಸಗಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; ಯಾವುವು; ಅವುಗಳಲ್ಲಿ ಪ್ರವೇಶಕ್ಕೆ ಅವಕಾಶವಿರುವ ಸೀಟುಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ವಿದ್ಯಾರ್ಜನೆ ಮಾಡುತ್ತಿರುವ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಡೀಮ್ಡ್ ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು; ಯಾವುವು; ಇವುಗಳು ಹೊಂದಿರುವ ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ಯಾವುವು; ಈ ವಿಶ್ವವಿದ್ಯಾನಿಲಯಗಳು ಹೊಂದಿರುವ ಸೌಲಭ್ಯಗಳು ಯಾವುವು; ಮತ್ತು ವಿಶೇಷ ಹಕ್ಕುಗಳು ಯಾವುವು; (ಡೀಮ್ಡ್ ವಿಶ್ವವಿದ್ಯಾಲಯವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಿಗೂ ಹಾಗೂ ಖಾಸಗಿ ವೈದ್ಯಕೀಯ ಸಂಸ್ಥೆಗಳಿಗೂ ಇರುವ ವ್ಯತ್ಯಾಸಗಳೇನು;

(ಉ) ರಾಜ್ಯದಲ್ಲಿ ಇತರೆ ವಿಶ್ವವಿದ್ಯಾನಿಲಯಗಳಿಗೂ ಹಾಗೂ ಡೀಮ್ಡ್ ವಿಶ್ವವಿದ್ಯಾನಿಲಯಗಳಿಗೂ ಇರುವ ವ್ಯತ್ಯಾಸಗಳೇನು?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೫೮ (೧೫೪೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜಿಲ್ಲಾ ಆಸ್ಪತ್ರೆಯ ದರ್ಜೆಯ ಜಿಲ್ಲಾಸ್ಪತ್ರೆಗಳನ್ನು ಹೊಂದಿರದ ಜಿಲ್ಲೆಗಳು ಯಾವುವು; ಇವುಗಳನ್ನು ಜಿಲ್ಲಾಸ್ಪತ್ರೆ ದರ್ಜೆಯ ಆಸ್ಪತ್ರೆಗಳನ್ನು ಹೊಂದುವಂತೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಜ್ಯದಲ್ಲಿ ತಾಲ್ಲೂಕು ಆಸ್ಪತ್ರೆಯ ದರ್ಜೆಯ ತಾಲ್ಲೂಕು ಆಸ್ಪತ್ರೆಗಳನ್ನು ಹೊಂದಿರದ ತಾಲ್ಲೂಕುಗಳು ಯಾವುವು; ಇವುಗಳನ್ನು ತಾಲ್ಲೂಕು ಆಸ್ಪತ್ರೆ ದರ್ಜೆಯ ಆಸ್ಪತ್ರೆಗಳನ್ನು ಹೊಂದುವಂತೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ನೂತನವಾಗಿ ಮಂಜೂರಾದ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳು ಎಷ್ಟು; ಅವು ಯಾವುವು; ಆ ಪೈಕಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳು ಎಷ್ಟು; ಅವು ಯಾವುವು; ಇನ್ನೂ ಕಾರ್ಯ ಆರಂಭಿಸಿದ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳು ಶೀಘ್ರ ಕಾರ್ಯಾರಂಭಿಸುವಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿನ ಮಾಲ್‌ಗಳಲ್ಲಿನ ಮಾರಾಟ ಸಾಮಾಗ್ರಿಗಳ ಮೇಲೆ ಸರ್ಕಾರಕ್ಕಿರುವ ನಿಯಂತ್ರಣಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೫೯ (೧೫೪೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವ್ಯವಹಾರ ನಡೆಸುತ್ತಿರುವ ಮಾಲ್‌ಗಳಲ್ಲಿ ಮಾರಾಟವಾಗುತ್ತಿರುವ ವಸ್ತುಗಳ ತೂಕ ಮತ್ತು ಅಳತೆ ಮತ್ತು ಅವುಗಳ ಗುಣಮಟ್ಟಗಳ ಮೇಲೆ ಸರ್ಕಾರಕ್ಕಿರುವ ನಿಯಂತ್ರಣಗಳೇನು;

(ಆ) ರಾಜ್ಯದಲ್ಲಿ ವ್ಯವಹಾರ ನಡೆಸುತ್ತಿರುವ ಮಾಲ್‌ಗಳಲ್ಲಿ ಮಾರಾಟವಾಗುತ್ತಿರುವ ಸಾಮಾಗ್ರಿಗಳ ತೂಕವನ್ನು ತಪಾಸಣೆ ಮಾಡುವ ವ್ಯವಸ್ಥೆ ಇದೆಯೇ; ಇಲ್ಲವಾದಲ್ಲಿ, ಕಾರಣವೇನು;

(ಇ) ಮಾಲ್‌ಗಳಲ್ಲಿ ಆಹಾರ ಸಾಮಾಗ್ರಿಗಳ ಗುಣಮಟ್ಟವನ್ನು ಖಾತ್ರಿಪಡಿಸಿಕೊಳ್ಳುವ ವ್ಯವಸ್ಥೆ ಇದೆಯೇ; ಇದ್ದಲ್ಲಿ, ಯಾವುವು; ಇಲ್ಲವಾದಲ್ಲಿ, ಕಳಪೆ ಗುಣಮಟ್ಟದ ಕಲಬೆರಕೆಯುಕ್ತ ಮತ್ತು ಅವಧಿ ಮೀರಿದ ವಸ್ತುಗಳ ಮಾರಾಟದ ವಿರುದ್ಧ ದೂರು ಸಲ್ಲಿಸುವ ವ್ಯವಸ್ಥೆ ಕಲ್ಪಿಸಲಾಗಿದೆಯೇ; ಕಲ್ಪಿಸಲಾಗಿದ್ದಲ್ಲಿ, ಯಾರಿಗೆ?

## ಭೂ ರಹಿತರಿಗೆ ಸರ್ಕಾರದಿಂದ ಭೂಮಿ ಹಂಚಿಕೆ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೦ (೧೫೭೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭೂ ರಹಿತ ಪರಿಶಿಷ್ಠ ಜಾತಿ ಮತ್ತು ಪಂಗಡದವರಿಗೆ ಭೂಮಿ ಖರೀದಿಸಿ ಹಂಚಿಕೆ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ, ಇದಕ್ಕಾಗಿ ರೂಪಿಸಿರುವ ಯೋಜನೆಗಳಾವುವು; (ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಗಾಗಿ ಮೀಸಲಿಟ್ಟಿರುವ ಅನುದಾನ ಎಷ್ಟು; ಅಗತ್ಯ ಅನುದಾನವನ್ನು ಯಾವ ಮೂಲದಿಂದ ಸಂಗ್ರಹಿಸಲಾಗುವುದು;

(ಇ) ಈ ಯೋಜನೆಯು ಯಾವಾಗಿನಿಂದ ಜಾರಿಗೆ ಬಂದಿದೆ; ಈವರೆಗೆ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಎಷ್ಟು ಎಕರೆ ಜಮೀನು ಖರೀದಿಸಲಾಗಿದೆ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಈ) ಈ ಯೋಜನೆಯನ್ನು ಯಶಸ್ವಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯೋಜನೆಯನ್ನು ವಿಸ್ತರಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ? (ವಿವರ ನೀಡುವುದು)

## ಭವನಗಳ ನಿರ್ಮಾಣ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೧ (೧೫೫೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಧಾರವಾಡ ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ನಿರ್ಮಾಣವಾಗಿರುವ ಅಂಬೇಡ್ಕರ್ ಭವನ, ಜಗಜೀವನ್ ರಾಂ ಭವನ ಮತ್ತು ವಾಲ್ಮೀಕಿ ಭವನಗಳು ಎಷ್ಟು; (ಪ್ರತಿ ಭವನಗಳವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಇವುಗಳಲ್ಲಿ ಎಷ್ಟು ಭವನಗಳ ನಿರ್ಮಾಣ ಕಾರ್ಯ ಪೂರ್ಣಗೊಂಡಿವೆ; ಎಷ್ಟು ನಿರ್ಮಾಣ ಹಂತದಲ್ಲಿವೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇವುಗಳು ಪೂರ್ಣಗೊಳ್ಳದಿರಲು ಕಾರಣಗಳೇನು; (ಭವನವಾರು ವಿವರ ನೀಡುವುದು)

(ಈ) ಈ ಭವನಗಳಿಗೆ ಮಂಜೂರಾಗಿರುವ ಹಣ ಎಷ್ಟು; ಇನ್ನು ಎಷ್ಟು ಹಣ ಬೇಕಾಗಿರುತ್ತದೆ; ಇದುವರೆಗೆ ಎಷ್ಟು ಹಣ ಒದಗಿಸಲಾಗಿದೆ; ನಿರ್ಮಾಣಕ್ಕೆ ಬಾಕಿ ಹಣವನ್ನು ಒದಗಿಸಲು ಸರ್ಕಾರ ಹಾಕಿಕೊಂಡಿರುವ ಕಾಲಮಿತಿ ಏನು? (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

## ರಂಗಮಂದಿರ ಹಾಗೂ ಸಾಂಸ್ಕೃತಿಕ ಭವನಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೨ (೧೫೪೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ರಂಗಮಂದಿರ, ಸಾಂಸ್ಕೃತಿಕ ಭವನ ನಿರ್ಮಾಣಕ್ಕಾಗಿ ಕಳೆದ ೩ ವರ್ಷಗಳಲ್ಲಿ ವೆಚ್ಚ ಮಾಡಿರುವ ಮೊತ್ತ ಎಷ್ಟು; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ರಂಗಮಂದಿರ, ಸಾಂಸ್ಕೃತಿಕ ಭವನಗಳನ್ನು ಸ್ಥಾಪಿಸಲು ಅನುದಾನ ನೀಡಲು ಇರುವ ಮಾನದಂಡಗಳೇನು; (ಆದೇಶ ಪ್ರತಿಗಳೊಂದಿಗೆ ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ೨೦೧೬-೧೭ನೇ ಸಾಲಿನಲ್ಲಿ ಸಾಂಸ್ಕೃತಿಕ ಭವನ, ರಂಗಮಂದಿರ ಸ್ಥಾಪಿಸಲು ಮೀಸಲಿಟ್ಟಿರುವ ಮೊತ್ತವೆಷ್ಟು;

(ಈ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಗೆ ಮೀಸಲಿಟ್ಟ ಮೊತ್ತ ಎಷ್ಟು? (ವಿವರ ನೀಡುವುದು)

**ನಿಗಮಗಳ ವತಿಯಿಂದ ಕೊಳವೆ ಬಾವಿಗಳ ಮಂಜೂರಾತಿ ಕುರಿತು**

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೬೩ (೧೫೪೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಮತ್ತು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಎಷ್ಟು ಕೊಳವೆ ಬಾವಿಗಳನ್ನು ಮಂಜೂರು ಮಾಡಲಾಗಿದೆ; ಅವುಗಳು ಯಾವುವು; (ತಾಲ್ಲೂಕುವಾರು, ನಿಗಮವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಮೂರು ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿವೆ; ಎಷ್ಟು ವಿಫಲವಾಗಿದೆ; ಎಷ್ಟು ಸಫಲವಾಗಿವೆ; ಇವುಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲಾಗಿದೆಯೇ;

(ಇ) ಬಾಕಿ ಉಳಿದಿರುವ ಕೊಳವೆ ಬಾವಿಗಳನ್ನು ಯಾವ ಕಾಲಮಿತಿಯಲ್ಲಿ ಕೊರೆಯಲಾಗುವುದು? (ವಿವರ ನೀಡುವುದು)

## ಪ್ರಾಥಮಿಕ ಆರೋಗ್ಯ ಕೇಂದ್ರದ ಮೂಲಸೌಲಭ್ಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೬೪ (೧೫೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಿವಮೊಗ್ಗ ಜಿಲ್ಲೆ, ಸೊರಬ ತಾಲ್ಲೂಕು ಬೆಟ್ಟದಕುರ್ಲಿ ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕಳೆದ ಮೂರು ವರ್ಷಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗಾಗಿ ಬಿಡುಗಡೆಯಾದ ಅನುದಾನ ಎಷ್ಟು; (ವರ್ಷಾವಾರು ವಿವರ ನೀಡುವುದು)

(ಆ) ಈ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಅವರಣಕ್ಕೆ ಸ್ವಚ್ಛತೆಯನ್ನು ಕಾಂಪೌಂಡ್ ನಿರ್ಮಾಣ ಮಾಡುವ ಕಾರ್ಯವನ್ನು ಯಾವ ಕಾಲಮಿತಿಯೊಳಗೆ ನಿಗಧಿಪಡಿಸಿಕೊಳ್ಳಲಾಗಿದೆ;

(ಇ) ಹಾಗಿದ್ದಲ್ಲಿ, ಈ ಕಾಂಪೌಂಡ್ ನಿರ್ಮಾಣವನ್ನು ಕೈಗೆತ್ತಿಕೊಳ್ಳಲಾಗುವುದು ಯಾವಾಗ? (ವಿವರ ನೀಡುವುದು)

## ಮಾನಸಿಕ ಅಸ್ವಸ್ಥರು, ವೃದ್ಧರು, ಭಿಕ್ಷಾಟಣೆ ಮಾಡುತ್ತಿರುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೬೫ (೧೫೪೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿಕ್ಕಮಗಳೂರು ಜಿಲ್ಲೆಯ ಅನೇಕ ನಗರ ಪ್ರದೇಶಗಳಲ್ಲಿ ಮಾನಸಿಕ ಅಸ್ವಸ್ಥರು, ವೃದ್ಧರು, ಮಹಿಳೆಯರು ಮತ್ತು ಮಕ್ಕಳು ಭಿಕ್ಷಾಟಣೆ ಮಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಾದರೆ, ಸರ್ಕಾರ ಈ ಕುರಿತು ಯಾವ ಕ್ರಮ ಕೈಗೊಂಡಿದೆ ; (ವಿವರಣೆ ನೀಡುವುದು)

(ಆ) ರಸ್ತೆಯಲ್ಲಿ ಮಾನಸಿಕ ಅಸ್ವಸ್ಥರು ಜನರಿಗೆ ತೊಂದರೆ ಕೊಡುತ್ತಿದ್ದು, ಈ ವಿಚಾರವಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಭಿಕ್ಷೆ ಬೇಡುವ ಎಷ್ಟು ಜನರನ್ನು ರಕ್ಷಿಸಲಾಗಿದೆ ; (ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಎಷ್ಟು ನಿರಾಶ್ರಿತರ ಕೇಂದ್ರಗಳು ಇವೆ ? (ತಾಲ್ಲೂಕುವಾರು ವಿವರ ನೀಡುವುದು)

## ದೇವರಾಜು ಅರಸು ನಿಗಮದಿಂದ ಕೊಳವೆ ಬಾವಿ ಕೊರೆಯಿಸುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೬ (೧೫೪೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ದೇವರಾಜು ಅರಸು ಅಭಿವೃದ್ಧಿ ನಿಗಮದಿಂದ ಎಷ್ಟು ಫಲಾನುಭವಿಗಳಿಗೆ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿ ಕೊರೆಸಲಾಗಿದೆ ; (ತಾಲ್ಲೂಕವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಸಫಲವಾಗಿರುವ ಹಾಗೂ ವಿಫಲವಾಗಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಸಫಲವಾಗಿರುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ನೀಡಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ವಿದ್ಯುತ್ ಸಂಪರ್ಕ ನೀಡದೆ ಇರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಇದುವರೆಗೂ ವಿದ್ಯುತ್ ಸಂಪರ್ಕ ನೀಡದೆ ಇರಲು ಕಾರಣಗಳೇನು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿ ಇತರೆ ಜಾತಿಯವರಿಗೆ ಮತ್ತು ಓಬಿಸಿ ಜಾತಿಗಳ ಫಲಾನುಭವಿಗಳಿಗೆ ಕೊಳವೆ ಬಾವಿಗಳನ್ನು ಕೊರೆಸಲು ಅವಕಾಶವಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ವರ್ಗದವರಿಗೆ ಈ ಯೋಜನೆಯಡಿ ಅವಕಾಶವಿದೆ ? (ಮಾಹಿತಿ ನೀಡುವುದು)

## ಪ್ರವಾಸಿ ಟ್ಯಾಕ್ಸಿ ಯೋಜನೆಯ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೭ (೧೫ಳಳ) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸೋದ್ಯಮ ಇಲಾಖೆಯಿಂದ ಪ್ರತಿ ವರ್ಷ ನೀಡುವ ಪ್ರವಾಸಿ ಟ್ಯಾಕ್ಸಿ ಯೋಜನೆಯ ಮುಖ್ಯ ಉದ್ದೇಶವೇನು ; (ವಿವರ ನೀಡುವುದು)

(ಆ) ಪ್ರವಾಸಿ ಟ್ಯಾಕ್ಸಿಯನ್ನು ಯಾವ ಯಾವ ವರ್ಗಕ್ಕೆ ನೀಡಲಾಗುತ್ತಿದೆ; ಇದರ ಮಾನದಂಡವೇನು ;

(ಇ) ಆಯ್ಕೆ ಸಂದರ್ಭದಲ್ಲಿ ಯಾವ ಮಾನದಂಡವನ್ನು ಪರಿಗಣಿಸಲಾಗಿದೆ; (ವಿವರ ನೀಡುವುದು)

(ಈ) ಫಲಾನುಭವಿಗಳ ಆಯ್ಕೆ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ. ಅಂಕದ ಆಧಾರದ ಮೇಲೆ ಹಾಗೂ ವಯಸ್ಸಿನ ಆಧಾರದ ಮೇಲೆ ಆಯ್ಕೆ ಮಾಡಲು ಸರ್ಕಾರ ಆದೇಶ ಮಾಡಿದೆಯೇ ; (ವಿವರ ನೀಡುವುದು)

(ಉ) ಈ ಯೋಜನೆಗೆ ಕಳೆದ ೨೦೧೩-೧೪ ರಿಂದ ೨೦೧೬-೧೭ನೇ ಸಾಲಿನವರೆಗೆ ಚಿಕ್ಕಮಗಳೂರು ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು ? (ತಾಲ್ಲೂಕುವಾರು/ಫಲಾನುಭವಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## ಬಡ ಕುಟುಂಬದವರಿಗೆ ಸಹಾಯ ಧನದ ಮೂಲಕ ಅಡುಗೆ ಅನಿಲ ಸಿಲಿಂಡರ್‌ಗಳನ್ನು ಒದಗಿಸುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೬೮ (೧೬೮೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ನಗರ ವ್ಯಾಪ್ತಿಯಲ್ಲಿ ಸೀಮೆ ಎಣ್ಣೆ ವಿತರಣೆಯನ್ನು ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸೀಮೆ ಎಣ್ಣೆ ವಿತರಣೆ ಪ್ರಾರಂಭಿಸುವುದು ಯಾವಾಗ ;

(ಆ) ಅಡುಗೆ ಅನಿಲ ಸಂಪರ್ಕವಿಲ್ಲದ ಬಡ ಕುಟುಂಬಗಳಿಗೆ ಸಹಾಯಧನದ ಮೂಲಕ ಅಡುಗೆ ಅನಿಲ ಸಿಲಿಂಡರ್‌ಗಳನ್ನು ಸರ್ಕಾರದ ವತಿಯಿಂದ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ ;

(ಇ) ಸೀಮೆ ಎಣ್ಣೆ ಮಾರಾಟ ಮಳಿಗೆಯಲ್ಲಿ ಐದು ಕೆ.ಜಿ. ತೂಕದ ಅನಿಲ ಸಿಲಿಂಡರ್ ಮಾರಾಟಕ್ಕೆ ಅವಕಾಶ ನೀಡುವ ಕೇಂದ್ರ ಸರ್ಕಾರದ ಯೋಜನೆಯನ್ನು ರಾಜ್ಯ ಸರ್ಕಾರವು ಅನುಷ್ಠಾನಗೊಳಿಸಲಿದೆಯೇ ?

## ರಾಜ್ಯದ ಆಯಾಯ ಜಿಲ್ಲೆಯ ಜಿಲ್ಲಾ ಉತ್ಸವ ನಡೆಸುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೯ (೧೫೫೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಆಯಾಯ ಜಿಲ್ಲೆಯ ನಾಡು, ನುಡಿ. ಸಂಸ್ಕೃತಿ ಪರಂಪರೆಯನ್ನು ಬಿಂಬಿಸುವ ಹಾಗೂ ವೈಭವೀಕರಣಗೊಳಿಸುವ ಜಿಲ್ಲಾ ಉತ್ಸವಗಳನ್ನು ನಡೆಸಲು ಸರ್ಕಾರ ಉದ್ದೇಶಿಸಿದೆಯೇ ; ಉದ್ದೇಶಿಸಿದ್ದರೆ, ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಹಂಪಿ ಉತ್ಸವ, ಬಾದಾಮಿ ಉತ್ಸವ ಮಾದರಿಯಲ್ಲಿ ಶಿವಮೊಗ್ಗದಲ್ಲಿ ಸಹ್ಯಾದ್ರಿ ಉತ್ಸವವನ್ನು ನಡೆಸಲು ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ; (ವಿವರ ನೀಡುವುದು)

(ಇ) ಮುಂದಿನ ವರ್ಷದಿಂದ ಶಿವಮೊಗ್ಗದಲ್ಲಿ ಸಹ್ಯಾದ್ರಿ ಉತ್ಸವವನ್ನು ನಡೆಸುವ ಚಿಂತನೆ ಸರ್ಕಾರದ ಮುಂದಿದೆಯೇ ?

## ಶಿವಮೊಗ್ಗ ಜಿಲ್ಲೆಯಲ್ಲಿ ಪರಿಶಿಷ್ಠ ಜಾತಿ ಪರಿಶಿಷ್ಠ ಪಂಗಡ ಅಲ್ಪಸಂಖ್ಯಾತರ ಮೆಟ್ರಿಕ್ ಹಾಸ್ಟೆಲ್‌ಗಳ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೭೦ (೧೬೮೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳ ಹಾಸ್ಟೆಲ್ ಸಂಖ್ಯೆ ಎಷ್ಟು ;

(ಆ) ಸದರಿ ಹಾಸ್ಟೆಲ್‌ಗಳಿಗೆ ಪ್ರವೇಶ ಪಡೆಯಲು ಅರ್ಜಿ ಸಲ್ಲಿಸಲು ಇರುವ ಮಾರ್ಗಸೂಚಿಗಳೇನು ;

(ಇ) ಕಳೆದ ಸಾಲಿನಲ್ಲಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಈ) ಎಲ್ಲಾ ಹಾಸ್ಟೆಲ್‌ಗಳಲ್ಲೂ ವಾರ್ಡನ್‌ಗಳು ಕಾರ್ಯ ನಿರ್ವಹಿಸುತ್ತಿದ್ದಾರೆಯೇ ; ಇಲ್ಲದಿದ್ದಲ್ಲಿ, ವಾರ್ಡನ್‌ಗಳ ಭರ್ತಿಗೆ ಸರ್ಕಾರವು ಕೈಗೊಂಡಿರುವ ಕ್ರಮಗಳಾವುವು ;

(ಉ) ಈ ಎಲ್ಲಾ ಹಾಸ್ಟೆಲ್‌ಗಳ ನಿರ್ವಹಣೆಗೆ ಹೊರಗುತ್ತಿಗೆ ಆಧಾರದ ಮೇರೆಗೆ ನೇಮಕ ಮಾಡಿಕೊಂಡಿದ್ದಲ್ಲಿ, ಯಾವ ಏಜೆನ್ಸಿಗೆ ಸಂದಾಯ ಮಾಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಅವರ ಸೇವಾ ಶುಲ್ಕದ ಮೊತ್ತವೆಷ್ಟು ?

## ಪ್ರವಾಸೋದ್ಯಮ ಇಲಾಖೆಗೆ ಕೇಂದ್ರ ಸರ್ಕಾರ ಅನುದಾನದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೭೧ (೧೬೯೭) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸೋದ್ಯಮ ಇಲಾಖೆಗೆ ಕೇಂದ್ರ ಸರ್ಕಾರದಿಂದ ಹಣ ಬಿಡುಗಡೆ ಮಾಡಿರುವುದು ನಿಜವೇ ;

(ಆ) ಹಾಗಿದ್ದರೆ, ೨೦೦೮ ರಿಂದ ೨೦೧೭ ರವರೆಗೆ ಕೇಂದ್ರ ಸರ್ಕಾರದಿಂದ ಪ್ರವಾಸೋದ್ಯಮ ಇಲಾಖೆಗೆ ಬಿಡುಗಡೆ ಮಾಡಿರುವ ಹಣವೆಷ್ಟು; ರಾಜ್ಯ ಸರ್ಕಾರದಿಂದ ಮೀಸಲಿಟ್ಟ ಹಣವೆಷ್ಟು ; ವರ್ಷಾವಾರು ವಿವರ ನೀಡುವುದು)

(ಇ) ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಹಣದಲ್ಲಿ ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ / ಪೂರ್ಣಗೊಳಿಸಲಾಗಿದೆ ; ಯೋಜನೆಗೆ ಖರ್ಚಾದ ಹಣವೆಷ್ಟು; (ವರ್ಷಾವಾರು ವಿವರ ನೀಡುವುದು)

(ಈ) ಪ್ರವಾಸೋದ್ಯಮ ಇಲಾಖೆಯಿಂದ ಉದ್ದೇಶಿಸಿರುವ ಹೊಸ ಯೋಜನೆಗಳು ಯಾವುವು ? (ವಿವರ ನೀಡುವುದು)

## ಅನ್ನ ಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) ಹಾಗೂ ಶ್ರೀ ಐವನ್ ಡಿ'ಸೋಜಾ (ನಾಮ ನಿರ್ದೇಶನ ಹೊಂದಿದವರು):–**

೧೮೭೨ (೧೬೮೯+೧೭೨೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ "ಅನ್ನ ಭಾಗ್ಯ" ಯೋಜನೆಗೆ ಕೇಂದ್ರ ಸರ್ಕಾರ ಅಕ್ಕಿ, ಗೋಧಿ ಮತ್ತು ಸಕ್ಕರೆಯನ್ನು ಸಬ್ಸಿಡಿ ದರದಲ್ಲಿ ನೀಡುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಈ ಅನ್ನ ಭಾಗ್ಯ ಯೋಜನೆಯ ಅಡಿಯಲ್ಲಿ ನೀಡುತ್ತಿರುವ ಆಹಾರ ಪದಾರ್ಥಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನದ ಪಾಲು ಎಷ್ಟು ; (ವಿವರ ನೀಡುವುದು)

(ಇ) ಕೇಂದ್ರ ಸರ್ಕಾರ ಅನುದಾನ ನೀಡುವುದನ್ನು ನಿಲ್ಲಿಸಿದ್ದಲ್ಲಿ, ಸಕ್ಕರೆಯನ್ನು ಕಾರ್ಡ್‌ದಾರರಿಗೆ ವಿತರಿಸಲು ಆಗುವುದಿಲ್ಲ ಎಂಬ ಹೇಳಿಕೆ ಸರಿಯೇ ; ಸಕ್ಕರೆ ವಿತರಣೆಯನ್ನು ಯಾವ ಕಾರಣಕ್ಕಾಗಿ ನಿಲ್ಲಿಸಲಾಗಿದೆ ; ದೊರೆಯಬೇಕಾದ ಸಬ್ಸಿಡಿ ಮೊತ್ತ ಎಷ್ಟು ; (ವಿವರ ನೀಡುವುದು)

(ಈ) ೨೦೧೩–೧೪ ರಿಂದ ೨೦೧೬–೧೭ ರವರೆಗೆ ಒಟ್ಟು ಕೇಂದ್ರ ಸರ್ಕಾರ ನೀಡಿದ ಅಕ್ಕಿ, ಗೋಧಿ ಮತ್ತು ಸಕ್ಕರೆಯ ಪ್ರಮಾಣ ಎಷ್ಟು ; (ವರ್ಷಾವಾರು ವಿವರಗಳನ್ನು ನೀಡುವುದು)

(ಉ) ರಾಜ್ಯದಲ್ಲಿ ಒಟ್ಟು ಬಿ.ಪಿ.ಎಲ್ ಕಾರ್ಡ್ ಮತ್ತು ಎ.ಪಿ.ಎಲ್ ಕಾರ್ಡ್ ಹೊಂದಿದವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಊ) ಅನ್ನಭಾಗ್ಯ ಯೋಜನೆಯಲ್ಲಿ ಆಗುತ್ತಿರುವ ಅಕ್ರಮಗಳನ್ನು ನಿಯಂತ್ರಿಸಲು ಇಲಾಖೆ ಕೈಗೊಂಡ ಕ್ರಮಗಳೇನು ; ಎಷ್ಟು ಬೋಗಸ್ ಕಾರ್ಡ್‌ಗಳನ್ನು ಪತ್ತೆ ಹಚ್ಚಲಾಗಿದೆ ; ಅವರ ಮೇಲೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ವಿಶೇಷ ಘಟಕ ಯೋಜನೆಯಡಿಯಲ್ಲಿ ಖರ್ಚಾಗದೆ ಇರುವ ಹಣದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೭೩ (೧೫೮೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯು ವಿಶೇಷ ಘಟಕ ಯೋಜನೆಯಡಿಯಲ್ಲಿ ಕಳೆದ ೩ ವರ್ಷಗಳಲ್ಲಿ ಪ್ರತಿ ವಿಧಾನ ಸಭಾ ಕ್ಷೇತ್ರದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳ/ ಯೋಜನೆಗಳ ವಿವರಗಳೇನು ; (ಪೂರ್ಣ ವಿವರಗಳನ್ನು ಒದಗಿಸುವುದು);

(ಆ) ಇದಕ್ಕಾಗಿ ಈ ಅವಧಿಯಲ್ಲಿ ಪ್ರತಿ ವರ್ಷ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ವೆಚ್ಚ ಮಾಡಲಾಗಿರುವ ಹಣವೆಷ್ಟು ;

(ಇ) ಇದನ್ನು ಹೊರತುಪಡಿಸಿ ಇನ್ನೂ ಖರ್ಚಾಗದೇ ಉಳಿದಿರುವ ಹಣವೆಷ್ಟು ; ನಿಗಧಿತ ಅವಧಿಯಲ್ಲಿ ಈ ಅನುದಾನವನ್ನು ವೆಚ್ಚ ಮಾಡುವಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಈ) ಈ ಯೋಜನೆಯಲ್ಲಿ ಖರ್ಚಾಗದೇ ಉಳಿದಿರುವ ಹಣವನ್ನು ಖರ್ಚು ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು ? (ವಿವರ ನೀಡುವುದು)

## ಹಾಸ್ಟೆಲ್ ಮಕ್ಕಳಿಗೆ ಊಟದ ವ್ಯವಸ್ಥೆಗೆ ಅನುದಾನ ಬಿಡುಗಡೆ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೭೪(೧೫೮೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿರುವ ವಿವಿಧ ಹಾಸ್ಟೆಲ್‌ಗಳ ಸಂಖ್ಯೆಯೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಈ ಹಾಸ್ಟೆಲ್‌ಗಳ ಮಕ್ಕಳ ಊಟದ ವ್ಯವಸ್ಥೆಗೆ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು ; (ವರ್ಷಾವಾರು ಮಾಹಿತಿ ನೀಡುವುದು)

(ಇ) ಈ ಹಾಸ್ಟೆಲ್‌ಗಳಲ್ಲಿರುವ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿವಿಧ ಊಟದ ಮಾಹಿತಿ ಹಾಗೂ ಪ್ರತಿ ವಿದ್ಯಾರ್ಥಿಗೆ ದಿನವೊಂದಕ್ಕೆ ಸರ್ಕಾರವು ಭರಿಸುತ್ತಿರುವ ಹಣವೆಷ್ಟು ; (ತಾಲ್ಲೂಕುವಾರು ಸ್ಪಷ್ಟ ಮಾಹಿತಿ ಒದಗಿಸುವುದು)

(ಈ) ಕಳೆದ ೩ ವರ್ಷಗಳಲ್ಲಿ ಕಳಪೆ ಗುಣಮಟ್ಟದ ಆಹಾರ ಸೇವಿಸಿ ಅಸ್ಥವೆಸ್ಥಗೊಂಡ ಘಟನೆಗಳೆಷ್ಟು ; (ಹಾಸ್ಟೆಲ್‌ಗಳವಾರು ಮಾಹಿತಿ ಒದಗಿಸುವುದು)

(ಉ) ಹಾಗಿದ್ದಲ್ಲಿ, ಇಂತಹ ಘಟನೆಗಳಿಗೆ ಕಾರಣರಾದ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ಹಾಸ್ಟೆಲ್‌ಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## ವೈದ್ಯಕೀಯ ಕಾಲೇಜಿನ ಕಾಮಗಾರಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೭೫ (೧೫೮೯) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಈ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಖರ್ಚು ಮಾಡಿದ ಅನುದಾನವೆಷ್ಟು; (ಕಾಲೇಜುಗಳವಾರು ಸ್ಪಷ್ಟ ಮಾಹಿತಿ ನೀಡುವುದು)

(ಇ) ಬೀದರ್ ಜಿಲ್ಲೆಯ ವೈದ್ಯಕೀಯ ಕಾಲೇಜಿಗೆ ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆಯಲ್ಲಿ ಮಂಜೂರಾದ ಅನುದಾನವೆಷ್ಟು; ಈ ಅನುದಾನವು ಯಾವ ಯಾವ ಯೋಜನೆಗೆ ಬಳಕೆ ಮಾಡಿಕೊಳ್ಳಲಾಗಿದೆ, ಬಳಕೆ ಮಾಡಿಕೊಂಡಿದ್ದಲ್ಲಿ, ಅದರ ಸ್ಪಷ್ಟ ಮಾಹಿತಿ ನೀಡುವುದು; (ವರ್ಷಾವಾರು ಯೋಜನೆವಾರು ವಿವರ ನೀಡುವುದು)

(ಈ) ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಲ್ಲಿ ಅನುದಾನ ಮಂಜೂರು ಮಾಡಲು ಇರುವ ಮಾನದಂಡಗಳೇನು ?

## ಖಾಸಗಿ ಆಯುರ್ವೇದಿಕ್ ಆಸ್ಪತ್ರೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೭೬ (೧೫೯೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಖಾಸಗಿ ಆಯುರ್ವೇದಿಕ್ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಆಸ್ಪತ್ರೆಯ ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಆ) ಈ ಆಸ್ಪತ್ರೆಗಳನ್ನು ನಡೆಸಲು ಸರ್ಕಾರವು ವಿಧಿಸಿರುವ ಮಾನದಂಡಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಆಸ್ಪತ್ರೆಗಳಲ್ಲಿ ದರ ನಿಗಧಿಪಡಿಸಲು ಇರುವ ಮಾನದಂಡಗಳೇನು; ದರ ಪಟ್ಟಿಯನ್ನು ಪರಿಶೀಲಿಸುವ ಅಧಿಕಾರಿ ಯಾರು ; ಇವರಿಗೆ ಇರುವ ಹೊಣೆಗಾರಿಕೆ ಮತ್ತು ಜವಾಬ್ದಾರಿಗಳೇನು ; (ಸ್ಪಷ್ಟ ಮಾಹಿತಿ ನೀಡುವುದು)

(ಈ) ಈ ಆಸ್ಪತ್ರೆಗಳಿಂದ ಸರ್ಕಾರಕ್ಕೆ ಬರುವ ಆದಾಯದ ಪ್ರಮಾಣ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಅನರ್ಹರ ಬಳಿ ಇರುವ ಬಿ.ಪಿ.ಎಲ್ ಕಾರ್ಡುಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೭೭ (೧೫೯೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ಅನರ್ಹರು ಬಿ.ಪಿ.ಎಲ್ ಕಾರ್ಡುಗಳನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ಎರಡು ವರ್ಷಗಳ ಅವಧಿಯಲ್ಲಿ ಈ ರೀತಿಯ ಎಷ್ಟು ಸಂಖ್ಯೆಯ ಬಿ.ಪಿ.ಎಲ್ ಕಾರ್ಡುಗಳನ್ನು ರದ್ದು ಪಡಿಸಲಾಗಿದೆ;

(ಇ) ಅನರ್ಹರ ಬಳಿ ಬಿ.ಪಿ.ಎಲ್ ಕಾರ್ಡುಗಳು ಪತ್ತೆಯಾದಲ್ಲಿ ನಿಯಮಗಳ ಅನುಸಾರ ಅಂತಹವರ ವಿರುದ್ಧ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಬಹುದಾಗಿದೆ ;

(ಈ) ಇದರ ಅನ್ವಯ ಇದುವರೆವಿಗೂ ಎಷ್ಟು ಜನರ ವಿರುದ್ಧ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಹಾಗೂ ಅರ್ಹರನ್ನು ಗುರುತಿಸಿ ಬಿ.ಪಿ.ಎಲ್ ಕಾರ್ಡುಗಳನ್ನು ನೀಡುವಲ್ಲಿ ಆಗುತ್ತಿರುವ ವಿಳಂಬವನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಸಂಸ್ಕೃತಿ ನೀಡಿ ಘೋಷಣೆ ಮಾಡಿರುವ ಬಗ್ಗೆ

**ಶ್ರೀ ಹೆಚ್ ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೭೮ (೧೫೮೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾಂಸ್ಕೃತಿಕ ನೀತಿಯನ್ನು ಘೋಷಣೆ ಮಾಡಿದ್ದು ಯಾವಾಗ ;

(ಆ) ಸಾಂಸ್ಕೃತಿಕ ನೀತಿ ಪರಿಶೀಲನೆಗೆ ಉಪ ಸಮಿತಿಯನ್ನು ರಚಿಸಲಾಗಿದೆಯೇ ; ಹಾಗಿದ್ದಲ್ಲಿ, ರಚನೆ ಗೊಂಡಿದ್ದು ಯಾವಾಗ;

(ಇ) ಸಾಂಸ್ಕೃತಿಕ ನೀತಿ ಜಾರಿಗೆ ಬರಲು ವಿಳಂಬವಾಗುತ್ತಿರಲು ಕಾರಣವೇನು ? (ವಿವರ ನೀಡುವುದು)

## ವಿಶ್ವವಿದ್ಯಾಲಯಗಳಲ್ಲಿ ಹಿಂದುಳಿದ ವರ್ಗಗಳ ಘಟಕ ಕಾರ್ಯನಿರ್ವಹಿಸುವ ಬಗ್ಗೆ

**ಶ್ರೀ ಹೆಚ್ ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೭೯ (೧೫೮೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ವಿಶ್ವವಿದ್ಯಾಲಯಗಳಲ್ಲಿ ಹಿಂದುಳಿದ ವರ್ಗಗಳ ಘಟಕಗಳು (ಓಬಿಸಿ ಸೆಲ್) ಕಾರ್ಯನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಆ) ವಿಶ್ವವಿದ್ಯಾಲಯಗಳ ಹಿಂದುಳಿದ ವರ್ಗಗಳ ಘಟಕಗಳಿಗೆ ಸರ್ಕಾರ ಅನುದಾನ ನೀಡುತ್ತಿದೆಯೇ ; ನೀಡುತ್ತಿದ್ದರೆ, ಅದರ ವಿವರ ನೀಡುವುದು)

(ಇ) ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ತಾಂತ್ರಿಕ ಕೋರ್ಸ್‌ಗಳಿಗೆ ಹಾಗೂ ವಿಶ್ವವಿದ್ಯಾಲಯಗಳಿಗೆ ಪ್ರವೇಶ ಪಡೆಯುವಾಗ ಅವರ ಶುಲ್ಕವನ್ನು ಸರ್ಕಾರವೇ ಪಾವತಿ ಮಾಡುವ ವ್ಯವಸ್ಥೆ ಜಾರಿಯಾಗಿದೆಯೇ ? (ಆ ಯೋಜನೆಯ ವಿವರಗಳನ್ನು ನೀಡುವುದು)

## ರಾಜ್ಯದಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯದ ಜನಾಂಗಕ್ಕೆ ರೂಪಿಸಿರುವ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಹೆಚ್ ಎಂ. ರೇವಣ್ಣ ಮತ್ತು ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೮೦ (೧೫೮೦+೧೬೮೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಸಮೂದಾಯದ ಜನಸಂಖ್ಯೆ ಎಷ್ಟು ; ಯಾವ ಯಾವ ಜಿಲ್ಲೆಗಳಲ್ಲಿ ಅಲೆಮಾರಿ ಮತ್ತು ಅಲೆಮಾರಿ ಸಮುದಾಯದ ಜನಾಂಗದವರು ವಾಸಮಾಡುತ್ತಿರುತ್ತಾರೆ ;

(ಆ) ರಾಜ್ಯದಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯಗಳಿಗಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳಾವುವು ; (ಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ಐದು ವರ್ಷಗಳಿಂದ ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯಗಳಿಗಾಗಿ ಮೀಸಲಿಟ್ಟ ಹಣವೆಷ್ಟು ; ಪ್ರಸ್ತುತ ಖರ್ಚಾಗಿರುವ ಮೊತ್ತ ಎಷ್ಟು ; (ವಿವರ ಒದಗಿಸುವುದು)

(ಈ) ೨೦೧೪-೧೫ನೇ ಸಾಲಿನಿಂದ ಇಲ್ಲಿಯವರೆಗೆ ಹಿಂದುಳಿದ ವರ್ಗಗಳ ಇಲಾಖೆ ವತಿಯಿಂದ ಅಲೆಮಾರಿ/ಅರೆ ಅಲೆಮಾರಿ ಜನಾಂಗಕ್ಕೆ ನೀಡಲಾಗಿರುವ ಮನೆಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು) ವಿತರಿಸಲಾದ ಮನೆಗಳಲ್ಲಿ ಪೂರ್ಣಗೊಂಡಿರುವ ಮನೆಗಳ ಸಂಖ್ಯೆ ಎಷ್ಟು ;

(ಉ) ಪ್ರಾರಂಭ ಮಾಡದೇ ಇರುವ ಮನೆಗಳ ಸಂಖ್ಯೆ ಎಷ್ಟು ; ಪ್ರಾರಂಭಿಸದೇ ಇರುವ ಮನೆಗಳನ್ನು ಬೇರೆ ಕಡೆ ಸ್ಥಳಾಂತರಿಸುವ ಅವಕಾಶ ಇದೆಯೇ ?

## ಮಡಿಲು ಯೋಜನೆಯನ್ನು ಮುಂದುವರೆಸುವ ಬಗ್ಗೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :-**

೧೮೮೧ (೧೭೧೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಡಿಲು ಯೋಜನೆ ಪ್ರಾರಂಭವಾದ ವರ್ಷ ಮತ್ತು ಉದ್ದೇಶವೇನು; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಎಷ್ಟು ಜನ ಶಿಶು ಮತ್ತು ತಾಯಂದಿರಿಗೆ ಇದರ ಪ್ರಯೋಜನವಾಗಿದೆ ; (ಸಂಕ್ಷಿಪ್ತ ವಿವರ ನೀಡುವುದು)

(ಇ) ಮಡಿಲು ಯೋಜನೆಯ ಕಿಟ್‌ಗಳನ್ನು ೨೦೧೭-೧೮ರ ಶೈಕ್ಷಣಿಕ ವರ್ಷದಿಂದ ನೀಡಲು ಸೂಕ್ತ ಅನುದಾನ ಬಿಡುಗಡೆ ಮಾಡಲಾಗಿದೆಯೇ ; ಈಗ ಇರುವ ದಾಸ್ತಾನು ಕುರಿತು ವಿವರ ನೀಡುವುದು ;

(ಈ) ಯಾವುದೇ ಕೊರತೆ ಇಲ್ಲದಂತೆ ಸರಿಯಾದ ಸಮಯದಲ್ಲಿ ಕಿಟ್ ವಿತರಿಸಲು ಯಾವ ರೀತಿಯ ಟೆಂಡರ್ ಮತ್ತು ಇತರೆ ಪ್ರಕ್ರಿಯೆಗಳನ್ನು ಮಾಡಲಾಗಿದೆ ;

(ಉ) ಸದರಿ ಯೋಜನೆಯುನ್ನು ಸ್ಥಗಿತಗೊಳಿಸಲು ಸರ್ಕಾರ ಮುಂದಾಗಿರುವುದು ನಿಜವೇ ; ಬಡ ಮಹಿಳೆಯರಿಗೆ ಇದೊಂದು ಅತಿ ಉಪಯುಕ್ತ ಯೋಜನೆಯಾಗಿರುವುದರಿಂದ, ಇದನ್ನು ಮುಂದುವರೆಸಬಹುದೇ ?

## ಸ್ಪರ್ಧಾ ಚೇತನ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :-**

೧೮೮೨ (೧೭೧೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಶೇಷವಾಗಿ ವಿಕಲಚೇತನರ ಸಬಲೀಕರಣಕ್ಕಾಗಿ ಪ್ರಾರಂಭವಾದ "ಸ್ಪರ್ಧಾ ಚೇತನ" ಯೋಜನೆಯು ಪ್ರಾರಂಭವಾಗಿದ್ದು, ಯಾವ ವರ್ಷ ಮತ್ತು ಇದರ ಉದ್ದೇಶವೇನು ; (ವಿವರ ನೀಡುವುದು)

(ಆ) ಇದುವರೆವಿಗೂ ಈ ಯೋಜನೆಯು ಅನುಷ್ಠಾನಕ್ಕೆ ಬಿಡುಗಡೆಯಾಗಿರುವ ಹಣ ಎಷ್ಟು ; (ವಿವರ ನೀಡುವುದು)

(ಇ) ಬಿಡುಗಡೆಯಾದ ಹಣದಲ್ಲಿ ಎಷ್ಟು ಜನ ವಿಕಲಚೇತನರಿಗೆ ತರಬೇತಿ ಹಾಗೂ ಇನ್ನಿತರೆ ಸೌಲಭ್ಯ ಕಲ್ಪಿಸಲಾಗಿದೆ ; ಎಷ್ಟು ಹಣವನ್ನು ವಿನಿಯೋಗಿಸಲಾಗಿದೆ ; (ವಿವರ ನೀಡುವುದು)

(ಈ) ಈ ಯೋಜನೆಯ ಅನುಷ್ಠಾನ ಕುಂಠಿತಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿ ಆಗಲು ಕಾರಣವೇನು ; ಇದು ವೇಗಗತಿಯಲ್ಲಿ ಹಾಗೂ ಸಮರ್ಪಕವಾಗಿ ಫಲಾನುಭವಿಗಳು ಪ್ರಯೋಜನ ಪಡೆಯುವಂತಾಗಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ಸ್ಕಿನ್ ಬ್ಯಾಂಕ್ ಕೇಂದ್ರಗಳನ್ನು ವಿಸ್ತರಿಸುವ ಕುರಿತು

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :–**

೧೮೮೩ (೧೭೧೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ಕಿನ್ ಬ್ಯಾಂಕ್ ಕುರಿತು ವಿವರ ನೀಡುವುದು ; ರಾಜ್ಯದಲ್ಲಿ ಎಷ್ಟು ಸರ್ಕಾರಿ ಮತ್ತು ಖಾಸಗಿ ಸ್ಕಿನ್ ಬ್ಯಾಂಕ್‌ಗಳಿವೆ; (ವಿವರ ನೀಡುವುದು) ಸ್ಕಿನ್ ಬ್ಯಾಂಕ್ ಅಗತ್ಯತೆ ಏನು; (ವಿವರ ನೀಡುವುದು)

(ಆ) ಸ್ಕಿನ್ ಬ್ಯಾಂಕ್‌ನ ಉದ್ದೇಶ ಮತ್ತು ಸಾರ್ವಜನಿಕರಿಗೆ ಅದರ ಪ್ರಯೋಜನವೇನು ; (ವಿವರ ನೀಡುವುದು)

(ಇ) ಬಡವರಿಗೆ, ಬಿ.ಪಿ.ಎಲ್. ಕಾರ್ಡುದಾರರಿಗೆ ಚರ್ಮದ ಕಸಿಯ ಅಗತ್ಯವಿದ್ದಲ್ಲಿ ಉಚಿತವಾಗಿ ಒದಗಿಸಲಾಗುವುದೇ ;

(ಈ) ಸರ್ಕಾರಿ ಸ್ಕಿನ್ ಬ್ಯಾಂಕ್ ಕೇಂದ್ರಗಳನ್ನು ವಿಸ್ತರಿಸಲು ಸರ್ಕಾರ ಮುಂದಾಗುವುದೇ ?

## ಚಿತ್ರದುರ್ಗ ಜಿಲ್ಲಾ ಸರ್ಕಾರಿ ಆಸ್ಪತ್ರೆಗಳ ವೈದ್ಯರ ಕೊರತೆ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೮೪ (೧೫೩೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ಇದೆಯೇ ; ಇದ್ದಲ್ಲಿ, ಅದನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು;

(ಆ) ಹಾಲಿ ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ಇರುವ ಖಾಯಂ ಹಾಗೂ ಗುತ್ತಿಗೆ ಆಧಾರದ ವೈದ್ಯರ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)

(ಇ) ೨೦೧೬ ನೇ ಸಾಲಿನಲ್ಲಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಒಳರೋಗಿಗಳ ಸಂಖ್ಯೆ ಎಷ್ಟು ? (ಮಾಹಿತಿ ಒದಗಿಸುವುದು)

## ಚಿತ್ರದುರ್ಗ ಕಲ್ಲಿನ ಕೋಟೆ ಪ್ರವಾಸಿಗರ ಮೂಲಸೌಕರ್ಯ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೮೫ (೧೫೩೮) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗದ ಕಲ್ಲಿನಕೋಟೆ ವೀಕ್ಷಣೆಗೆ ಆಗಮಿಸುವ ಪ್ರವಾಸಿಗರು ಅಗತ್ಯವಾದ ಮೂಲಭೂತ ಸೌಕರ್ಯಗಳು ಇಲ್ಲದೆ ಪರದಾಡುತ್ತಿರುವುದು ಪ್ರವಾಸೋದ್ಯಮ ಇಲಾಖೆಯ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹೆಚ್ಚಿನ ಮೂಲಸೌಕರ್ಯ ಒದಗಿಸಲು ಸರ್ಕಾರ ವಹಿಸಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಚಿತ್ರದುರ್ಗ ಕಲ್ಲಿನಕೋಟೆ ಪ್ರವಾಸೋದ್ಯಮ ಸ್ಥಳವಾಗಿ ಅಭಿವೃದ್ಧಿಪಡಿಸಲು ಸರ್ಕಾರ ಕಳೆದ ೩ ವರ್ಷಗಳಲ್ಲಿ ನೀಡಿರುವ ಅನುದಾನ ಎಷ್ಟು ? (ಮಾಹಿತಿ ಒದಗಿಸುವುದು)

## ಪಡಿತರ ವ್ಯವಸ್ಥೆಯ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೧೮೮೬ (೧೭೬೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ರಾಜ್ಯದಲ್ಲಿ ಎಷ್ಟು ಸಹಕಾರ ಸಂಘಗಳು ಮತ್ತು ಸಂಘ ಸಂಸ್ಥೆಗಳ ಮೂಲಕ ಪಡಿತರಗಳನ್ನು ವಿತರಣೆ ಮಾಡುತ್ತಿದೆ ;

(ಆ) ರಾಜ್ಯ ಸರ್ಕಾರವು ರಾಜ್ಯದಲ್ಲಿ ಮಹಿಳಾ ಸ್ವ ಸಹಾಯ ಸಂಘಗಳ ಮೂಲಕ ನೀಡುತ್ತಿರುವ ಒಟ್ಟು ಪಡಿತರ ಚೀಟಿಗಳ ಸಂಖ್ಯೆ ಎಷ್ಟು; ಪ್ರಸಕ್ತ ಸಾಲಿನಲ್ಲಿ ಎಷ್ಟು ಮಹಿಳಾ ಸ್ವ ಸಹಾಯ ಸಂಘ ಹಾಗೂ ಸಹಕಾರ ಸಂಘಗಳ ಮೂಲಕ ಪಡಿತರ ವಿತರಣೆ ಮಾಡಲು ಸರ್ಕಾರ ಗುರಿ ಹೊಂದಿರುತ್ತದೆ ;

(ಇ) ರಾಜ್ಯದ ಎಲ್ಲಾ ಕಡು ಬಡವರಿಗೆ ಬಿ.ಪಿ.ಎಲ್ ಕಾರ್ಡ್‌ಗಳನ್ನು ನೀಡಲಾಗಿರುತ್ತದೆಯೇ ; ನೋಟು ಅಮಾನ್ಯೀಕರಣ ನಂತರ ರಾಜ್ಯದಲ್ಲಿ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ರದ್ದುಪಡಿಸಲಾಗಿರುತ್ತದೆ ;

(ಈ) ಬಿ.ಪಿ.ಎಲ್ ಕಾರ್ಡ್ ಹಂಚಿಕೆ ಮಾಡಲು ಬಡತನ ರೇಖೆಯ ಮಾರ್ಗ ಸೂಚಿಗಳನ್ನು ಬದಲಾವಣೆ ಮಾಡುವ ಯಾವುದಾದರೂ ಉದ್ದೇಶ ಸರ್ಕಾರಕ್ಕೆ ಇದೆಯೇ ?

## ಜಿಲ್ಲಾ ಕೇಂದ್ರಗಳಲ್ಲಿ Super Speciality ಆಸ್ಪತ್ರೆಯ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೧೮೮೭ (೧೭೫೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಪ್ರತಿ ಜಿಲ್ಲೆಯಲ್ಲಿ ಸೂಪರ್ ಸ್ಪೆಷಾಲಿಟಿ (Super Speciality hospitals) ತೆರೆಯಲು ಯಾವುದಾದರೂ ಕ್ರಮ ಕೈಗೊಂಡಿರುತ್ತದೆಯೇ ; ಕೈಗೊಂಡಿದ್ದಲ್ಲಿ, ಇಲ್ಲಿಯರೆಗೆ ಜಿಲ್ಲಾವಾರು ಎಷ್ಟು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ತೆರೆಯಲಾಗಿದೆ ;

(ಆ) ರಾಜ್ಯದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಎಷ್ಟು ವೈದ್ಯರ ಹುದ್ದೆಗಳು ಖಾಲಿ ಇರುತ್ತದೆ ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಯಾವ ಕ್ರಮ ಕೈಗೊಂಡಿರುತ್ತದೆ ;

(ಇ) ರಾಜ್ಯದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ನೀಡಲಾಗುವ ಗುಳಿಗೆ/ ಲಸಿಕೆಗಳ ದಾಸ್ತಾನು ಎಷ್ಟು ; ಕೊರತೆ ಇದ್ದಲ್ಲಿ, ರಾಜ್ಯ ಸರ್ಕಾರವು ಯಾವ ಕ್ರಮ ಕೈಗೊಂಡಿರುತ್ತದೆ?

## ಪ್ರಾಧಿಕಾರದ ಅಧ್ಯಕ್ಷರ ನೇಮಕಾತಿ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೧೮೮೮ (೧೭೬೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದ ಒಟ್ಟು ಎಷ್ಟು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವ್ಯಾಪ್ತಿಯ ಪ್ರಾಧಿಕಾರಗಳ ಅಧ್ಯಕ್ಷರ ನೇಮಕಾತಿ ಬಾಕಿ ಇರುತ್ತದೆ ; ಬಾಕಿ ಇದ್ದಲ್ಲಿ, ಯಾವ ಕಾರಣಕ್ಕೆ ಇಲ್ಲಿಯವರೆಗೆ ಪ್ರಾಧಿಕಾರದ ಅಧ್ಯಕ್ಷರ ನೇಮಕಾತಿ ಆಗಿರುವುದಿಲ್ಲ ;

(ಆ) ಕರ್ನಾಟಕ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಪ್ರತಿ ವರ್ಷ ಒಟ್ಟು ಎಷ್ಟು ಮಂದಿ ನ್ಯಾಯಾಧೀಶರಿಗೆ ಕನ್ನಡದಲ್ಲಿ ತೀರ್ಪು ಬರೆದಿರುವ ಕಾರಣಕ್ಕೆ ಪುರಸ್ಕಾರ ನೀಡಲಾಗಿದೆ ; ಇದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಕನ್ನಡದಲ್ಲಿ ವಕೀಲ ವೃತ್ತಿ ಮಾಡುವ ವಕೀಲರಿಗೆ ಪುರಸ್ಕಾರ ಮಾಡುವ ಯಾವುದಾದರೂ ಪ್ರಸ್ತಾಪ ಇದೆಯೇ ;

(ಈ) ವೃತ್ತಿ ಶಿಕ್ಷಣದಲ್ಲಿ ಪ್ರತಿ ವರ್ಷ ಎಷ್ಟು ಮಂದಿ ಕನ್ನಡದಲ್ಲಿ ಪರೀಕ್ಷೆ ಬರೆಯುತ್ತಿದ್ದಾರೆ ; ವೃತ್ತಿ ಶಿಕ್ಷಣ ವಿದ್ಯಾರ್ಥಿಗಳು ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅನುಕೂಲವಾಗುವಂತೆ ಪ್ರೋತ್ಸಾಹಿಸಲು ರಾಜ್ಯ ಸರ್ಕಾರವು ಯಾವುದಾದರೂ ಯೋಜನೆಯನ್ನು ರೂಪಿಸಿದೆಯೇ ?

## ರಾಜ್ಯ ಪ್ರವಾಸೋದ್ಯಮ ಯೋಜನೆ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :-**

೧೮೮೯ (೧೭೬೦) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ಪ್ರವಾಸೋದ್ಯಮ ಯೋಜನೆ ಜಾರಿಯಲ್ಲಿದೆಯೇ ; ಜಾರಿಯಲ್ಲಿದ್ದಲ್ಲಿ, ಎಷ್ಟು ವರ್ಷಗಳ ಅವಧಿಯವರೆಗೆ ಯೋಜನೆಯನ್ನು ಜಾರಿಗೊಳಿಸಲಾಗಿದೆ ;

(ಆ) ಜಿಲ್ಲಾ ಪ್ರವಾಸೋದ್ಯಮ ಸಮಿತಿಗೆ ಸ್ಥಳೀಯ ಶಾಸಕರನ್ನು ಸದಸ್ಯರನ್ನಾಗಿ ನೇಮಿಸಲಾಗಿದೆಯೇ ; ನೇಮಿಸದೆ ಇದ್ದಲ್ಲಿ, ನೇಮಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಪ್ರಸಕ್ತ ೨೦೧೬-೧೭ ನೇ ಸಾಲಿನಲ್ಲಿ ತುಮಕೂರು ಜಿಲ್ಲೆಗೆ ಎಷ್ಟು ಯಾತ್ರಿ ನಿವಾಸಗಳನ್ನು ಮಂಜೂರು ಮಾಡಲಾಗಿರುತ್ತದೆ ; ಈ ಯೋಜನೆಯಲ್ಲಿ ಚಿಕ್ಕನಾಯಕನಹಳ್ಳಿ ತಾಲ್ಲೂಕಿಗೆ ಎಷ್ಟು ಯಾತ್ರಿ ನಿವಾಸಗಳನ್ನು ನೀಡಲಾಗಿರುತ್ತದೆ ;

(ಈ) ರಾಜ್ಯ ಸರ್ಕಾರವು ಬಯಲುಸೀಮೆ ಪ್ರದೇಶದ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಪಡಿಸಲು ಯಾವುದಾದರೂ ಯೋಜನೆ ಕೈಗೊಂಡಿದೆಯೇ ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಯುವಕರಿಗೆ ಟ್ಯಾಕ್ಸಿ ಖರೀದಿಸಲು ಸಬ್ಸಿಡಿ ನೀಡುತ್ತಿರುವ ಬಗ್ಗೆ

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೯೦ (೧೭೦೧) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ನಿರುದ್ಯೋಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಯುವಕರಿಗೆ ಟ್ಯಾಕ್ಸಿ ಖರೀದಿಸಲು ಸಬ್ಸಿಡಿ ನೀಡುತ್ತಿದ್ದು, ಇದರಲ್ಲಿ ಪ್ರವಾಸೋದ್ಯಮ ಇಲಾಖೆ ಯಾವುದೇ ಕಾರು ಖರೀದಿಗೂ ೨ ಲಕ್ಷ ರೂಪಾಯಿ ಸಬ್ಸಿಡಿ ನೀಡುತ್ತದೆ ಮತ್ತು ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಉದ್ಯಮಶೀಲತೆ ಯೋಜನೆಯಡಿ ೧೦ ಲಕ್ಷ ರೂಪಾಯಿಕ್ಕಿಂತ ಕಡಿಮೆ ಮೌಲ್ಯದ ಕಾರು ಖರೀದಿಗೆ ೩.೫ಲಕ್ಷ ರೂಪಾಯಿ ಸಬ್ಸಿಡಿ

ಮತ್ತು ೧೦ ಲಕ್ಷಕ್ಕೂ ಹೆಚ್ಚಿನ ಮೌಲ್ಯದ ಕಾರು ಖರೀದಿಗೆ ೫ ಲಕ್ಷ ರೂಪಾಯಿ ಸಬ್ಸಿಡಿ ನೀಡುತ್ತಿದೆ. ಈ ವ್ಯತ್ಯಾಸ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ತಮ್ಮ ಇಲಾಖೆಯಿಂದಲೂ ಅದೇ ರೀತಿ ಸಬ್ಸಿಡಿ ನೀಡದಿರಲು ಕಾರಣವೇನು ; ಅದಕ್ಕೆ ಇರುವ ಅನಾನುಕೂಲಗಳೇನು ?

## ವಸತಿ ನಿಲಯಗಳ ಬಗ್ಗೆ

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೯೧ (೧೭೦೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪದವಿ ಮತ್ತು ಪದವಿ ಪೂರ್ವ ಹಾಗೂ ಮೆಟ್ರಿಕ್ ಪೂರ್ವ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಯಾವ ಯಾವ ವರ್ಷದಲ್ಲಿ ಪ್ರಾರಂಭಿಸಲ್ಪಟ್ಟಿವೆ ; ಹಾಗಿದ್ದಲ್ಲಿ, ಸಿಬ್ಬಂದಿಗಳನ್ನು ನೇಮಕಾತಿ ಮಾಡಲಾಗಿದೆ ; (ವೃಂದವಾರು ವಿವರವಾದ ಮಾಹಿತಿ ನೀಡುವುದು) ಇಲ್ಲದಿದ್ದಲ್ಲಿ, ಕಾರಣವೇನು ;

(ಆ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ, ನವೋದಯ ವಸತಿ ಶಾಲೆ ಹಾಗೂ ಏಕಲವ್ಯ ವಸತಿ ಶಾಲೆಗಳೆಷ್ಟು ; ಸದರಿ ವಸತಿ ಶಾಲೆಗಳಿಗೆ ಮಂಜೂರಾದ ಸಿಬ್ಬಂದಿಗಳೆಷ್ಟು ; ಮಂಜೂರಾದ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆಯೇ ; (ವೃಂದವಾರು ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಿಸಲಾಗಿದೆಯೇ ; ಹಾಗಿದ್ದಲ್ಲಿ, ಪೂರ್ಣಗೊಂಡ ಮತ್ತು ಅಪೂರ್ಣಗೊಂಡ ಕಾಮಗಾರಿಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಸದರಿ ವಸತಿ ನಿಲಯಗಳು ಗುತ್ತಿಗೆ ಆಧಾರದ ಮೇಲೆ ಊಟ ಉಪಚಾರಗಳನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಲ್ಲಿ, ಕಳಪೆ ಮಟ್ಟದ ಊಟ ಉಪಚಾರ ಮತ್ತು ಭ್ರಷ್ಠಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಂತಹ ಅಧಿಕಾರಿಗಳ ವಿರುದ್ಧ ತೆಗೆದುಕೊಂಡ ಕ್ರಮವೇನು ;

(ಉ) ಸದರಿ ವಸತಿ ನಿಲಯದ ವಿದ್ಯಾರ್ಥಿಗಳಿಗೆ ಏನೇನು ಸೌಲಭ್ಯಗಳನ್ನು ವಿತರಿಸಲಾಗುವುದು ; ಇದಕ್ಕೆ ಆಗುವ ಖರ್ಚು ಎಷ್ಟು ; (ವಿವರ ನೀಡುವುದು)

(ಊ) ಕಳೆದ ೪ ವರ್ಷಗಳಿಂದ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಇರುವ ನಿಗಮಗಳೆಷ್ಟು ; ಸದರಿ ನಿಯಮಗಳ ವಿವಿಧ ಯೋಜನೆಗಳಿಗೆ ಮಂಜೂರಾದ ಹಣ ಎಷ್ಟು ;

(ಋ) ರಾಯಚೂರು ಜಿಲ್ಲೆಗೆ ಕಳೆದ ೩ ವರ್ಷಗಳಿಂದ ಪರಿಶಿಷ್ಟ ಜಾತಿ/ ವರ್ಗಗಳ ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳಿಗೆ ಮಂಜೂರಾದ/ಖರ್ಚಾದ ಹಣ ಎಷ್ಟು ; (ವರ್ಷವಾರು ವಿವರ ನೀಡುವುದು) ವಿವಿಧ ಅಭಿವೃದ್ಧಿ ನಿಗಮಗಳಲ್ಲಿ ವಿವಿಧ ಯೋಜನೆಗಳಿಗೆ ಮಂಜೂರಾದ ಹಣ ಎಷ್ಟು ; ಇದರ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಜಾತಿವಾರು ವಿವರ ನೀಡುವುದು)

(ಎ) ಸದರಿ ಯೋಜನೆಗಳಲ್ಲಿ ಭಾರಿ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ತೆಗೆದುಕೊಂಡ ಕ್ರಮವೇನು ? (ವಿವರ ನೀಡುವುದು)

## ಶಾಸಕರ ಪ್ರದೇಶಾಭಿವೃದ್ಧಿ ಕಾಮಗಾರಿಗಳ ಬಗ್ಗೆ

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೯೨ (೧೭೦೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೧೦ ವರ್ಷಗಳಿಂದ ರಾಯಚೂರು ಜಿಲ್ಲಾ ಶಾಸಕರ ಮತ್ತು ವಿಧಾನ ಪರಿಷತ್ ಸದಸ್ಯರ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ ; ಮಂಜೂರಾದ ಹಣ, ಖರ್ಚಾದ ಹಣ ಮತ್ತು ಉಳಿದ ಹಣವೆಷ್ಟು ; (ತಾಲ್ಲೂಕುವಾರು, ಗ್ರಾಮವಾರು ವಿವರವಾದ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಯಾವ ಯಾವ ಏಜೆನ್ಸಿ ಮುಖಾಂತರ ಸದರಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ ; ಆ ಪೈಕಿ ಪೂರ್ಣಗೊಂಡ ಮತ್ತು ಅಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ; (ಕಾಮಗಾರಿವಾರು ವಿವರವಾದ ಮಾಹಿತಿ ನೀಡುವುದು)

(ಇ) ಕಳೆದ ೧೦ ವರ್ಷಗಳಿಂದ ರಾಯಚೂರು ಜಿಲ್ಲೆಗೆ ನಂಜುಂಡಪ್ಪ ವರದಿಯ ಶಿಫಾರಸ್ಸುಗಳ ಅನ್ವಯ ಮತ್ತು ಹೆಚ್.ಕೆ.ಡಿ.ಪಿ. ಜಿಲ್ಲಾ ಅಭಿವೃದ್ಧಿ ನಿಧಿಯಲ್ಲಿ ಹಾಗೂ ೩೭೧ಜೆ ಅಡಿಯಲ್ಲಿ ಮಂಜೂರಾದ ಹಣವೆಷ್ಟು ? (ಖರ್ಚಾದ ಹಣದ ವಿವರವಾದ ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆಯ ನ್ಯಾಯಬೆಲೆ ಅಂಗಡಿಗಳ ಬಗ್ಗೆ

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೯೩ (೧೭೦೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮವಾರು, ವಿವರವಾದ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಮೀಸಲಾತಿ ನಿಯಮವನ್ನು ಅಳವಡಿಸಲಾಗಿದೆಯೇ ; ಹಾಗಿದ್ದಲ್ಲಿ, ವಿವರವಾದ ಮಾಹಿತಿ ನೀಡುವುದು ;

(ಇ) ಸದರಿ ನ್ಯಾಯಬೆಲೆ ಅಂಗಡಿಗಳಲ್ಲಿ ಯಾವ ಯಾವ ದವಸ, ಧಾನ್ಯ ಹಾಗೂ ಇನ್ನಿತರ ಸಾಮಾಗ್ರಿಗಳನ್ನು ವಿತರಿಸಲಾಗುತ್ತಿದೆಯೇ ; (ವಿವರ ನೀಡುವುದು)

(ಈ) ಸದರಿ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವೃಂದವಾರು ವಿವರ ನೀಡುವುದು)

## ವಿವಿಧ ಆರೋಗ್ಯ ಯೋಜನೆಗಳನ್ನು ವಿಲೀನಗೊಳಿಸುತ್ತಿರುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೮೯೪ (೧೭೩೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) 'ಯಶಸ್ವಿನಿ' ವಾಜಪೇಯಿ ಆರೋಗ್ಯ ಹಾಗೂ ಇತರೆ ಆರೋಗ್ಯ ಯೋಜನೆಗಳನ್ನು ವಿಲೀನಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ವಿಲೀನಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಆ) ವಿಲೀನಗೊಳಿಸಲು ಮುಂದಾಗಿದ್ದಲ್ಲಿ ಯಾವ ಯಾವ ಯೋಜನೆಗಳನ್ನು ವಿಲೀನಗೊಳಿಸಲಾಗುತ್ತದೆ ;

(ಇ) ವಿಲೀನದ ನಂತರ ಸರ್ಕಾರ ಯಾವ ರೀತಿ ಸಾರ್ವಜನಿಕರಿಗೆ ಆರೋಗ್ಯ ಯೋಜನೆಯನ್ನು ನೀಡುತ್ತದೆ ; ಅದರ ನಿಯಮ ಮತ್ತು ರೂಪುರೇಷೆಗಳೇನು ? (ವಿವರ ನೀಡುವುದು)

## O.T Technician ಎಂಬ ಅರೆ ವೈದ್ಯಕೀಯ ಸಿಬ್ಬಂದಿಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೧೮೯೫ (೧೭೩೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) O.T ಕೊಠಡಿ (ಶಸ್ತ್ರಚಿಕಿತ್ಸಾ ಕೊಠಡಿ)ಗಳಲ್ಲಿ ವೈದ್ಯರಿಗೆ (surgeon) ಸಹಾಯಕರಾಗಿ ಕಾರ್ಯನಿರ್ವಹಿಸಲು O.T Technician ಎಂಬ ಅರೆ ವೈದ್ಯಕೀಯ ಸಿಬ್ಬಂದಿಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರಸ್ತುತ O.T ಕೋರ್ಸ್‌ಗಳು (certificate in Operation Theatre ಮತ್ತು Diploma in Operation Theatre) ಅರೆ ವೈದ್ಯಕೀಯ ಮಂಡಳಿಯಿಂದ ವಿವಿಧ ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕೋರ್ಸ್‌ಗಳನ್ನು ಮಾಡಿದ ಅಭ್ಯರ್ಥಿಗಳನ್ನು ಇಲಾಖೆಯ ನೇಮಕಾತಿಯಲ್ಲಿ ಪರಿಗಣಿಸಲಾಗುವುದೇ ;

(ಈ) ಈ ತರಬೇತಿ ಪಡೆದ ಅಭ್ಯರ್ಥಿಗಳಿಗಾಗಿ ಇಲಾಖೆಯಲ್ಲಿ ವೃಂದ ನೇಮಕಾತಿ (C&R) ನಿಯಮಾವಳಿಯನ್ನು ರಚಿಸಲಾಗುವುದೇ ; ರಚಿಸುವುದಾದರೆ ಯಾವಾಗ ?

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ ಮಾಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೧೮೯೬ (೧೫೮೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಖಾಲಿ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು ವಿವರ ನೀಡುವುದು)

(ಆ) ಈ ಬ್ಯಾಕ್‌ಲಾಗ್ ಹುದ್ದೆಗಳು ಯಾವಾಗಿನಿಂದ ಖಾಲಿ ಇವೆ ;

(ಇ) ಈ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಆಲೋಚಿಸಿದೆಯೇ ; ಆಲೋಚಿಸಿದ್ದಲ್ಲಿ, ಭರ್ತಿ ಮಾಡಲಾಗುವುದು ಯಾವಾಗ ?

## ಅನುಸೂಚಿತ ಜಾತಿ ಮತ್ತು ಪಂಗಡಗಳ ಉಪಯೋಜನೆ ಕಾಯ್ದೆ-೨೦೧೩ರ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೧೮೯೭ (೧೫೮೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಉಪಯೋಜನೆ ಕಾಯ್ದೆ-೨೦೧೩ಕ್ಕೆ ನಿಯಮಗಳನ್ನು ರೂಪಿಸಲಾಗಿದೆಯೇ ;

(ಆ) ಕನಿಷ್ಠ ೬ ತಿಂಗಳಿಂದ ೧ ವರ್ಷದೊಳಗೆ ನಿಯಮಗಳನ್ನು ರೂಪಿಸಬೇಕಾಗಿದ್ದು, ಇಲ್ಲಿಯವರೆಗೆ ಈ ಕಾಯ್ದೆಗೆ ನಿಯಮಗಳನ್ನು ರಚಿಸದಿರಲು ಕಾರಣವೇನು ;

(ಇ) ನಿಯಮಗಳನ್ನು ರಚಿಸುವ ಆಲೋಚನೆ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಯಾವಾಗ ರಚಿಸಲಾಗುವುದು ?

## ಸಮುದಾಯ ಭವನಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೯೯೮ (೧೫೮೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷದಿಂದ ರಾಜ್ಯದಲ್ಲಿ ಯಾವ ಯಾವ ಯೋಜನೆಗಳಿಗೆ ಒಟ್ಟು ಎಷ್ಟು ಸಮುದಾಯ ಭವನಗಳಿಗೆ ಮಂಜೂರಾತಿ ನೀಡಲಾಗಿದೆ ; ಇದಕ್ಕಾಗಿ ಮಂಜೂರು ಮಾಡಿರುವ ಹಣ ಎಷ್ಟು ;

(ಆ) ಕಳೆದ ೩ ವರ್ಷದಿಂದ ಸಮುದಾಯ ಭವನಗಳಿಗೆ ಮಂಜೂರಾತಿ ಕೋರಿ ಬಂದಿರುವ ಅರ್ಜಿಗಳೆಷ್ಟು ; ಎಷ್ಟು ಅರ್ಜಿಗಳನ್ನು ಸ್ವೀಕರಿಸಿ ಸಮುದಾಯ ಭವನ ಮಂಜೂರು ಮಾಡಲಾಗಿದೆ ; ಇವುಗಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ಮಂಜೂರು ಮಾಡಿರುವ ಸಮುದಾಯ ಭವನಗಳನ್ನು ವಿವರವನ್ನು ಜಾತಿವಾರು ನೀಡುವುದು)

(ಇ) ಸಮುದಾಯ ಭವನಗಳನ್ನು ಮಂಜೂರು ಮಾಡುವಾಗ ಅನುಸರಿಸುವ ಮಾನದಂಡಗಳೇನು ; ಮಾನದಂಡಗಳನ್ನು ಸರಿಯಾಗಿ ಅನುಸರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಾಕಿ ಇರುವ ಅರ್ಜಿಗಳೆಷ್ಟು ; ಈ ಅರ್ಜಿಗಳಿಗೆ ಸಂಬಂಧಪಟ್ಟಂತೆ ಸಮುದಾಯ ಭವನಗಳನ್ನು ಮಂಜೂರು ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ? (ತಾಲ್ಲೂಕುವಾರು ಬಾಕಿ ಇರುವ ಅರ್ಜಿಗಳ ವಿವರಗಳನ್ನು ನೀಡುವುದು)

## ರಾಜ್ಯದಲ್ಲಿ ಪಡಿತರ ಸಾಮಾಗ್ರಿಗಳು ಸಮರ್ಪಕವಾಗಿ ವಿತರಣೆಯಾಗುತ್ತಿಲ್ಲದಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ.ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೯ (೧೫೪೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಪಡಿತರ ಚೀಟಿದಾರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು) ಹಾಗೂ ಕೊಡಗು ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ ಯಾವ ಯಾವ ಪಡಿತರಗಳನ್ನು ಎಷ್ಟು ಪ್ರಮಾಣದಲ್ಲಿ ನೀಡಲಾಗುತ್ತಿದೆ ; (ಮಾಹಿತಿ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳು ರದ್ದುಗೊಳ್ಳುತ್ತಿರುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾರಣವೇನು ;

(ಈ) ಕೊಡಗು ಜಿಲ್ಲೆಯಲ್ಲಿ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಪಡಿತರ ಸಾಮಾಗ್ರಿಗಳು ಸಮರ್ಪಕವಾಗಿ ವಿತರಣೆಯಾಗುತ್ತಿಲ್ಲದಿರುವ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇತ್ತೀಚಿನ ದಿನಗಳಲ್ಲಿ ಪಡಿತರ ಬದಲಿಗೆ ಹಣ ನೀಡುವುದಾಗಿ ಘೋಷಿಸಲಾಗಿದೆ ; ಇದಕ್ಕೆ ಕಾರಣವೇನು ? (ವಿವರ ನೀಡುವುದು)

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಪ್ರಾರಂಭಿಸಲಾದ ಹೊಸ ಶಾಲೆಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೦೦ (೧೫೪೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಹೊಸದಾಗಿ ಪ್ರಾರಂಭಿಸಲಾದ ಶಾಲೆಗಳು ಎಷ್ಟು; (ಜಿಲ್ಲಾವಾರು ಸ್ಥಳಗಳ ಹೆಸರುಗಳೊಂದಿಗೆ ವಿವರ ನೀಡುವುದು)

(ಆ) ಈ ಶಾಲೆಗಳಿಗೆ ಎಲ್ಲೆಲ್ಲಿ ಕಟ್ಟಡಗಳನ್ನು ನೀಡಲಾಗಿದೆ, ಇಲ್ಲವಾದಲ್ಲಿ ಶಾಲೆಗಳನ್ನು ಪ್ರಾರಂಭಿಸಲು ಕೈಗೊಂಡ ಕ್ರಮಗಳೇನು ; ಮತ್ತು ಈ ಶಾಲೆಗಳ ಮೇಲುಸ್ತುವಾರಿಯನ್ನು ಯಾರಿಗೆ ವಹಿಸಲಾಗಿದೆ ? (ಹುದ್ದೆ, ಜ್ಯೇಷ್ಠತೆಯೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

## ರೋಗಿಗಳಿಗೆ ೧೦೮ ವಾಹನ ಚಾಲಕರಿಂದ ಹಾಗೂ ಯಶಸ್ವಿನಿ ಕಾರ್ಡ್‌ದಾರರಿಗೆ ಖಾಸಗಿ ಆಸ್ಪತ್ರೆಗಳಿಂದ ಆಗುತ್ತಿರುವ ತೊಂದರೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೦೧ (೧೬೮೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ೧೦೮ ವಾಹನಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಸುಸ್ಥಿತಿಯಲ್ಲಿರುವ ವಾಹನಗಳ ಸಂಖ್ಯೆ ಎಷ್ಟು; ದುರಸ್ಥಿಯಲ್ಲಿ ವಾಹನಗಳ ಸಂಖ್ಯೆ ಎಷ್ಟು ;

(ಆ) ಈ ವಾಹನ ಚಾಲಕರು / ನಿರ್ವಾಹಕರು ರೋಗಿಗಳ ಕಡೆಯವರು ಹೇಳಿದಂತಹ ಸರ್ಕಾರಿ ಆಸ್ಪತ್ರೆಗಳಿಗೆ ಖಾಸಗಿ ಆಸ್ಪತ್ರೆಗಳಿಗೆ ರೋಗಿಗಳನ್ನು ಸಾಗಿಸದೇ, ತಮಗೆ ಇಷ್ಟಬಂದಂತೆ, ಮೊದಲೇ ಗೊತ್ತುಪಡಿಸಿಕೊಂಡಿರುವ ಖಾಸಗಿ ಆಸ್ಪತ್ರೆಗಳಿಗೆ ಕರೆದುಕೊಂಡು ಹೋಗುತ್ತಿರುವುದು, ಹಣವಸೂಲಿ ಮಾಡುವುದು, ಪ್ರಶ್ನಿಸಿದರೆ ಇಲ್ಲದ ಸಬೂಬು ಹೇಳುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ತಪ್ಪಿಸಲು, ರೋಗಿಗಳ ಕಡೆಯವರು ಹೇಳಿದ ಸರ್ಕಾರಿ ಆಸ್ಪತ್ರೆ ಅಥವಾ ಖಾಸಗಿ ಆಸ್ಪತ್ರೆಗಳಿಗೆ ಕರೆದುಕೊಂಡು ಹೋಗುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲು ಸೂಕ್ತ ಕ್ರಮ ಜರುಗಿಸಲಾಗುವುದೇ ;

(ಇ) ಯಶಸ್ವಿನಿ ಕಾರ್ಡ್ ಮೂಲಕ ಖಾಸಗಿ ಆಸ್ಪತ್ರೆಗಳಲ್ಲಿ ನಡೆದ ಚಿಕಿತ್ಸೆಯ ಪೂರ್ಣ ವೆಚ್ಚವನ್ನು ಸರ್ಕಾರ ಭರಿಸುವುದೇ ಅಥವಾ ಭಾಗಶಃ ವೆಚ್ಚವನ್ನು ಭರಿಸುವುದೇ ; ಈ ಬಗ್ಗೆ ಯಾವ ರೀತಿಯ ನಿಯಮ ರೂಪಿಸಲಾಗಿದೆ ; (ವಿವರ ನೀಡುವುದು) ಖಾಸಗಿ ಆಸ್ಪತ್ರೆಗಳವರು ಯಶಸ್ವಿನಿ ಕಾರ್ಡ್ ಮೂಲಕ ಚಿಕಿತ್ಸೆ ಪಡೆದ ರೋಗಿಗಳಿಂದ, ಯಶಸ್ವಿನಿ ಕಾರ್ಡ್ ಮೂಲಕ ಸರ್ಕಾರ ಭರಿಸುವ ವೆಚ್ಚ ಕಡಿಮೆ ಎಂದು, ಉಳಿಕೆ ಹಣವನ್ನು ನೀವೇ ಭರಿಸಬೇಕೆಂದು ಹೇಳಿ ರೋಗಿಗಳಿಂದ ಹೆಚ್ಚುವರಿ ಚಿಕಿತ್ಸಾ ವೆಚ್ಚವೆಂದು ಹಣವನ್ನು ವಸೂಲು ಮಾಡುತ್ತಿದ್ದು, ಈ ಬಗ್ಗೆ ತನಿಖೆ ನಡೆಸಿ ಅಕ್ರಮವಾಗಿ ವಸೂಲು ಮಾಡುವುದನ್ನು ತಡೆಗಟ್ಟಲು ಕ್ರಮ ಜರುಗಿಸಲಾಗುವುದೇ ;

(ಈ) ಯಶಸ್ವಿನಿ ಕಾರ್ಡ್ ಮೂಲಕ ಚಿಕಿತ್ಸೆ ಪಡೆಯುವವರು ವಿಶೇಷ ವಾರ್ಡ್ ಪಡೆದಿದ್ದರೂ, ವಿಶೇಷ ವಾರ್ಡ್ ಪಡೆದಿದ್ದಾರೆಂದು ನಮೂದಿಸಿ ಹೆಚ್ಚಿನ ದರ ವಸೂಲು ಮಾಡುತ್ತಿದ್ದು, ಈ ಬಗ್ಗೆ ತನಿಖೆ ನಡೆಸಿ ಕ್ರಮ ಜರುಗಿಸಲಾಗುವುದೇ ?

## ಪ್ರವಾಸೋದ್ಯಮದ ಅಭಿವೃದ್ಧಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೦೨ (೧೬೮೨) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ಸಾಲಿನಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಕಾವೇರಿ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಸೇರಿದಂತೆ, ವಿವಿಧ ಯೋಜನೆಗಳಿಗಾಗಿ ಒದಗಿಸಿದ್ದ ಆಯವ್ಯಯ ಎಷ್ಟು; ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನ ಎಷ್ಟು ಇದುವರೆಗೆ ಖರ್ಚಾಗದೇ ಉಳಿದ ಅನುದಾನ ಎಷ್ಟು; (ವಿವರ ಒದಗಿಸುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಕಾರ್ಯಗತಗೊಳಿಸಿರುವ ಯೋಜನೆಗಳು ಹಾಗೂ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಪೂರ್ಣಗೊಂಡಿರುವ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳಾವುವು ; (ಪ್ರತಿಯೊಂದು ಕಾಮಗಾರಿಯ ವಿವರಗಳನ್ನು ಒದಗಿಸುವುದು)

(ಇ) ಮೈಸೂರು, ಚಾಮರಾಜನಗರ ಜಿಲ್ಲೆಗಳು ಹಾಗೂ ಕಾವೇರಿ ಪ್ರವಾಸೋದ್ಯಮ ಅಭಿವೃದ್ಧಿ ನಿಗಮಕ್ಕೆ ಸಂಬಂಧಿಸಿದಂತೆ ದೇಶ ವಿದೇಶದ ಪ್ರವಾಸಿಗರಿಗೆ ಒದಗಿಸಲು ಪ್ರವಾಸಿ ಸಾಹಿತ್ಯವನ್ನು (ಟೂರ್ ಲಿಟರೀಚರ್, ವಿವಿಧ ಪ್ರವಾಸಿ ಕೇಂದ್ರಗಳಿಗೆ ಸಂಬಂಧಿಸಿದ ಮಾಹಿತಿ ನೀಡುವ ಫೋಲ್ಡರ್ಸ್, ಟೂರಿಸ್ಟ್ ಮ್ಯಾಪ್ ಇತ್ಯಾದಿ) ಸಿದ್ಧಪಡಿಸಲಾಗಿದೆಯೇ ; ಪ್ರವಾಸೋದ್ಯಮ ಇಲಾಖೆಯ, ನಿಗಮದ ವೆಬ್‌ಸೈಟ್, ಮೊದಲಾದ ಎಲೆಕ್ಟ್ರಾನಿಕ್ ಮೀಡಿಯಾಗಳಲ್ಲಿ ಅದನ್ನು

ಅಪ್‌ಲೋಡ್ ಮಾಡಲಾಗಿದೆಯೇ ; ಯಾವ ಯಾವ ರೀತಿಯ ಮುದ್ರಿತ ಸಾಹಿತ್ಯ ಸಿದ್ಧಪಡಿಸಲಾಗಿದೆ ? (ಪ್ರತಿಯನ್ನು ಒದಗಿಸುವುದು)

## ಪಡಿತರ ಚೀಟಿಗಳ ವಿತರಣೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೦೩ (೧೬೮೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎ.ಪಿ.ಎಲ್./ ಬಿ.ಪಿ.ಎಲ್/ ಅಂತ್ಯೋದಯ ಪಡಿತರ ಚೀಟಿಗಳ ವಿತರಣೆ ಯಾವ ಹಂತದಲ್ಲಿದೆ ; ಇದುವರೆಗೆ ಬಂದಿರುವ ಅರ್ಜಿಗಳು, ವಿಲೇವಾರಿಯಾದ ಅರ್ಜಿಗಳು, ಹಂಚಿಕೆ ಮಾಡಿರುವ ಪಡಿತರ ಚೀಟಿಗಳು, ತಿರಸ್ಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಹೊಸ ಮಾರ್ಗದರ್ಶಿ ಸೂತ್ರಗಳು ಮತ್ತು ನಿಯಮಗಳ ಪ್ರಕಾರ ಎ.ಪಿ.ಎಲ್./ಬಿ.ಪಿ.ಎಲ್./ ಅಂತ್ಯೋದಯ ಕಾರ್ಡ್‌ಗಳನ್ನು ಪಡೆಯಲು ಹೊಸದಾಗಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ; ಈ ಅರ್ಜಿಗಳ ಪರಿಶೀಲನೆ, ಪಡಿತರ ಚೀಟಿಗಳ ವಿತರಣೆ ಯಾವ ಹಂತದಲ್ಲಿದೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಪಡಿತರ ಪಡೆಯಲು ಇದ್ದ ಕೂಪನ್ ವ್ಯವಸ್ಥೆಯನ್ನು ರದ್ದುಗೊಳಿಸಿ ಬಯೋಮೆಟ್ರಿಕ್ ಪದ್ಧತಿಯನ್ನು ಜಾರಿಗೆ ತರಲಾಗುತ್ತಿದೆಯೇ ;

(ಈ) ಈ ಎರಡೂ ಜಿಲ್ಲೆಗಳಲ್ಲಿ ಇರುವ ಸರ್ಕಾರಿ ಮತ್ತು ಖಾಸಗಿ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು

ವಿವರ ಒದಗಿಸುವುದು) ಖಾಸಗಿ ನ್ಯಾಯಬೆಲೆ ಅಂಗಡಿಗಳನ್ನು ರದ್ದುಪಡಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆಯೇ ಅಥವಾ ಮುಂದುವರಿಸಲಾಗುವುದೇ ;

(ಉ) ಖಾಸಗಿ ನ್ಯಾಯಬೆಲೆ ಅಂಗಡಿಗಳ ಮಾಲೀಕರ ಬೇಡಿಕೆಗಳೇನು ; ಅವುಗಳನ್ನು ಈಡೇರಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಬಿ.ಪಿ.ಎಲ್ ಕಾರ್ಡುದಾರರಿಗೆ ಆಧಾರ್ ನಂಬರ್ ಲಿಂಕ್ ಮಾಡುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೦೪ (೧೬೫೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯ ಸೌಲಭ್ಯ ಪಡೆಯುತ್ತಿರುವ ಬಿ.ಪಿ.ಎಲ್. ಪಡಿತರ ಚೀಟಿದಾರರಿಗೆ ಆಧಾರ್ ಕಾರ್ಡ್ ನಂಬರ್ ಕಡ್ಡಾಯದಿಂದ ಸಾರ್ವಜನಿಕರಲ್ಲಿ ಗೊಂದಲ ಉಂಟಾಗಿ ಕಾರ್ಡ್ ಕಳೆದುಕೊಳ್ಳುವ ಭೀತಿಯಲ್ಲಿ ಆತಂಕಕ್ಕಿಡಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಆಧಾರ್ ಕಾರ್ಡ್ ಲಿಂಕ್ ಮಾಡಲು ಗಡುವು ವಿಸ್ತರಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಇ) ಹಾವೇರಿಯಲ್ಲಿ ಆಧಾರ್ ಕಾರ್ಡ್ ಪಡೆದ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು ;

(ಈ) ಆಧಾರ ಕಾರ್ಡ್ ಪಡೆಯದಿರುವ ಕುಟುಂಬಗಳ ಸಂಖ್ಯೆ ಎಷ್ಟು;

(ಉ) ಅಂತಹ ಕುಟುಂಬಗಳಿಗೆ ತ್ವರಿತಗತಿಯಲ್ಲಿ ಆಧಾರ ಕಾರ್ಡ್‌ಗಳನ್ನು ವಿತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅಂಗನವಾಡಿ ಕೇಂದ್ರಗಳಲ್ಲಿ ಕಳಪೆ ಮಟ್ಟದ ಆಹಾರ ಧಾನ್ಯಗಳ ವಿತರಣೆ ಹಾಗೂ ನಿಗಧಿತ ಪ್ರಮಾಣದಲ್ಲಿ ಆಹಾರ ಧಾನ್ಯಗಳನ್ನು ಒದಗಿಸದಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೦೫ (೧೬೬೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇಲಾಖೆಯಿಂದ ಅಂಗನವಾಡಿ ಮಕ್ಕಳಿಗೆ ಹಾಗೂ ಹದಿಹರೆಯದ ಹೆಣ್ಣುಮಕ್ಕಳಿಗೆ ಪೌಷ್ಠಿಕಾಂಶ ಆಹಾರವನ್ನು ಯಾವ ಯಾವ ಯೋಜನೆಯಡಿ, ಯಾವ ಯಾವ ಆಹಾರ ಧಾನ್ಯಗಳನ್ನು ವಿತರಿಸಲಾಗುತ್ತಿದೆ ; ಪ್ರತಿ ಮಗುವಿಗೆ ಯಾವ ಯಾವ ಆಹಾರ ಧಾನ್ಯಗಳನ್ನು ಎಷ್ಟೆಷ್ಟು ಪ್ರಮಾಣದಲ್ಲಿ ನೀಡಲಾಗುವುದು ; (ವಿವರ ನೀಡುವುದು)

(ಆ) ಅಂಗನವಾಡಿ ಕೇಂದ್ರಗಳಲ್ಲಿ ಕಳಪೆ ಮಟ್ಟದ ಆಹಾರ ವಿತರಿಸುತ್ತಿರುವುದು ಹಾಗೂ ಕೆಲವು ಜಿಲ್ಲೆಗಳಲ್ಲಿ ಆಹಾರ ಧಾನ್ಯಗಳನ್ನು ಸರಿಯಾದ ನಿಗದಿತ ಪ್ರಮಾಣದಲ್ಲಿ ವಿತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಯಾವ ಯಾವ ಜಿಲ್ಲೆಯಲ್ಲಿ ಅಕ್ರಮ ನಡೆದಿರುತ್ತದೆ ; ಆ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿವೆ ; (ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಿಂದ ಅಂಗನವಾಡಿ ವಿವಿಧ ಯೋಜನೆಗಳಿಗೆ ಖರ್ಚು ಮಾಡಿರುವ ಅನುದಾನ ಎಷ್ಟು? (ಜಿಲ್ಲಾವಾರು, ತಾಲ್ಲೂಕುವಾರು ಯೋಜನಾವಾರು, ವರ್ಷಾವಾರು ಸಂಪೂರ್ಣ ವಿವರ ನೀಡುವುದು)

## ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೦೬ (೧೬೫೯) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ;

(ಇ) ಕಳೆದ ೨ ವರ್ಷಗಳಿಂದ ವೈದ್ಯಕೀಯ ಶಿಕ್ಷಣ ಇಲಾಖೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳಿಗೆ ವೆಚ್ಚ ಮಾಡಿರುವ ಅನುದಾನವೆಷ್ಟು;

(ಈ) ಪ್ರಸಕ್ತ ಸಾಲಿನಲ್ಲಿ ಎಷ್ಟು ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ತೀರ್ಮಾನಿಸಿದೆ;

(ಉ) ಹಾಗಿದ್ದಲ್ಲಿ, ಹಾವೇರಿ ಮತ್ತು ಇತರೆ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗುವುದೇ?

# ರಾಜ್ಯದಲ್ಲಿ ಒಟ್ಟು ನ್ಯಾಯ ಬೆಲೆ ಅಂಗಡಿ ಹಾಗೂ ಎಪಿಎಲ್ ಮತ್ತು ಬಿಪಿಎಲ್ ಕಾರ್ಡುಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೦೬ (೧೬೫೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು; ಅದರಲ್ಲಿ ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಕಾರ್ಡುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು, ಹಾವೇರಿ ಜಿಲ್ಲೆಯ ತಾಲ್ಲೂಕುವಾರು ಮಾಹಿತಿಯನ್ನು ಪ್ರತ್ಯೇಕವಾಗಿ ಒದಗಿಸುವುದು)

(ಆ) ನ್ಯಾಯಬೆಲೆ ಅಂಗಡಿ ಮುಖಾಂತರ ಪಡಿತರದಾರರಿಗೆ ವಿತರಿಸಲಾಗುತ್ತಿರುವ ಆಹಾರ ಧಾನ್ಯಗಳು ಯಾವುವು ; ಮತ್ತು ಇತರೆ ಯಾವ ವಸ್ತುಗಳನ್ನು ಪಡಿತರದಾರರಿಗೆ ವಿತರಿಸಲಾಗುತ್ತಿದೆ ; (ಜಿಲ್ಲಾವಾರು, ಧಾನ್ಯವಾರು ವಿತರಿಸುವ ವಸ್ತುವಾರು ಸಂಪೂರ್ಣ ಮಾಹಿತಿ ನೀಡುವುದು, ಹಾವೇರಿ ಜಿಲ್ಲೆಯ ತಾಲ್ಲೂಕುವಾರು ಮಾಹಿತಿಯನ್ನು ಪ್ರತ್ಯೇಕವಾಗಿ ಒದಗಿಸುವುದು)

(ಇ) ಕೆಲವು ಜಿಲ್ಲೆಗಳಲ್ಲಿ ಕೆಲವು ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರಿಗೆ ಸರಿಯಾಗಿ ಮಾಪನ ಮಾಡದೆ ಆಹಾರ ಧಾನ್ಯ ವಿತರಿಸುವುದು ಮತ್ತು ಕಳಪೆ ಮಟ್ಟದ ಆಹಾರ ಧಾನ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಯಾವ ಜಿಲ್ಲೆಯಲ್ಲಿ ಬಂದಿದೆ, ಯಾವ ಕ್ರಮ ಕೈಗೊಳ್ಳಲಾಗಿವೆ ? (ವಿವರ ನೀಡುವುದು)

## ಡಾ: ಬಾಬು ಜಗಜೀವನರಾಮ್ ಸಂಶೋಧನಾ ಸಂಸ್ಥೆ ಸ್ಥಾಪನೆ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೦೮ (೧೫೫೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ಮಾಗಡಿ ರಸ್ತೆಯ ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ಡಾ॥ ಬಾಬುಜಗಜೀವನರಾಮ್ ಸಂಶೋಧನಾ ಸಂಸ್ಥೆಯನ್ನು ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಆ) ಡಾ: ಬಾಬುಜಗಜೀವನರಾಮ್ ಸಂಶೋಧನಾ ಸಂಸ್ಥೆಯನ್ನು ಸ್ಥಾಪಿಸಲು ಸರ್ಕಾರ ಯಾವ ರೀತಿಯ ಪೂರ್ವ ಸಿದ್ಧತೆಗಳನ್ನು ನಡೆಸಿದೆ ;

(ಇ) ಸದರಿ ಸಂಸ್ಥೆಯ ಸ್ಥಾಪನೆಗಾಗಿ ಸರ್ಕಾರ ಅನುದಾನವನ್ನು ಮೀಸಲಿಟ್ಟಿದೆಯೇ ; ಮೀಸಲಿಟ್ಟಿದ್ದಲ್ಲಿ ವಿವರ ನೀಡುವುದು ?

## ರಾಜ್ಯದಲ್ಲಿ ಎಂ.ಬಿ.ಬಿ.ಎಸ್. ಸೀಟುಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೦೯ (೧೫೫೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸದ್ಯ ರಾಜ್ಯದಲ್ಲಿ ಲಭ್ಯವಿರುವ ಎಂಬಿಬಿಎಸ್ ಸೀಟುಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿ ಎಂಬಿಬಿಎಸ್ ಸೀಟುಗಳನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಕ್ರಮ ಕೈಗೊಂಡಿದ್ದರೆ, ಎಷ್ಟು ಎಂಬಿಬಿಎಸ್ ಸೀಟುಗಳನ್ನು ಹೆಚ್ಚಿಸಲಾಗಿದೆ ;

(ಈ) ಉದ್ದೇಶಿತ ಬೆಂಗಳೂರಿನ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯ ಆವರಣದಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲಾಗಿದೆಯೇ ; ಅದು ಯಾವ ಹಂತದಲ್ಲಿದೆ ?

## ಗರ್ಭಿಣಿ, ಬಾಣಂತಿಯರಿಗೆ ಮಾತೃ ಪುಷ್ಟೀವರ್ಧಿನಿ ಯೋಜನೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೧೦ (೧೫೫೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾತೃ ಪುಷ್ಟೀವರ್ಧಿನಿ ಯೋಜನೆಯನ್ನು ಸರ್ಕಾರ ಜಾರಿಗೊಳಿಸಿದೆಯೇ ;

(ಆ) ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಉದ್ದೇಶಿತ ಮೈಕ್ರೋನ್ಯೂಟ್ರಿಯಂಟ್ಸ್‌ಗಳನ್ನು ಒದಗಿಸಲಾಗಿದೆಯೇ ;

(ಇ) ಒದಗಿಸಿದ್ದರೆ, ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ಎಷ್ಟು ಗರ್ಭಿಣಿ, ಬಾಣಂತಿಯರಿಗೆ ಒದಗಿಸಲಾಗಿದೆ ;

(ಈ) ರಾಜ್ಯದಲ್ಲಿ ತೀವ್ರ ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳ ಸಂಖ್ಯೆಯನ್ನು ಸರ್ಕಾರ ಗುರುತಿಸಿದೆಯೇ ; ಗುರುತಿಸಿದ್ದರೆ, ಅಪೌಷ್ಠಿಕತೆಯನ್ನು ದೂರ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಮೊರಾರ್ಜಿ ದೇಸಾಯಿ / ಏಕಲವ್ಯ ; ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಮುಂತಾದ ವಸತಿ ಶಾಲೆಗಳ ನೌಕರರಿಗೆ ಕೆ.ಜಿ.ಐ.ಡಿ ಮತ್ತು ಇ.ಜಿ.ಐ.ಎಸ್ ಸೌಲಭ್ಯ ಕುರಿತು

**ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ):–**

೧೯೧೧ (೧೭೪೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ನೌಕರರಿಗೆ ನೀಡುತ್ತಿರುವ ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯ ಕೆ.ಜಿ.ಐ.ಡಿ (ಕಡ್ಡಾಯ ವಿಮಾ ಯೋಜನೆ) ಇ.ಜಿ.ಐ.ಎಸ್ ; (ಸಮೂಹಿಕ ಗುಂಪು ವಿಮಾ ಯೋಜನೆ) ಸೌಲಭ್ಯಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಮೊರಾರ್ಜಿ ದೇಸಾಯಿ/ಏಕಲವ್ಯ/ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಮುಂತಾದ ವಸತಿ ಶಾಲೆಗಳಲ್ಲಿ ೨೦೧೧–೧೨ನೇ ಸಾಲಿನಿಂದ ನೇಮಕಗೊಂಡಿರುವ ನೌಕರರಿಗೆ ಒದಗಿಸಲಾಗುತ್ತಿದೆಯೇ ;

(ಆ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಮೊರಾರ್ಜಿ ದೇಸಾಯಿ / ಏಕಲವ್ಯ / ಕಿತ್ತೂರು ರಾಣಿ ಚೆನ್ನಮ್ಮ ಮುಂತಾದ ವಸತಿ ಶಾಲೆಗಳಲ್ಲಿ ಒಟ್ಟು ಎಷ್ಟು ಸಿಬ್ಬಂದಿ ಖಾಯಂ ಆಗಿ ಮತ್ತು ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ ; ಈ ನೌಕರರುಗಳಿಗೆ ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳ ನಿಯಮ ಅನ್ವಯಿಸಲಾಗಿದೆಯೇ ; (ವಿವರ ನೀಡುವುದು)

(ಇ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಮೊರಾರ್ಜಿ ದೇಸಾಯಿ / ಏಕಲವ್ಯ / ಕಿತ್ತೂರು ರಾಣಿ ಚೆನ್ನಮ್ಮ ಮುಂತಾದ ವಸತಿ ಶಾಲೆಗಳ ಸಿಬ್ಬಂದಿಗೆ ಒಂದು ವೇಳೆ ಕೆ.ಜಿ.ಐ.ಡಿ ಮತ್ತು ಇ.ಜಿ.ಐ.ಎಸ್ ಸೌಲಭ್ಯ ಒದಗಿಸಿದ್ದಲ್ಲಿ ಸರ್ಕಾರಕ್ಕೆ ಅಥವಾ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಯಾವುದೇ ಹಣಕಾಸಿನ ಹೊರೆ ಆಗಲಿದೆಯೇ ;

(ಈ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಶಾಲೆಗಳ ಸಿಬ್ಬಂದಿಗೆ ಕೆ.ಜಿ.ಐ.ಡಿ ಮತ್ತು ಇ.ಜಿ.ಐ.ಎಸ್ ಸೌಲಭ್ಯ ಒದಗಿಸುವಲ್ಲಿ ಸರ್ಕಾರ / ಇಲಾಖೆ ಕ್ರಮ ಕೈಗೊಳ್ಳುವುದೇ ?

## ವಿಜ್ಞಾನ–ತಂತ್ರಜ್ಞಾನ ಇಲಾಖೆಯ ೨೦೧೬–೧೭ನೇ ಸಾಲಿನ ಅನುದಾನ ಬಳಕೆಯ ಕುರಿತು

**ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ):–**

೧೯೧೨ (೧೬೯೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜ್ಞಾನ ತಂತ್ರಜ್ಞಾನ ಇಲಾಖೆಯಡಿ ೨೦೧೬–೧೭ನೇ ಸಾಲಿನ ಬಜೆಟ್‌ನಲ್ಲಿ ನಿಗದಿಪಡಿಸಿದ ಅನುದಾನ ಎಷ್ಟು ;

(ಆ) ಈ ಇಲಾಖೆಯ ಅನುದಾನದಲ್ಲಿ VGST, KSTePS, KSTA, KRVP, KSCST, ಮುಂತಾದ ಅಂಗ ಸಂಸ್ಥೆಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಇಲಾಖೆಯಿಂದ ವಿವಿಧ ಅಂಗ ಸಂಸ್ಥೆಗಳಿಗೆ ಬಿಡುಗಡೆ ಮಾಡಿದ ಅನುದಾನದಲ್ಲಿ ಯಾವ – ಯಾವ ಕಾರ್ಯಕ್ರಮಗಳಿಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ; (ವಿವರ ನೀಡುವುದು)

(ಈ) ಅಗಸ್ತ್ಯ ಫೌಂಡೇಷನ್‌ಗೆ ನೀಡಿದ ಅನುದಾನ ಎಷ್ಟು; ಈ ಅನುದಾನವನ್ನು ಯಾವ-ಯಾವ ಕಾರ್ಯಕ್ರಮಗಳಿಗೆ ನೀಡಲಾಗಿದೆ ; (ವಿವರ ನೀಡುವುದು)

(ಉ) ವಿವಿಧ ಅಂಗ ಸಂಸ್ಥೆಗಳಿಗೆ ಬಿಡುಗಡೆ ಮಾಡಿದ ಅನುದಾನದಲ್ಲಿ ಬಳಕೆಯಾಗದೆ ಉಳಿದ ಹಣ ಎಷ್ಟು? (ವಿವರ ನೀಡುವುದು)

## ಸಾಂಕ್ರಾಮಿಕ ರೋಗಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):-**

೧೯೧೩ (೧೭೩೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಎಷ್ಟು ಜನರು ವಿವಿಧ ಸಾಂಕ್ರಾಮಿಕ ರೋಗಗಳ ಸೋಂಕಿನಿಂದ ಬಳಲುತ್ತಿದ್ದಾರೆ ; (ವಿವರ ನೀಡುವುದು)

(ಆ) ಸಾಂಕ್ರಾಮಿಕ ರೋಗಗಳ ಗುಣಲಕ್ಷಣಗಳೇನು ;

(ಇ) ಸಾಂಕ್ರಾಮಿಕ ರೋಗಗಳನ್ನು ಹತೋಟಿಗೆ ತರಲು ಹಾಗೂ ಜನರಿಗೆ ಅರಿವು ಮೂಡಿಸಲು ತೆಗೆದುಕೊಂಡ ಕ್ರಮಗಳೇನು ;

(ಈ) ಸಾಂಕ್ರಾಮಿಕ ರೋಗಗಳ ಚಿಕಿತ್ಸೆಗೆ ವೈದ್ಯಾಧಿಕಾರಿಗಳ ತಂಡ ರಚಿಸಲಾಗಿದೆಯೇ ; (ವಿವರ ನೀಡುವುದು)

(ಉ) ಸಾಂಕ್ರಾಮಿಕ ರೋಗಗಳ ತಡೆಯಲು ಎಲ್ಲಾ ಜಿಲ್ಲೆಗಳ ಜಿಲ್ಲಾಡಳಿತ ತೆಗೆದುಕೊಂಡ ಕ್ರಮಗಳೇನು ;

(ಊ) ಕಳೆದ ೩ ವರ್ಷಗಳಿಂದ ಸಾಂಕ್ರಾಮಿಕ ರೋಗಗಳಿಗೆ ಬಲಿಯಾದವರ ಸಂಖ್ಯೆ ಎಷ್ಟು? (ಜಿಲ್ಲಾವಾರು ವಿವರ ನೀಡುವುದು)

## ದಡಾರ ಮತ್ತು ರುಬೆಲ್ಲಾ ಲಸಿಕೆಯ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೧೪ (೧೭೩೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ದಡಾರ ಮತ್ತು ರುಬೆಲ್ಲಾ ಲಸಿಕೆ ಅಭಿಯಾನದಲ್ಲಿ ಒಟ್ಟು ಎಷ್ಟು ಮಕ್ಕಳಿಗೆ ಲಸಿಕೆ ಹಾಕಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಬಾಕಿ ಉಳಿದ ಮಕ್ಕಳಿಗೆ ಯಾವ ಕಾಲಮಿತಿಯಲ್ಲಿ ಲಸಿಕೆ ಹಾಕಲಾಗುವುದು ;

(ಇ) ಬಾಕಿ ಉಳಿದ ಮಕ್ಕಳಿಗೆ ಲಸಿಕೆ ಹಾಕದಿರಲು ಕಾರಣವೇನು ;

(ಈ) ಮಕ್ಕಳಿಗೆ ಇನ್ನೂ ಲಸಿಕೆ ಹಾಕಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದ ಐ.ಟಿ–ಬಿ.ಟಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೧೫ (೧೭೩೭) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾಹಿತಿ ತಂತ್ರಜ್ಞಾನ ಅಭಿವೃದ್ಧಿ ಕ್ಷೇತ್ರದಲ್ಲಿ ನ್ಯೂ ಏಜ್ ಇನ್‌ಕ್ಯುಬೇಷನ್ ನೆಟ್‌ವರ್ಕ್‌ನಡಿ ಕಾರ್ಯನಿರ್ವಹಿಸುತ್ತಿರುವ ರಾಜ್ಯದ ಸ್ನಾತಕೋತ್ತರ ಮತ್ತು ವೃತ್ತಿಪರ ಕಾಲೇಜುಗಳು ಎಷ್ಟು ; ಅವು ಯಾವ ಯಾವ ಜಿಲ್ಲೆಯಲ್ಲಿವೆ ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಐಟಿ ಪಾರ್ಕ್‌ಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದ ಐಟಿ–ಬಿಟಿ ಕ್ಷೇತ್ರದಲ್ಲಿ ಒಟ್ಟು ಎಷ್ಟು ಬಿಪಿಒ, ಐಟಿ ಮತ್ತು ಇನ್ನಿತರ ಕಂಪನಿಗಳಿವೆ ; ಅವು ಯಾವುವು ;

(ಈ) ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರ ಅಭಿವೃದ್ಧಿಗೆ ಕಳೆದ ಬಜೆಟ್‌ನಲ್ಲಿ ಮೀಸಲಿಟ್ಟ ಅನುದಾನವೆಷ್ಟು ; ಅದರಲ್ಲಿ ಇಲ್ಲಿಯವರೆಗೆ ಎಷ್ಟು ಅನುದಾನ ಖರ್ಚಾಗಿದೆ ; ಬಾಕಿ ಇರುವ ಅನುದಾನವೆಷ್ಟು ; ವ್ಯಯಿಸಿದ ಅನುದಾನವು ಯಾವ ಯಾವ ಕಾರ್ಯಗಳಿಗೆ ಖರ್ಚಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಐಟಿ–ಬಿಟಿ ಕ್ಷೇತ್ರದಲ್ಲಿ ಶೇಕಡ ೫೦ರಷ್ಟು ಅನುದಾನ ಬಳಕೆಯಾಗದೆ ಇರುವುದು ನಿಜವೇ ; ಹಾಗಿದ್ದಲ್ಲಿ, ಕಾರಣವೇನು ;

(ಊ) ಮಾಹಿತಿ ತಂತ್ರಜ್ಞಾನ ರಫ್ತು ವಿಚಾರದಲ್ಲಿ ಕರ್ನಾಟಕ ದೇಶದಲ್ಲಿಯೇ ಮುಂಚೂಣಿಯಲ್ಲಿದ್ದು, ಅನುದಾನ ಬಳಕೆಯಲ್ಲಿ ಹಿಂದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಆರೋಗ್ಯ ವಿಮೆ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೧೬ (೧೭೩೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಯುರ್ವೇದ ಚಿಕಿತ್ಸೆಗೂ ಆರೋಗ್ಯ ವಿಮೆ ಸೌಲಭ್ಯ ಸಿಗಲಿದೆಯೇ ; ಹೌದಾದರೆ, ರಾಜ್ಯದಲ್ಲಿ ಎಷ್ಟು ಆಸ್ಪತ್ರೆಗಳಲ್ಲಿ ಈ ಸೌಲಭ್ಯವಿದೆ ;

(ಆ) ಯಾವ ಯಾವ ಜಿಲ್ಲೆಗಳಲ್ಲಿ ಈ ಆಸ್ಪತ್ರೆಗಳಿವೆ ; (ವಿಳಾಸದೊಂದಿಗೆ ವಿವರ ನೀಡುವುದು)

(ಇ) ಯಾವ ಯಾವ ಖಾಯಿಲೆಗಳಿಗೆ ವಿಮೆ ಸೌಲಭ್ಯವಿದೆ ?

## ಅಲ್ಟ್ರಾ ಸ್ಕ್ಯಾನಿಂಗ್ ಸೆಂಟರ್‌ಗಳು ಮತ್ತು ಅವುಗಳ ನಿಯಂತ್ರಣ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೧೯೧೭ (೧೬೭೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಟ್ರಾ ಸ್ಕ್ಯಾನಿಂಗ್ ಸೆಂಟರ್‌ಗಳೆಷ್ಟು ; ಅವು ಎಲ್ಲೆಲ್ಲಿ ಕಾರ್ಯನಿರ್ವಹಿಸುತ್ತಿವೆ ;

(ಆ) ರೇಡಿಯಾಲಜಿ ತರಬೇತಿ ಹೊಂದಿದ ತಜ್ಞರ ಯಾವ ಯಾವ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ; (ವಿವರ ನೀಡುವುದು)

(ಇ) ಈ ಅಲ್ಟ್ರಾ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಲಿಂಗ ಪತ್ತೆ ಕಾರ್ಯವು ನಡೆಯುತ್ತಿದೆಯೇ ? (ಹಾಗಿದ್ದಲ್ಲಿ ತಾಲ್ಲೂಕುವಾರು ವಿವರ ನೀಡುವುದು)

## ಹಂಪಿ ಪ್ರಾಚೀನ ಸ್ಮಾರಕಗಳ ಸಂರಕ್ಷಣೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೧೯೧೮ (೧೬೭೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯನಗರ ಸಾಮ್ರಾಜ್ಯದ ರಾಜಧಾನಿಯಾದ ಹಂಪಿಯ ಒಟ್ಟು ವಿಸ್ತೀರ್ಣವೆಷ್ಟು ;

(ಆ) ಆ ಪ್ರದೇಶದಲ್ಲಿರುವ ಪ್ರಾಚೀನ ಸ್ಮಾರಕಗಳು ಯಾವುವು ; ಅವುಗಳು ಎಷ್ಟು ವಿಸ್ತೀರ್ಣದ ಪ್ರದೇಶದಲ್ಲಿವೆ ;

(ಇ) ಅವುಗಳ ಸಂರಕ್ಷಣೆಯನ್ನು ಯಾವ ರೀತಿಯಲ್ಲಿ ಮಾಡಲಾಗುತ್ತಿದೆ ; ಸಂರಕ್ಷಣೆಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ನೀಡಿರುವ ಅನುದಾನವೆಷ್ಟು ;

(ಈ) ಆ ಅನುದಾನವನ್ನು ಯಾವ ರೀತಿ ಸದ್ಬಳಕೆ ಮಾಡಿಕೊಳ್ಳಲಾಗಿದೆ ?

## ಹಾಡಿಗಳ ಅಭಿವೃದ್ಧಿ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೯೯೯ (೧೬೭೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜೇನು ಕುರುಬ, ಕಾಡು ಕುರುಬ, ಹಕ್ಕಿ–ಪಿಕ್ಕಿ ಮುಂತಾದ ಪರಿಶಿಷ್ಟ ಪಂಗಡ ಜನಾಂಗದ ಹಾಡಿಗಳು ಎಷ್ಟು ಇವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಡಿಗಳಲ್ಲಿ ಇರುವ ಜನಸಂಖ್ಯೆ ಎಷ್ಟು ; (ಹಾಡಿಗಳವಾರು ಮಾಹಿತಿ ನೀಡುವುದು) ಸರ್ಕಾರ ನೀಡಿರುವ ಮೂಲಭೂತ ಸೌಲಭ್ಯಗಳೇನು ? (ಹಾಡಿವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

## ಪ್ರವಾಸೋದ್ಯಮ ಕೇಂದ್ರಗಳು ಮತ್ತು ಅಲ್ಲಿನ ಮೂಲ ಸೌಕರ್ಯಗಳ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೧೯೨೦ (೧೬೭೩) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಪ್ರವಾಸೋದ್ಯಮ ಸ್ಥಳಗಳು ಯಾವುವು ; ಆ ಸ್ಥಳಗಳಲ್ಲಿ ಪ್ರವಾಸಿಗರಿಗೆ ಒದಗಿಸಲಾಗಿರುವ ಮೂಲ ಸೌಕರ್ಯಗಳು ಯಾವುವು ; ಅದಕ್ಕಾಗಿ ತಗುಲಿರುವ ವೆಚ್ಚವೆಷ್ಟು ; ಪ್ರತಿ ಕೇಂದ್ರದಿಂದ ಸರ್ಕಾರ ಗಳಿಸುತ್ತಿರುವ ಆದಾಯವೆಷ್ಟು ; (ಪ್ರತಿ ಪ್ರವಾಸೋದ್ಯಮ ಕೇಂದ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಪ್ರತಿ ಪ್ರವಾಸೋದ್ಯಮ ಕೇಂದ್ರದಲ್ಲಿ ಎಷ್ಟು ಜನರಿಗೆ ತಾತ್ಕಾಲಿಕ ಮತ್ತು ಖಾಯಂ ಉದ್ಯೋಗ ಸೃಷ್ಟಿಸಲಾಗಿದೆ ? (ವಿವರ ನೀಡುವುದು)

## ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಜನಾಂಗದ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೧೯೨೧ (೧೬೭೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವರ ಅಭಿವೃದ್ಧಿಗೆ ೨೦೧೩-೧೪, ೨೦೧೪-೨೦೧೫, ೨೦೧೫-೨೦೧೬ ಮತ್ತು ೨೦೧೬-೨೦೧೭ನೇ ಸಾಲುಗಳಲ್ಲಿ ಸರ್ಕಾರ ನೀಡಿರುವ ಅನುದಾನ ಎಷ್ಟು; ಆ ಅನುದಾನವನ್ನು ಯಾವ ಯಾವ ಉದ್ದೇಶಕ್ಕಾಗಿ ಯಾವ ಯಾವ ಫಲಾನುಭವಿಗಳಿಗೆ ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇವರ ಅಭಿವೃದ್ಧಿಗೆ ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟೆಷ್ಟು ಜಮೀನನ್ನು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದವರಿಗೆ ನೀಡಲಾಗಿದೆ ಹಾಗೂ ಯಾವ ಪ್ರಮಾಣದಲ್ಲಿ ಯಾವ ಮೊತ್ತದಲ್ಲಿ ಆ ಜಮೀನುಗಳನ್ನು ಕ್ರಯ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಜನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವಕ ಯುವತಿಯರು ಡಾಕ್ಟರ್, ವಕೀಲರು, ಇಂಜಿನಿಯರ್ ಹಾಗೂ ಕರ್ನಾಟಕ ಆಡಳಿತ ಸೇವೆ, ಭಾರತೀಯ ಆಡಳಿತ ಸೇವೆ, ಭಾರತೀಯ ಪೊಲೀಸ್ ಸೇವೆ ಅಧಿಕಾರಿಗಳಾಗಿ ತೇರ್ಗಡೆ / ಆಯ್ಕೆಯಾಗಿದ್ದಾರೆ, ಇವರುಗಳ ಸೌಲಭ್ಯಗಳಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳೇನು ;

(ಉ) ಇವರುಗಳು ವೃತ್ತಿ ಜೀವನ ಪ್ರಾರಂಭಿಸಲು ಸರ್ಕಾರದಿಂದ ಅನುದಾನ / ಸೌಲಭ್ಯ ನೀಡಲಾಗಿದೆಯೇ ; ನೀಡಿದ್ದರೆ, ತಾಲ್ಲೂಕುವಾರು ವಿವರ ನೀಡುವುದು?

## ದಲಿತರಿಗೆ ಸಾಮಾಜಿಕ ಬಹಿಷ್ಕಾರ ಹಾಕಿರುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೯೨೨ (೧೫೬೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿಕ್ಕಬಳ್ಳಾಪುರ ಜಿಲ್ಲೆ ಚಿಕ್ಕಬಳ್ಳಾಪುರ ತಾಲ್ಲೂಕಿನ ಮಂಚನಬೆಲೆ ಗ್ರಾಮದ ದಲಿತರಿಗೆ ಸಾಮಾಜಿಕ ಬಹಿಷ್ಕಾರ ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸಾಮಾಜಿಕ ಬಹಿಷ್ಕಾರಕ್ಕೆ ಒಳಪಟ್ಟ ಕುಟುಂಬದವರಿಗೆ ಸರ್ಕಾರದಿಂದ ಪರಿಹಾರ ಕಲ್ಪಿಸಲಾಗಿದೆಯೇ;

(ಇ) ಈ ಸಾಮಾಜಿಕ ಬಹಿಷ್ಕಾರಕ್ಕೆ ಪ್ರಚೋದನೆ ನೀಡಿದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗಿದೆಯೇ;

(ಈ) ರಾಜ್ಯದಲ್ಲಿ, ಇಂತಹ ಸಾಮಾಜಿಕ ಬಹಿಷ್ಕಾರದಿಂದ ನಲುಗಿದ ಸಮುದಾಯದವರಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಉ) ಸಾಮಾಜಿಕ ಬಹಿಷ್ಕಾರದಂತಹ ಹೀನಕೃತ್ಯ ಕೊನೆಗಾಣಿಸಲು ಸರ್ಕಾರ ಯಾವ ರೀತಿಯ ಕಾನೂನನ್ನು ಜಾರಿಗೆ ತರುತ್ತದೆ?

## ಅಂತರ್‌ಜಾತಿ ವಿವಾಹ ಪ್ರೋತ್ಸಾಹಧನ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೨೩ (೧೫೬೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಂತರ್‌ಜಾತಿ ವಿವಾಹಕ್ಕೆ ಪ್ರೋತ್ಸಾಹಧನ ನೀಡುವ ಆದೇಶ ಎಂದಿನಿಂದ ಜಾರಿಗೆ ಬಂದಿರುತ್ತದೆ;

(ಆ) ಹಾಗಿದ್ದಲ್ಲಿ, ಅಂತರ್‌ಜಾತಿ ವಿವಾಹಕ್ಕೆ ನಿಗಧಿಪಡಿಸಿರುವ ಪ್ರೋತ್ಸಾಹಧನ ಎಷ್ಟು ;

(ಇ) ಕಳೆದ ೩ ವರ್ಷಗಳಿಂದ ಅಂತರ್‌ಜಾತಿ ವಿವಾಹಕ್ಕೆ ಪ್ರೋತ್ಸಾಹಧನ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಆ ಪೈಕಿ ವಿಲೇವಾರಿ

ಮಾಡಲಾದ ಅರ್ಜಿಗಳ ಸಂಖ್ಯೆ ಎಷ್ಟು; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಪ್ರೋತ್ಸಾಹಧನ ನೀಡಲು ವಿಳಂಬಕ್ಕೆ ಕಾರಣಗಳೇನು?

## ಹೋಬಳಿಗೊಂದು ವಸತಿ ಶಾಲೆ ತೆರೆಯುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೨೪ (೧೫೬೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನ ಆಯವ್ಯಯಗಳಲ್ಲಿ ಹೋಬಳಿಗೊಂದು ವಸತಿ ಶಾಲೆ ಪ್ರಾರಂಭಿಸಲಾಗುವುದೆಂದು ಘೋಷಣೆ ಮಾಡಲಾಗಿದೆಯೇ;

(ಆ) ಹಾಗಿದ್ದಲ್ಲಿ, ಎಷ್ಟು ಹೋಬಳಿಗೊಂದು ವಸತಿ ಶಾಲೆ ಪ್ರಾರಂಭಿಸಲಾಗಿದೆ;

(ಇ) ಎಲ್ಲಾ ಹೋಬಳಿಗಳಲ್ಲೂ ವಸತಿ ಶಾಲೆ ತೆರೆಯಲು ಇಲಾಖೆಗೆ ಎಷ್ಟು ಕಾಲಾವಕಾಶ ಬೇಕಾಗುತ್ತದೆ; ಈ ಕಾರ್ಯಕ್ರಮಕ್ಕೆ ಮೀಸಲಿಟ್ಟಿರುವ ಹಣ ಎಷ್ಟು ?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕಾರ್ಯಕ್ರಮಗಳ ಅನುಷ್ಠಾನ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೨೫ (೧೫೬೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಾರಿಯಲ್ಲಿರುವ ಕಾರ್ಯಕ್ರಮಗಳು ಯಾವುವು;

(ಆ) ಇವುಗಳಲ್ಲಿ ಎಸ್.ಸಿ.ಪಿ./ಟಿ.ಎಸ್.ಪಿ. ಅಡಿಯಲ್ಲಿ ಬರುವ ಕಾರ್ಯಕ್ರಮಗಳು ಯಾವುವು;

(ಇ) ೨೦೧೬-೧೭ನೇ ಸಾಲಿನಲ್ಲಿ ಎಸ್.ಸಿ.ಪಿ./ಟಿ.ಎಸ್.ಪಿ. ಅಡಿಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ; ಅವುಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ;

(ಈ) ಇಲಾಖೆಯ ಒಟ್ಟು ಬಜೆಟ್ ಹಣದಲ್ಲಿ ಎಸ್.ಸಿ.ಪಿ./ಟಿ.ಎಸ್.ಪಿ. ಅಡಿಯಲ್ಲಿ ಶೇ. ೨೪.೧೦ರಷ್ಟು ಹಣ ಖರ್ಚು ಮಾಡಲಾಗಿದೆಯೇ; ಉಳಿದಿರುವ ಹಣ ಎಷ್ಟು; ಖರ್ಚು ಮಾಡದೆ ಬಾಕಿ ಉಳಿದಿರುವುದಕ್ಕೆ ಕಾರಣಗಳೇನು ?

## ಬೀದರ್ ಜಿಲ್ಲೆಯ ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಅನುದಾನದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೨೬ (೧೬೭೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಗೆ ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ೨೦೧೬-೨೦೧೭ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನ ಸಮರ್ಪಕವಾಗಿ ಬಳಕೆಯಾಗಿದೆಯೇ; ಇಲ್ಲದಿದ್ದಲ್ಲಿ ಕಾರಣಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಅನುದಾನ ಕೋರಿ ಪ್ರಸ್ತಾವನೆ ಬಂದಿದ್ದರೂ ಅನುದಾನ ಬಿಡುಗಡೆಗೆ ವಿಳಂಬವಾಗಲು ಕಾರಣಗಳೇನು ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ವಸತಿ ನಿಲಯಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೨೭ (೧೬೭೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಅವು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಈ ವಿದ್ಯಾರ್ಥಿ ನಿಲಯಗಳಲ್ಲಿ, ಅಗತ್ಯ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಇದುವರೆಗೂ ಬಿಡುಗಡೆ ಮಾಡಿದ ಹಾಗೂ ವೆಚ್ಚ ಮಾಡಿರುವ ಮೊತ್ತ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೨೮ (೧೬೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಮೇಲ್ದರ್ಜೆಗೇರಿಸಲಾಗುವುದು; ಇದಕ್ಕೆ ತಗಲುವ ಖರ್ಚು ಎಷ್ಟು;

(ಇ) ಈ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸಿಬ್ಬಂದಿಗಳ ನೇಮಕ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಭಾಗ್ಯಲಕ್ಷ್ಮೀ ಬಾಂಡ್ ವಿತರಣೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೨೯ (೧೬೭೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ಹಾಗೂ ೨೦೧೬–೨೦೧೭ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಭಾಗ್ಯಲಕ್ಷ್ಮೀ ಬಾಂಡ್ ಯೋಜನೆಗಾಗಿ ಒದಗಿಸಲಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಈ ಯೋಜನೆಯಡಿ ಫಲಾನುಭವಿಗಳಿಗೆ ವಿತರಿಸಲಾದ ಬಾಂಡ್‌ಗಳ ಸಂಖ್ಯೆ ಎಷ್ಟು ; ಹಾಗೂ ವಿತರಿಸಬೇಕಾಗಿರುವ ಬಾಂಡ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಭಾಗ್ಯಲಕ್ಷ್ಮೀ ಬಾಂಡ್‌ಗಳ ವಿತರಣೆ ಕಾರ್ಯವು ವಿಳಂಬವಾಗಲು ಕಾರಣಗಳೇನು ?

## ಕೊಡಗು ಜಿಲ್ಲೆಯ ಸಮಾಜ ಕಲ್ಯಾಣ ವಸತಿ ನಿಲಯಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):-**

೧೯೩೦ (೧೭೨೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಸಲಾಗುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು; ಸದರಿ ವಸತಿ ನಿಲಯಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ಹಾಗೂ ಬಾಡಿಗೆ ಕಟ್ಟಡಗಳಲ್ಲಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ೨೦೧೨-೧೩ ರಿಂದ ಇಲ್ಲಿಯವರೆಗೆ, ಸದರಿ ವಸತಿ ನಿಲಯಗಳಿಗೆ ಹೊಸದಾಗಿ ಎಷ್ಟು ಕಟ್ಟಡಗಳನ್ನು ನಿರ್ಮಿಸಲಾಗಿದೆ; ಹಾಗೂ ಮುಂದಿನ ಆರ್ಥಿಕ ವರ್ಷದಲ್ಲಿ ಎಷ್ಟು ಕಟ್ಟಡಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ;

(ಇ) ಸದರಿ ವಸತಿ ನಿಲಯಗಳಲ್ಲಿ ಕಾರ್ಯನಿರ್ವಹಿಸಲು ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ/ಗುತ್ತಿಗೆ ನೌಕರರೆಷ್ಟು ?

# ಕೊಡಗು ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಯೋಜನೆಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):-**

೧೯೩೧ (೧೭೨೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಇಲಾಖೆಯಿಂದ ರೂಪಿಸಿರುವ ವಿವಿಧ ಯೋಜನೆ/ಕಾರ್ಯಕ್ರಮಗಳೇನು; (ಎಲ್ಲಾ ಯೋಜನೆಗಳ/ ಕಾರ್ಯಕ್ರಮಗಳ ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಯೋಜನೆಗಳಿಗೆ ಸಂಬಂಧಿಸಿದಂತೆ ಪ್ರಸಕ್ತ ಸಾಲಿನಲ್ಲಿ ಕೊಡಗು ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು; (ತಾಲ್ಲೂಕುವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಯೋಜನೆಗಳಿಗೆ ಸಂಬಂಧಿಸಿದಂತೆ ೨೦೧೦-೧೧ ರಿಂದ ೨೦೧೫-೧೬ ರವರೆಗೆ ಕೊಡಗು ಜಿಲ್ಲೆಗೆ ಬಿಡುಗಡೆಯಾದ ಅನುದಾನದಲ್ಲಿ ಕೈಗೊಂಡಿರುವ ಯೋಜನೆಗಳೇನು; ಅನುಷ್ಠಾನಗೊಳಿಸಿರುವ ಕಾಮಗಾರಿಗಳಾವುವು;

(ಈ) ಈ ವರ್ಗಗಳ ಶ್ರೇಯೋಭಿವೃದ್ಧಿಗಾಗಿ ಇಲಾಖೆ ಈ ಅವಧಿಯಲ್ಲಿ ವಿವಿಧ ಯೋಜನೆಗಳ ಅಡಿ ಕೊಡಗು ಜಿಲ್ಲೆಯಲ್ಲಿ ನೀಡಿರುವ ಸಹಾಯಧನವೆಷ್ಟು ? (ವಿವರ ನೀಡುವುದು)

## ಕೊಡಗು ಜಿಲ್ಲೆಯ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೩೨ (೧೭೨೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಆಸ್ಪತ್ರೆಗಳಿಗೆ ಮಂಜೂರಾದ ವಿವಿಧ ಶ್ರೇಣಿಯ ಹುದ್ದೆಗಳ ಸಂಖ್ಯೆ ಎಷ್ಟು ; (ಶ್ರೇಣಿವಾರು ವಿವರ ನೀಡುವುದು)

(ಇ) ಸದರಿ ಮಂಜೂರಾದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಈ) ಸಾರ್ವಜನಿಕರಿಗೆ ಉತ್ತಮ ಸೇವೆ ನೀಡುವ ಸಲುವಾಗಿ ಖಾಲಿ ಇರುವ ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಗೂ ಅದಕ್ಕಾಗಿ ನಿಗದಿಪಡಿಸಿರುವ ಕಾಲಮಿತಿ ಏನು?

## ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನ/ಜೈವಿಕ ತಂತ್ರಜ್ಞಾನವನ್ನು ಕೆಳಹಂತದ ನಗರಗಳಿಗೆ ವಿಸ್ತರಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೩೩ (೧೭೨೪) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನವನ್ನು ದ್ವಿತೀಯ ಹಾಗೂ ತೃತೀಯ ಹಂತದ ನಗರಗಳಿಗೆ ವಿಸ್ತರಿಸಿ, ಉದ್ಯೋಗ ಸೃಜನೆ ಮಾಡಲು ಸರ್ಕಾರ ರೂಪಿಸಿರುವ ಯೋಜನೆ/ ಕಾರ್ಯಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಕ್ಷೇತ್ರದಲ್ಲಿ ಈ ಹಂತದ ನಗರಗಳಲ್ಲಿ ಸ್ಟಾರ್ಟ್ ಅಪ್ ಉದ್ದಿಮೆಗಳನ್ನು ಪ್ರಾರಂಭಿಸಲು ಎಷ್ಟು ನವೋದ್ಯಮಿಗಳು ಅರ್ಜಿ ಸಲ್ಲಿಸಿ ಆಸಕ್ತಿ ತೋರಿರುತ್ತಾರೆ; (ನಗರಗಳವಾರು ಸಂಪೂರ್ಣ ವಿವರ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಜೈವಿಕ ತಂತ್ರಜ್ಞಾನದ ಉದ್ದಿಮೆಗಳನ್ನು ಸ್ಥಾಪಿಸಲು ಅವಕಾಶಗಳಿರುವುದರಿಂದ, ಆ ದಿಶೆಯಲ್ಲಿ ಸರ್ಕಾರ ರೂಪಿಸಿರುವ ವಿಶೇಷ ಕಾರ್ಯಕ್ರಮ/ಯೋಜನೆಗಳೇನು ? (ವಿವರ ನೀಡುವುದು)

## ಕಲಬುರಗಿಯಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಪ್ರಾದೇಶಿಕ ಕಛೇರಿ ಸ್ಥಾಪಿಸುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೩೪ (೧೭೨೨) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಲ್ಲಿರುವ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಪ್ರಾದೇಶಿಕ ಕಛೇರಿಯನ್ನು ಕಲಬುರಗಿಯಲ್ಲಿ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಕಲಬುರಗಿಯಲ್ಲಿ ಪ್ರಾದೇಶಿಕ ಕಛೇರಿ ಪ್ರಾರಂಭಿಸುವುದರಿಂದ, ಹೈದರಾಬಾದ್-ಕರ್ನಾಟಕ ಪ್ರದೇಶದ ವೈದ್ಯಕೀಯ, ದಂತ ಸೇರಿದಂತೆ ಇನ್ನಿತರ ವೈದ್ಯಕೀಯ ಕಾಲೇಜುಗಳಿಗೆ ಅನುಕೂಲವಾಗಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕಛೇರಿಗಾಗಿ ಕಲಬುರಗಿಯಲ್ಲಿ ಜಮೀನು ಸ್ವಾಧೀನಪಡಿಸಿಕೊಳ್ಳಲಾಗಿದೆಯೇ; (ವಿವರ ನೀಡುವುದು)

(ಈ) ಸದರಿ ಪ್ರಸ್ತಾವನೆ ಸರ್ಕಾರದ ಮುಂದಿದ್ದರೆ, ಪ್ರಾರಂಭಿಸಲಾಗುವುದು ಯಾವಾಗ ?

## 'ಘೋರ್ಪಡೆ ಸೌಧ' ನಿರ್ಮಾಣದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೩೫ (೧೭೨೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಕಂದಾಯ ವಿಭಾಗದಲ್ಲಿ 'ಘೋರ್ಪಡೆ ಸೌಧ'ಗಳನ್ನು ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ನಿರ್ಮಿಸಲಾಗುತ್ತಿದೆಯೇ;

(ಆ) ನಿರ್ಮಿಸಲಾಗುತ್ತಿದ್ದರೆ, ಅದರ ಉದ್ದೇಶವೇನು;

(ಇ) ವಿಭಾಗದ ಆರು ಜಿಲ್ಲೆಗಳಲ್ಲಿ ಎಷ್ಟು ಸೌಧಗಳನ್ನು ನಿರ್ಮಿಸಲಾಗುತ್ತಿದೆ; ಪ್ರತಿಯೊಂದು ಸೌಧಕ್ಕೆ ಎಷ್ಟು ಹಣ ಖರ್ಚು ಮಾಡಲಾಗುತ್ತಿದೆ? (ತಾಲ್ಲೂಕುವಾರು ವಿವರ ನೀಡುವುದು)

# ಐ.ಸಿ.ಪಿ. ಮತ್ತು ಎಸ್.ಟಿ.ಪಿ. ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿ ಬಗ್ಗೆ

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೩೬ (೧೬೯೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಗೆ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಸರ್ಕಾರವು ಬಿಡುಗಡೆ ಮಾಡಿದ ಅನುದಾನದ ಮೊತ್ತವೆಷ್ಟು; (ವಿವರಗಳನ್ನು ನೀಡುವುದು)

(ಆ) ಈ ಅನುದಾನದಲ್ಲಿ ಯಾವ ಯಾವ ಕಾರ್ಯಗಳಿಗೆ ಹಣ ವಿನಿಯೋಗಿಸಲಾಗಿದೆ, ಈ ಯೋಜನೆಯ ಕಾರ್ಯಕ್ರಮಗಳು ಪ್ರಸ್ತುತ ಯಾವ ಹಂತದಲ್ಲಿವೆ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಇ) ರಾಮನಗರ ಜಿಲ್ಲೆಯಲ್ಲಿ ಹಿರಿಯ ನಾಗರೀಕರ ಸಬಲೀಕರಣಕ್ಕಾಗಿ ಕೈಗೊಳ್ಳಲಾದ ಕಾರ್ಯಕ್ರಮಗಳೇನು; ಸರ್ಕಾರದಿಂದ ಬಿಡುಗಡೆಯಾದ ಹಣವೆಷ್ಟು; ಖರ್ಚು ಮಾಡಿದ ಹಣವೆಷ್ಟು; ಖರ್ಚಾಗದೆ ಉಳಿದ ಹಣವೆಷ್ಟು ; ಖರ್ಚಾಗದಿರಲು ಕಾರಣಗಳೇನು? (ತಾಲ್ಲೂಕುವಾರು ಸಂಪೂರ್ಣ ವಿವರಗಳನ್ನು ನೀಡುವುದು)

## ರಾಜ್ಯದಲ್ಲಿರುವ ಹಳೆಯ ಕಟ್ಟಡಗಳನ್ನು ಪಾರಂಪರಿಕ ಕಟ್ಟಡ ಎಂದು ಘೋಷಿಸುವ ಬಗ್ಗೆ

**ಶ್ರೀ ಲಹರ್‌ಸಿಂಗ್ ಸಿರೋಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೩೭ (೧೫೭೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಳೆಯ ಕಟ್ಟಡಗಳನ್ನು ಪಾರಂಪರಿಕ ಕಟ್ಟಡ ಎಂದು ಘೋಷಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಆ) ಪಾರಂಪರಿಕ ಕಟ್ಟಡ ಎಂದು ಘೋಷಿಸಲು ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಬೆಂಗಳೂರು ನಗರದಲ್ಲಿರುವ ಪಾರಂಪರಿಕ ಕಟ್ಟಡಗಳು ಯಾವುವು; (ವಿವರ ನೀಡುವುದು)

(ಈ) ಪಾರಂಪರಿಕ ಕಟ್ಟಡಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉಳಿಸಲು ಅವುಗಳ ನಿರ್ವಹಣೆಯನ್ನು ಯಾವ ರೀತಿ ಮಾಡಲಾಗುತ್ತಿದೆ?

## ಕಲಬುರಗಿ ಜಿಲ್ಲೆಯಲ್ಲಿನ ಮಾಶಾಶನ ಫಲಾನುಭವಿಗಳ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೧೯೩೮ (೧೫೭೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಮಾಸಾಶನ ಸಂಕಷ್ಟದಲ್ಲಿರುವ ಅಶಕ್ತ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಪ್ರಸ್ತುತ ಸಾಲಿನಲ್ಲಿ ಎಷ್ಟು ಕಲಾವಿದರಿಗೆ ಮಾಸಾಶನ ಮಂಜೂರಾತಿ ನೀಡಲಾಗಿದೆ;

(ಇ) ಈಗಿರುವ ಮಾಸಾಶನದ ಮೊತ್ತವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಇಂತಹ ಫಲಾನುಭವಿಗಳನ್ನು ಗುರುತಿಸುವಾಗ ಅನುಸರಿಸುವ ಮಾನದಂಡಗಳೇನು ?

## ಕುಲಬುರಗಿ ಜಿಲ್ಲೆಯಲ್ಲಿನ ಪುಸ್ತಕ ಮಾರಾಟ ಮಳಿಗೆಗಳ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೧೯೩೯ (೧೫೭೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ ಎಷ್ಟು ಪುಸ್ತಕ ಮಾರಾಟ ಮಳಿಗೆಗಳನ್ನು ಪ್ರಾರಂಭಿಸಲಾಗಿದೆ; ಇಲ್ಲವಾದಲ್ಲಿ, ಸೂಕ್ತ ಕಾರಣ ತಿಳಿಸುವುದು;

(ಆ) ಜಿಲ್ಲೆಯಲ್ಲಿ ಹೊಸದಾಗಿ ಇಂತಹ ಪುಸ್ತಕ ಮಾರಾಟ ಮಳಿಗೆಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ರಾಜ್ಯದಾದ್ಯಂತ ಒಟ್ಟು ಇಂತಹ ಎಷ್ಟು ಪುಸ್ತಕ ಮಾರಾಟ ಮಳಿಗೆಗಳು ಕಾರ್ಯನಿರ್ವಹಿಸುತ್ತಿವೆ ? (ವಿವರ ಒದಗಿಸುವುದು)

# ಆಧಾರ್ ಕಾರ್ಡ್ ಇಲ್ಲದೆ ಇರುವ ಕುಟುಂಬಗಳಿಗೆ ಪಡಿತರ ಸಾಮಾಗ್ರಿಗಳನ್ನು ನೀಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೯೪೦ (೧೭೧೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆಧಾರ್ ಕಾರ್ಡ್ ಇಲ್ಲದೇ ಇರುವ ಕುಟುಂಬಗಳಿಗೆ ಪಡಿತರ ಸಾಮಾಗ್ರಿಗಳನ್ನು ವಿತರಿಸಲಾಗುವುದೇ ; ಇಲ್ಲದೇ ಇದ್ದಲ್ಲಿ, ಕಾರಣವೇನು ; ಆಧಾರ್ ಕಾರ್ಡ್ ಕಡ್ಡಾಯಗೊಳಿಸುವ ಉದ್ದೇಶವೇನು ;

(ಆ) ಆಧಾರ್ ಕಾರ್ಡ್‌ಗಳಿಲ್ಲದೆ ಇತರೆ ದಾಖಲೆಯಿಂದ ಪಡಿತರ ಚೀಟಿ ನೀಡಲು ಇಲಾಖೆಗೆ ಇರುವ ತೊಂದರೆಗಳೇನು;

(ಇ) ರಾಜ್ಯದಲ್ಲಿರುವ ಒಟ್ಟು ಬಿ.ಪಿ.ಎಲ್., ಎ.ಪಿ.ಎಲ್. ಮತ್ತು ಅಂತ್ಯೋದಯ ಇನ್ನಿತರೆ ಕಾರ್ಡುದಾರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಕೂಪನ್‌ಗಳ ಮೂಲಕ ಪಡಿತರ ಸಾಮಗ್ರಿಗಳನ್ನು ನೀಡುವುದನ್ನು ನಿಲ್ಲಿಸಲಾಗಿದೆಯೇ; ನಿಲ್ಲಿಸಿದ್ದಲ್ಲಿ, ಕಾರಣವೇನು ? (ವಿವರ ನೀಡುವುದು)

## ರಾಜ್ಯದ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಉನ್ನತೀಕರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೯೪೧ (೧೭೧೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ ರಲ್ಲಿ ರಾಜ್ಯದ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಉನ್ನತೀಕರಿಸಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳಾವುವು; (ವಿವರ ನೀಡುವುದು)

(ಆ) ರಾಜ್ಯದ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರುಗಳು ನೇಮಕವಾಗಿರುವುದಿಲ್ಲ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ವೈದ್ಯರುಗಳ ಕೊರತೆಯನ್ನು ನೀಗಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಈ) ವೈದ್ಯರುಗಳನ್ನು ಯಾವ ಆಧಾರದಲ್ಲಿ ನೇಮಿಸಲಾಗುತ್ತದೆ; ಅವರಿಗೆ ನೀಡುವ ವೇತನ ಎಷ್ಟು ;

(ಉ) ಗ್ರಾಮೀಣ ಭಾಗದಲ್ಲಿ ವೈದ್ಯರುಗಳ ಕೊರತೆಯನ್ನು ನೀಗಿಸಲು ಇಲಾಖೆ ಹಾಕಿಕೊಂಡಿರುವ ಮಾರ್ಗಸೂಚಿಗಳಾವುವು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೯೪೨ (೧೭೧೭) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಗೆ ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಇಲಾಖೆ ಸ್ಥಳ ನಿಗದಿಗೊಳಿಸಲು ಇಲಾಖೆಯ ಮುಂದಿರುವ ಪ್ರಸ್ತಾವನೆಗಳಾವುವು;

(ಆ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ; ಇದರಲ್ಲಿ ಪ್ರವೇಶ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಎಂ.ಬಿ.ಬಿ.ಎಸ್. ಪದವಿ ಪಡೆಯಲು ಸರ್ಕಾರ ಒಬ್ಬ ವಿದ್ಯಾರ್ಥಿಯ ಹಿಂದೆ ಖರ್ಚು ಮಾಡುತ್ತಿರುವ ಹಣ ಎಷ್ಟು ; (ವಿವರ ನೀಡುವುದು)

(ಈ) ವೈದ್ಯಕೀಯ ಕಾಲೇಜುಗಳಲ್ಲಿ ನಡೆಸುತ್ತಿರುವ ಆಸ್ಪತ್ರೆಗಳಲ್ಲಿ ಉಚಿತವಾಗಿ ಸೇವೆ ನೀಡಬೇಕೆಂಬ ಆದೇಶವನ್ನು ಆಸ್ಪತ್ರೆ ಪಾಲಿಸುತ್ತಿದೆಯೇ; ಇದಕ್ಕೆ ದೂರುಗಳು ಬಂದಿದೆಯೇ? (ವಿವರ ನೀಡುವುದು)

## ಮಂಗಳೂರಿನ ರಂಗಮಂದಿರದ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೯೪೩ (೧೭೨೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರಿನ ರಂಗಮಂದಿರದ ಕಾಮಗಾರಿ ವಿಳಂಬಗೊಳ್ಳಲು ಕಾರಣಗಳೇನು; ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಯಾವಾಗ;

(ಆ) ರಂಗಮಂದಿರ ನಿರ್ಮಾಣಕ್ಕಾಗಿ ಇಲಾಖೆಯಿಂದ ಮೀಸಲಿಟ್ಟ ಅನುದಾನ ಎಷ್ಟು; ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಅಂದಾಜಿಸಲಿರುವ ಮೊತ್ತ ಎಷ್ಟು; ಇದಕ್ಕೆ ತಗಲುವ ಕಾಲಮಿತಿ ಎಷ್ಟು; (ವಿವರ ನೀಡುವುದು)

(ಇ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಇಲಾಖೆಯಿಂದ ರಂಗಮಂದಿರ ಕಟ್ಟಲಾಗಿದೆ; ಸಂಪೂರ್ಣಗೊಂಡ ರಂಗಮಂದಿರಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0316/900 ಪ್ರತಿಗಳು/18–03–2017